ಸಂಪುಟ: 14 Volume ಸಂಚಿಕೆ: 46 Issue ಪುಟಗಳು 08 Pages ಶುಕ್ರವಾರ 22 ಮೇ 2026 ₹4 PRGINO.120927 (RNINO:KARKAN/2011/48371) BDR/054/2026-2027 www.mallammanudi.in mallammanudi@gmail.com 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಧೈರ್ಯ ಅಂದರೆ ಭಯ ಇಲ್ಲದಿರುವುದಲ್ಲ, ಭಯದ ಮೇಲೆ ಜಯ ಸಾಧಿಸುವುದು.

–ನೆಲ್ಸನ್ ಮಂಡೇಲಾ



ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಬೆಂಗಳೂರಿನಲ್ಲಿ ಭೇಟಿ ಮಾಡಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು, ಬೀದರ್ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾದ ಆನಂದ್ ದೇವಪ್ಪ ಹಾಗೂ ಸಂಘದ ಪದಾಧಿಕಾರಿಗಳು ಬೀದರನಲ್ಲಿ ನಡೆದ ರಾಜ್ಯ ಸಮ್ಮೇಳನದ ಗೌರವವನ್ನು ಸಮರ್ಪಿಸಿದರು. ಸಮ್ಮೇಳನಕ್ಕೆ ಅನಿವಾರ್ಯ ಕಾರಣಗಳಿಂದ ಬರಲಾಗಲಿಲ್ಲ ಎಂದ ಅವರು, ಸಮ್ಮೇಳನ ಯಶಸ್ವಿಯಾಗಿ ನಡೆದಿರುವುದಕ್ಕೆ ಅಭಿನಂದನೆ ಸಲ್ಲಿಸಿದರು. ಇದೇ ಸಂದರ್ಭದಲ್ಲಿ ಗಡಿ ಜಿಲ್ಲೆಗಳಲ್ಲಿ ಭಾಷೆ ಉಳಿಸುವ ನಿಟ್ಟಿನಲ್ಲಿ ಮಹತ್ವದ ಪಾತ್ರ ಹೊಂದಿರುವ ಗಡಿ ಜಿಲ್ಲೆಯ ಪತ್ರಿಕೆಗಳಿಗೆ ವಿಶೇಷ ಜಾಹಿರಾತುಗಳನ್ನು ನಿಲ್ಲಿಸಬಾರದು. ಈ ಹಿಂದಿನಂತೆಯೇ ಜಾಹಿರಾತು ಮುಂದುವರಿಸಬೇಕು ಎಂದು ಮನವಿ ಸಲ್ಲಿಸಲಾಯಿತು. ಈ ಬಗ್ಗೆ ಪರಿಶೀಲಿಸುವುದಾಗಿ ಭರವಸೆ ನೀಡಿದರು.

## 21ರಂದು ಭಯೋತ್ಪಾದನಾ ವಿರೋಧಿ ದಿನ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜಗತ್ತಿನಸುಭದ್ರತೆಮತ್ತುಶಾಂತಿಗೆದೊಡ್ಡಕಂಟಕವಾಗಿರುವುದು ಭಯೋತ್ಪಾದನೆ. ಈ ಕಾರಣಕ್ಕಾಗಿ ಭಯೋತ್ಪಾದನೆಯ ಅಪಾಯ ಮತ್ತು ಅದರ ಪರಿಣಾಮದ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸುವ ಸಲುವಾಗಿ ಭಾರತದಲ್ಲಿ ಪ್ರತಿ ವರ್ಷ ಮೇ.21 ರಂದು ರಾಷ್ಟ್ರೀಯ ಭಯೋತ್ಪಾದನಾ ವಿರೋಧಿ ದಿನವನ್ನಾಗಿ ಆಚರಣೆ ಮಾಡಲಾಗುತ್ತದೆ ಎಂದು ಯಾದಗಿರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಹೇಶ ಬಿರಾದಾರ ಅವರು ಹೇಳಿದರು.

ಯಾದಗಿರಿ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಭಾಂಗಣದಲ್ಲಿ ಇಂದು ಭಯೋತ್ಪಾದನಾ ವಿರೋಧಿ ದಿನ ಕುರಿತು ಪ್ರತಿಜ್ಞೆ ವಿಧಿ ಭೋದಿಸಿ ಅವರು ಮಾತನಾಡಿದರು.

ಭಯೋತ್ಪಾದಕರು ಸಾಮಾನ್ಯ ಜನರ ಮನಸ್ಸಿನಲ್ಲಿ



ಭಯವನ್ನು ಸೃಷ್ಟಿಸುತ್ತಾರೆ, ತಮ್ಮ ಪೂರ್ವಗ್ರಹ ಪೀಡಿತ ಮನಸ್ಥಿತಿಯ ಕಾರಣಗಳ ಸಾಕಾರಕ್ಕಾಗಿ ಹಿಂಸೆಯನ್ನೇ ಪ್ರಧಾನವನ್ನಾಗಿರಿಸಿಕೊಂಡು ರಾಷ್ಟದ ಸುಭದ್ರತೆಗೆ ಧಕ್ಕೆ ತರುವಂತಹ, ಅಶಾಂತಿಯನ್ನು ಸೃಷ್ಟಿಸುವುದೇ ಗುರಿಯಾಗಿಸಿಕೊಂಡು ನಾನಾ ವಿಧ್ವಂಸಕ ಕೃತ್ಯಗಳಿಗೆ ಮುಂದಾಗುತ್ತಾರೆ. ಆದ್ದರಿಂದ ಇಂತಹ ಸವಾಲುಗಳಿಗೆ ಸನ್ನದ್ಧರಾಗಿದ್ದುಕೊಂಡು,ಮಾನವೀಯತೆಮತ್ತುಶಾಂತಿಯ ಸಂದೇಶವನ್ನುಪ್ರಚಾರ ಮಾಡುತ್ತಾ ಭಯೋತ್ಪಾದನೆಯ ಚಟುವಟಿಕೆಗಳ ವಿರುದ್ಧ ಹೋರಾಡುವ ಪ್ರಾಮುಖ್ಯತೆಯನ್ನು ಎತ್ತಿ ಹಿಡಿಯಲು ಭಾರತ ಸರ್ಕಾರವು ಪ್ರತಿ ವರ್ಷ ರಾಷ್ಟ್ರೀಯ ಭಯೋತ್ಪಾದನೆ ವಿರೋಧಿ ದಿನವನ್ನು ಆಚರಿಸುವ ಕ್ರಮವನ್ನು ಕೈಗೊಂಡಿದೆ ಎಂದರು.

## ನಗರಗಳ ಅರಣ್ಯಭೂಮಿಗೆ ಬೇಲಿ:ಖಂಡ್ರೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಕಾಂಪಾ ನಿಧಿಯಲ್ಲಿ ಅರಣ್ಯ ಭೂಮಿ ರಕ್ಷಣೆಗೆ ಹಣ ಒದಗಿಸಲು ಅವಕಾಶವಿದ್ದು, ನಗರ ಮತ್ತು ಪಟ್ಟಣದ ಸಮೀಪ ಇರುವ ಕೋಟ್ಯಂತರ ರೂ. ಬೆಲೆ ಬಾಳುವ ಅರಣ್ಯ ಭೂಮಿ ಒತ್ತುವರಿ ಆಗದಂತೆ ಬೇಲಿ ಹಾಕಲು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಅರಣ್ಯಾಧಿಕಾರಿಗಳಿಗೆ ಸೂಚಿಸಿದ್ದಾರೆ.

ಬೆಂಗಳೂರಿನಲ್ಲಿ ಉನ್ನತಾಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಇತ್ತೀಚೆಗೆ ತಾವು ಹಾಸನ ನಗರಕ್ಕೆ ಹೊಂದಿಕೊಂಡಿರುವ ಮಡೆನೂರು ಅರಣ್ಯ ಪ್ರದೇಶಕ್ಕೆ ಭೇಟಿ ನೀಡಿದ್ದು, ಇಲಾಖೆ ಹೆಸರಲ್ಲಿ ಆರ್.ಟಿ.ಸಿ. ಇದ್ದರೂ ಅಲ್ಲಿ ಅರಣ್ಯ ಬೆಳೆಸಿಲ್ಲ. ಹೀಗಾಗಿ ಒತ್ತುವರಿ ನಡೆಯುತ್ತದೆ. ಕೂಡಲೇ ಇಂತಹ ಭೂಮಿ ಗುರುತಿಸಿ ಬೇಲಿಹಾಕಿ, ಸ್ಥಳೀಯ ಪ್ರಭೇದದ ಸಸಿಗಳನ್ನು ನೆಟ್ಟು ನೆಡುತೋಪು ಅಭಿವೃದ್ಧಿಪಡಿಸಿ



ಎಂದು ಸೂಚಿಸಿದರು.

**ಅರಣ್ಯಭೂಮಿಯ ಇಂಡೀಕರಣಕ್ಕೆ ಸೂಚನೆ:** ಸರ್ಕಾರದಿಂದ ಮತ್ತು ಹಿಂದೆ ರಾಜರ ಆಳ್ವಿಕೆ ಕಾಲದಲ್ಲಿ ಅರಣ್ಯ ಎಂದು ಗೆಜೆಟ್ ಅಧಿಸೂಚನೆ ಆಗಿದ್ದರೂ ಅರಣ್ಯ ಸ್ವರೂಪವಿದ್ದರೂ ಇನ್ನೂ ಕೆಲವು ಕಡೆ ಅರಣ್ಯ ಎಂದು ಇಂಡೀಕರಣ ಆಗದೆ, ಆರ್.ಟಿ.ಸಿ.ಯಲ್ಲಿ ಅರಣ್ಯ ಎಂದು ದಾಖಲಾಗದ ಕಾರಣ ಅಕ್ರಮ ಮಂಜೂರಾತಿ, ಒತ್ತುವರಿ ಆಗುತ್ತಿದ್ದು, ಕೂಡಲೇ ಇಂಡೀಕರಣಕ್ಕೆ (ಮ್ಯುಟೇಷನ್) ಕ್ರಮ ವಹಿಸುವಂತೆ ಈಶ್ವರ ಖಂಡ್ರೆ ನಿರ್ದೇಶನ ನೀಡಿದರು.


# ಮಳೆಯ ಆರೆಂಜ್ ಅಲರ್ಟ್

### ಕರಾವಳಿ ಹಾಗೂ ಉತ್ತರ ಕರ್ನಾಟಕದ ಕೆಲವು ಜಿಲ್ಲೆಗಳಲ್ಲಿ ವರುಣನ ಉಪಟಳ: ಇಲಾಖೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯದಲ್ಲಿ ಇಂದಿನಿಂದ (ಶುಕ್ರವಾರದಿಂದ) ಮಳೆ ಭರ್ಜರಿ ಮಳೆಯಾಗಲಿದೆ. ದಕ್ಷಿಣ ಒಳನಾಡು ಅದರಲ್ಲೂ ರಾಜಧಾನಿ ಬೆಂಗಳೂರಲ್ಲಿ ಶುಕ್ರವಾರ ಭಾರಿ ಮಳೆಯ ಆರೆಂಜ್ ಅಲರ್ಟ್ ಘೋಷಣೆ ಮಾಡಲಾಗಿದೆ. ಕರಾವಳಿ ಹಾಗೂ ಉತ್ತರ ಕರ್ನಾಟಕದ ಕೆಲವು ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

**ಎಲ್ಲೆಲ್ಲಿ ಮಳೆ?:** ಕರಾವಳಿ ಜಿಲ್ಲೆಗಳಲ್ಲಿ ಇಂದು ಗುಡುಗು ಮಿಂಚಿನೊಂದಿಗೆ ಸಾಧಾರಣ ಮಳೆಯಾಗಲಿದೆ. ಬೆಂಗಳೂರು, ಕೋಲಾರ, ಚಾಮರಾಜನಗರ, ರಾಮನಗರ, ತುಮಕೂರು, ಮಂಡ್ಯ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಹಗುರ ಮಳೆಯಾಗಲಿದೆ. ಯಾದಗಿರಿ, ರಾಯಚೂರು, ಕೊಪ್ಪಳ, ಗದಗ ಕಲಬುರ್ಗಿಯಲ್ಲೂ ಹಗುರದಿಂದ ಸಾಧಾರಣ ಮಳೆಯಾಗಲಿದೆ ಎಂದು ಇಲಾಖೆ ವಿವರಿಸಿದೆ.



**25ರವರೆಗೆ ಎಲ್ಲೆಲ್ಲಿ ಆರ್ಭಟ..?**

- ಕರ್ನಾಟಕದ ಒಳನಾಡಲ್ಲಿ ಮೇ 25 ರವರೆಗೂ ಗುಡುಗು ಮಿಂಚಿನ ಅಲರ್ಟ್
- ದಕ್ಷಿಣ ಒಳನಾಡಲ್ಲಿ ಗುಡುಗು ಮಿಂಚಿನೊಂದಿಗೆ ಬಿರುಗಾಳಿ ಬೀಸಲಿದೆ.
- ಗುಡುಗು, ಮಿಂಚಿನ ಅಲರ್ಟ್ ಮೇ 25 ರವರೆಗೂ ಕರಾವಳಿಗೆ ಅಲರ್ಟ್
- ಬೆಂಗಳೂರಿನ ಕೆಲವೆಡೆ ಭಾರಿ ಮಳೆ, ಗುಡುಗು, ಬಿರುಗಾಳಿಯ ಅಲರ್ಟ್

### ಹಲವೆಡೆ ಭಾರಿ ಮಳೆ

ಮೇ 23 ಶನಿವಾರದಂದು, ತುಮಕೂರು, ಚಿತ್ರದುರ್ಗದ ಹಲವೆಡೆ ಭಾರಿ ಮಳೆ ಅಲರ್ಟ್ ಕೊಡಲಾಗಿದೆ. ಬೆಂಗಳೂರು, ಹಾಸನ ಚಿಕ್ಕಬಳ್ಳಾಪುರ, ಕೋಲಾರ, ರಾಮನಗರ, ಮೈಸೂರು ಸುತ್ತಮುತ್ತ, ಶಿವಮೊಗ್ಗ, ದಾವಣಗರೆ, ವಿಜಯನಗರದಲ್ಲಿ ಬಿರುಗಾಳಿಯೊಂದಿಗೆ ಸಾಧಾರಣ ಮಳೆ ಮುನ್ಸೂಚನೆ ಇದೆ. ಪ್ರಯಾಣಿಕರು, ರೈತರು ಎಚ್ಚರದಿಂದರಬೇಕು ಎಂದಿದೆ ಇಲಾಖೆ.

### ರಾಜ್ಯದ ಇತರೆಡೆ ಹಗುರ ಮಳೆ

ಮೇ 22 ರಂದು ಕರಾವಳಿ, ಬೆಳಗಾವಿ, ಬೀದರ್, ಕಲ್ಬುರ್ಗಿ ಸೇರಿದಂತಂತೆ ಕೋಲಾರ, ಬೆಂಗಳೂರು ನಗರ, ಗ್ರಾಮಾಂತರ, ತುಮಕೂರು, ಚಿಕ್ಕಬಳ್ಳಾಪುರ, ರಾಮನಗರ ಜಿಲ್ಲೆಗಳ ಒಂದೆ–ರಡು ಕಡೆ ಅಂದರೆ ಶೇ.25 ಕ್ಕಿಂತ ಕಡಿಮೆ ಭಾಗಗಳಲ್ಲಿ ಭಾರಿ ಮಳೆ ಅಲರ್ಟ್ ಕೊಡಲಾಗಿದೆ. ರಾಜ್ಯದ ಇತರೆಡೆ ಹಗುರ ಮಳೆಯಾಗಲಿದೆ ಎಂದು ಇಲಾಖೆ ಸೂಚಿಸಿದೆ.

### ಬಿರುಗಾಳಿ,ಗುಡುಗು!ವಾಯುಭಾರ ಕುಸಿತ?

ದಕ್ಷಿಣ ಒಳನಾಡಲ್ಲಿ ಭಾನುವಾರವೂ ಭಾರಿಮಳೆ ಮುನ್ಸೂಚನೆ ಇದ್ದು ಪ್ರಮುಖವಾಗಿ, ತುಮಕೂರು, ಮಂಡ್ಯ, ಹಾಸನಕ್ಕೆ ಅಲರ್ಟ್ ಕೊಡಲಾಗಿದೆ. ಉಳಿದೆಡೆ ಬಿರುಗಾಳಿ, ಗುಡುಗಿನೊಂದಿಗೆ ಹಗುರ ಮಳೆಯಾಗಲಿದೆ. ಮುಂದಿನ ಸೋಮವಾರದಿಂದ ರಾಜ್ಯದಾದ್ಯಂತ ಮಳೆ ಪ್ರಮಾಣದಲ್ಲಿ ಕ್ಷೀಣಿಸಲಿದೆ. ಆದರೆ ವಾಯುಭಾರ ಕುಸಿತವಾದರೆ ಕಷ್ಟಸಾಧ್ಯತೆ ಎಂದಿದೆ ಇಲಾಖೆ.



ಮಾನ್ಯ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ನವರು ಇಂದು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಭಯೋತ್ಪಾದನಾ ವಿರೋಧಿ ದಿನ ಆಚರಣೆ ಅಂಗವಾಗಿ ಭಯೋತ್ಪಾದನಾ ವಿರೋಧಿ ದಿನದ ಪ್ರತಿಜ್ಞಾ ವಚನವನ್ನು ಬೋಧನೆ ಮಾಡಿದರು.

### ಆಟೋ ಡಿಕ್ಕಿ ಓರ್ವ ಮರಣ

**ಗುರುಮಠಕಲ್:** ಪಟ್ಟಣದ ಮುಖ್ಯರಸ್ತೆಯ ಎಸ್‌ಬಿಐ ಕ್ರಾಸ್ ಸಮೀಪ ಸೋಮವಾರ ಸಂಜೆ ನಡೆದ ರಸ್ತೆ ಅಪಘಾತದಲ್ಲಿ ವೃದ್ಧ ವ್ಯಕ್ತಿಯೊಬ್ಬರು ಮೃತಪಟ್ಟ ಘಟನೆ ನಡೆದಿದೆ. ಮೃತರನ್ನು ಮಹಮ್ಮದ್ ಗೌಸ್ ಪ್ಯಾರೆ (75) ಎಂದು ಗುರುತಿಸಲಾಗಿದೆ. ಇವರು ರಸ್ತೆ ದಾಟುವ ವೇಳೆ ಆಟೋ ರಿಕ್ಷಾ ಡಿಕ್ಕಿ ಹೊಡೆದ ಪರಿಣಾಮ ಗಂಭೀರವಾಗಿ ಗಾಯಗೊಂಡಿದ್ದರು. ತಕ್ಷಣ ಸ್ಥಳೀಯರು ಅವರನ್ನು ಗುರುಮಠಕಲ್ ಆಸ್ಪತ್ರೆಗೆ ದಾಖಲಿಸಿ ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ಕಲಬುರಗಿಯ ಖಾಸಗಿ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ರಾತ್ರಿ ಮೃತಪಟ್ಟಿದ್ದಾರೆ.

## ಜು.11 ರಂದು ರಾಷ್ಟ್ರೀಯ ಲೋಕ್ ಅದಾಲತ್

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಇವರ ನಿರ್ದೇಶನದಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ಜುಲೈ 11 ರಂದು ಬೆಳಿಗ್ಗೆ 10 ಗಂಟೆಗೆ ನಗರದ ತಾಳೂರು ರಸ್ತೆಯ ಹೊಸ ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿ ರಾಷ್ಟ್ರೀಯ ಲೋಕ್ ಅದಾಲತ್ ನಡೆಯಲಿದೆ.



ಸಾರ್ವಜನಿಕರುತಮ್ಮವ್ಯಾಜ್ಯಪೂರ್ವ,ರಾಜಿಯಾಗಬಹುದಾದ ಅಪರಾಧಿಕ ಪ್ರಕರಣಗಳು, ಚೆಕ್ ಪ್ರಕರಣಗಳು, ಬ್ಯಾಂಕ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪರಿಹಾರ ನ್ಯಾಯಾಧೀಕರಣದ ಪ್ರಕರಣಗಳು, ವೈವಾಹಿಕ ಹಾಗೂ ಕೌಟುಂಬಿಕ ಪ್ರಕರಣಗಳು, ಸಿವಿಲ್ ಪ್ರಕರಣಗಳು ಹಾಗೂ ಇತರೆ ರಾಜಿಯಾಗಬಹುದಾದ ಪ್ರಕರಣಗಳನ್ನು ಜಿಲ್ಲಾ ನ್ಯಾಯಾಲಯದಲ್ಲಿ ನಡೆಯುವ ರಾಷ್ಟ್ರೀಯ ಲೋಕ್ ಅದಾಲತ್ ಮೂಲಕ ಶೀಘ್ರವೇ ಇತ್ಯರ್ಥಗೊಳಿಸಿ ಪರಿಹಾರ ಪಡೆದುಕೊಳ್ಳಲು ಸುವರ್ಣ ಅವಕಾಶವಾಗಿದೆ.

## ವಸತಿ ನಿಲಯ ಪ್ರವೇಶಕ್ಕೆ ಅರ್ಜಿ ಅಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ಸಮಾಜ ಕಲ್ಯಾಣ ಇಲಾಖೆಯ ಹುಮನಾಬಾದ/ಚಿಟಗುಪ್ಪಾ ತಾಲೂಕಿನ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಡಾ. ಬಿ. ಆರ್. ಅಂಬೇಡ್ಕರ್ ಮೆಟ್ರಿಕ್ ಪೂರ್ವ /ಮೆಟ್ರಿಕ ನಂತರ ಬಾಲಕರ/ಬಾಲಕಿಯರ ವಸತಿ ನಿಲಯಗಳ ಪ್ರವೇಶಕ್ಕಾಗಿ ಅರ್ಹ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಆದ್ದರಿಂದ ಆಸಕ್ತ 5ನೇ ತರಗತಿಯಿಂದ 10ನೇ ತರಗತಿಯವರೆಗೆ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳು ತಮ್ಮ ಶಾಲೆಗಳ ಸಮೀಪವಿರುವ ವಸತಿ ನಿಲಯದಲ್ಲಿ ಪ್ರವೇಶಕ್ಕಾಗಿ ಹಾಗೂ ಮೆಟ್ರಿಕ ನಂತರದ ವಸತಿ ನಿಲಯಗಳಿಗೆ ಪಿ.ಯು.ಸಿ. ಪದವಿ, ಹಾಗೂ ತಾಂತ್ರಿಕ್ ಕೋರ್ಸಗಳಲ್ಲಿ ಅಭ್ಯಾಸ ಮಾಡುತ್ತಿರುವ ವಸತಿ ನಿಲಯ ಇಚ್ಛೆವುಳ್ಳ https://swdhmis.karnataka.gov.in/ಪೋರ್ಟಲ್ ಮೂಲಕ ಮೆಟ್ರಿಕ ಪೂರ್ವ ವಸತಿಗಳಿಗೆ ಜೂನ್ 30 ಮತ್ತು ಮೆಟ್ರಿಕ ನಂತರದ ವಸತಿ ನಿಲಯಗಳಿಗೆ ಜುಲೈ 31ರ ವರೆಗೆ ಅರ್ಜಿ ಸಲ್ಲಿಸಬಹುದೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರಿ ಟೈಂಗೆ ಸಿಬ್ಬಂದಿ ಚಕ್ಕರ್, ಸಂಬಳಕ್ಕೆ ಹಾಜರ್..!

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ/ಚಿಟಗುಪ್ಪ

ಸರ್ಕಾರಿ ಸಂಬಳ ಪಡೆಯುವ ಅಧಿಕಾರಿಗಳು ಸಿರಯಾದ ಸಮಯಕ್ಕೆ ಕಚೇರಿಗೆ ಚಕ್ಕರ್ ಕೊಡುತ್ತಾರೆ, ಆದರೆ ಸಂಬಳಕ್ಕೆ ಮಾತ್ರ ಹಾಜರಾಗುತ್ತಾರೆ ಎಂದು ಗ್ರಾಮೀಣ ಪ್ರದೇಶದ ಜನರು ದೂರುತ್ತಾರೆ.

ಕರ್ನಾಟಕ ಸರ್ಕಾರದ ಆದೇಶದಂತೆ ಏಪ್ರಿಲ್, ಮೇ ತಿಂಗಳಲ್ಲಿ ಉರಿ ಬಿಸಿಲಿನ ಹಿನ್ನೆಲೆ ರಾಜ್ಯದ ಎಲ್ಲಾ ಸರ್ಕಾರಿ ಕಚೇರಿಗಳು ಬೆಳಗ್ಗೆ 8 ಗಂಟೆಯಿಂದ ಮಧ್ಯಾಹ್ನ 1:30ರವರೆಗೆ ಕಾರ್ಯನಿರ್ವಹಿಸಬೇಕೆಂದು ಸ್ಪಷ್ಟ ನಿರ್ದೇಶನ ನೀಡಿದೆ. ಆದರೂ ವೆಂಕಟಗಿರಿ ಗ್ರಾ.ಪಂ.ನಲ್ಲಿ ಮಾತ್ರ ಈ ಆದೇಶವನ್ನು ಸಂಪೂರ್ಣವಾಗಿ ನಿರ್ಲಕ್ಷ್ಯ ಮಾಡಲಾಗಿದೆ ಎಂದು ಜನತೆ ಆರೋಪಿಸುತ್ತಾರೆ.

**ಜನರ ಸಮಸ್ಯೆಗೆ ಪರಿಹಾರ ಎಂದು..?**

ಚಿಟಗುಪ್ಪ ತಾಲೂಕ ಕೇಂದ್ರದಲ್ಲಿರುವ ಜೆಸ್ಕಾಂ ಕಚೇರಿಯಲ್ಲಿ ಸಿಬ್ಬಂದಿ ಸರಿಯಾದ ಸಮಯಕ್ಕೆ ಹಾಜರಾದ ಇತಿಹಾಸವೇ ಇಲ್ಲ ಎಂದು ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

**ಪಿಡಿಒ ವಿರುದ್ಧ ಕಿಡಿ:** ನಿವಾರ ಬೆಳಗ್ಗೆ ತಮ್ಮ ವಿವಿಧ ಕೆಲಸ ಕಾರ್ಯಗಳಿಗಾಗಿ ಜನತೆ ವೆಂಕಟಗಿರಿ ಗ್ರಾ.ಪಂ.ನಲ್ಲಿ ಆಗಮಿಸಿದ್ದ ಸಾರ್ವಜನಿಕರಿಗೆ ಶಾಕ್ ಕಾದಿದೆ. ಬೆಳಗ್ಗೆ 9 ಗಂಟೆ ಕಳೆದರೂ ಪಿಡಿಒ ಕೃಷ್ಣ ಎಚ್ ಸೇರಿದಂತೆ ಸಿಬ್ಬಂದಿ ಕಚೇರಿಗೆ ಹಾಜರಾಗದಿರುವುದನ್ನು ಕಂಡು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸರ್ಕಾರದ ನಿಯಮ ಪಾಲನೆ ಮಾಡಬೇಕಾದ ಅಧಿಕಾರಿಗಳೇ ಆದೇಶ ಉಲ್ಲಂಘಿಸಿ ಸಾರ್ವಜನಿಕರನ್ನು ಗಂಟೆಗಳ ಕಾಲ ಕಾಯಿಸುವುದು ಖಂಡನೀಯ ಎಂದು ಗ್ರಾಮಸ್ಥರು ಕಿಡಿಕಾರಿದ್ದರೆ.

### ಸಾರ್ವಜನಿಕರ ಅಸಮಾಧಾನ

ಗಂಗಾವತಿ ತಾಲೂಕು ಗ್ರಾ.ಪಂ. ಪಿಡಿಒ ಶ್ರೀ ಕೃಷ್ಣ ಎಚ್ ಅವರಿಗೆ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾಧಿಕಾರಿ ಎಚ್ಚರಿಕೆ ನೀಡಿ, ಕರ್ತವ್ಯ ಲೋಪದ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಇಲ್ಲವಾದರೆ ಸಾರ್ವಜನಿಕರ ಅಸಮಾಧಾನ ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ ಎಂದು ಜನತೆ ಒತ್ತಾಯಿಸಿದ್ದಾರೆ.

ಆನರ ಸೇವೆಗಾಗಿ ಸರ್ಕಾರ ಪ್ರತಿ ತಿಂಗಳು ಸಂಬಳ ಸರ್ಕಾರದಿಂದ, ಸೇವೆ ಜನರಿಗೆ. ಆದರೆ ಇಲ್ಲಿ ಜನರ ಸಮಯಕ್ಕೂ ಗೌರವ ಇಲ್ಲ, ಸರ್ಕಾರದ ಆದೇಶಕ್ಕೂ ಬೆಲೆ ಇಲ್ಲ. ಅಧಿಕಾರಿಗಳ ಈ ನಿರ್ಲಕ್ಷ್ಯ ಜನರ ಶಾಪಕ್ಕೆ ಗುರಿಯಾಗುವಂತಹದ್ದು.

–ಟಿ. ಮಹೇಶ ನಾಯಕ, ಸ್ಥಳೀಯ ನಿವಾಸಿ




### ತಾಲೂಕ ಜೆಸ್ಕಾಂ ಕಚೇರಿ ಸಿಬ್ಬಂದಿ

ಚಿಟಗುಪ್ಪ ತಾಲೂಕು ಜೆಸ್ಕಾಂ ಕಚೇಯ ಸಿಬ್ಬಂದಿ ಬೆಳಗ್ಗೆ ಸರಿಯಾದ ಸಮಯಕ್ಕೆ ಬರಲ. ಆದರೆ ಮನೆಗೆ ಮಾತ್ರ ಸರಿಯಾದ ಸಮಯಕ್ಕೆ ಹೋಗುತ್ತಾರೆ. ಇವರಿಗೆ ಹೇಳುವರು ಕೇಳುವರು ಯಾರು ಇಲ್ಲದಂತಾಗಿದೆ. ಸರ್ಕಾರ ಕೈ ತುಂಬ ಸಂಬಳ ಕೊಡುತ್ತದೆ. ಆದರೂ ಇವರಿಗೆ ಕಚೇರಿಗೆ ಬಂದು ಸೇವೆ ಸಲ್ಲಿಸಲು ಕಷ್ಟ ಎನ್ನುವ ದೂರು ವ್ಯಾಪಕವಾಗಿದೆ.

ಚಿಟಗುಪ್ಪ ಪಟ್ಟಣ ಸೇರಿದಂತೆ ಗ್ರಾಮೀಣ ಭಾಗದಲ್ಲೂ ವಿದ್ಯುತ್ ಸರಿಯಾದ ಸಮಯಕ್ಕೆ ನೀಡುತ್ತಿಲ್ಲ. ರೈತರಿಗೂ ಸೂಕ್ತವೇಳೆಗೆ ವಿದ್ಯುತ್ ಸಿಗಲ್ಲ. ಇಲ್ಲಿನ ಅಧಿಕಾರಿಗಳು ಬೆಳಗ್ಗೆ 10 ಗಂಟೆಗೆ ವಿದ್ಯುತ್ ಕೊಟ್ಟು ಮಧ್ಯದಲ್ಲಿ 4 ರಿಂದ 5 ಬಾರಿ ವಿದ್ಯುತ್ ಕಡಿತಗೊಳಿಸುತ್ತಾರೆ ಈ ಬಗ್ಗೆ ಮೇಲಾಧಿಕಾರಿಗಳು ಗಮನ ಹರಿಸ ಬರಬೇಕು.

–ಚಿಟಗುಪ್ಪ ತಾಲೂಕು ಗ್ರಾಮೀಣ ರೈತರು

**ಸಿದ್ದರಾಮಯ್ಯ ರಾಜೀನಾಮೆ ನೀಡಬೇಕೆಂದು ರಾಜಣ್ಣ ಬಯಸುತ್ತಿದ್ದಾರೆಯೇ? ಪಕ್ಷಕ್ಕಾಗಿ ಮಾಡಿದ ಕೆಲಸಕ್ಕೆ ಎಂದಿಗೂ 'ಕೂಲಿ' ಕೇಳಿಲ್ಲ: ಡಿ.ಕೆ ಶಿವಕುಮಾರ್**

## ದೇಶದ ಆರ್ಥಿಕ ವ್ಯವಸ್ಥೆಯ ಪ್ರಮುಖ ಆಧಾರವೇ ಪೆಟ್ರೋಲ್

ದೇಶದ ಆರ್ಥಿಕ ವ್ಯವಸ್ಥೆಯ ಪ್ರಮುಖ ಆಧಾರವೇ ಪೆಟ್ರೋಲ್ ಮತ್ತು ಡೀಸೆಲ್ ಪೂರೈಕೆ ವ್ಯವಸ್ಥೆ. ಆದರೆ ಇತ್ತೀಚಿನ ದಿನಗಳಲ್ಲಿ ಕೆಲವೆಡೆ ಪೆಟ್ರೋಲ್ ಹಾಗೂ ಡೀಸೆಲ್ ಪಂಪ್‌ಗಳಲ್ಲಿ ಕೃತಕ ಕೊರತೆ ಸೃಷ್ಟಿಸಿ ಜನರಿಗೆ ತೊಂದರೆ ನೀಡುತ್ತಿರುವ ಬಗ್ಗೆ ಆರೋಪಗಳು ಕೇಳಿಬರುತ್ತಿವೆ. ಇದರಿಂದ ಸಾಮಾನ್ಯ ಜನತೆ, ರೈತರು, ವಾಹನ ಸವಾರರು ಹಾಗೂ ಸಾರಿಗೆ ಕ್ಷೇತ್ರದವರು ಸಂಕಷ್ಟಕ್ಕೆ ಸಿಲುಕುತ್ತಿದ್ದಾರೆ. ಆದ್ದರಿಂದ ಸರ್ಕಾರ ಪೆಟ್ರೋಲ್ ಮತ್ತು ಡೀಸೆಲ್ ಪಂಪ್ ಮಾಲಿಕರ ಮೇಲೆ ಕಟ್ಟುನಿಟ್ಟಿನ ನಿಗಾವಹಿಸುವುದು ಅತ್ಯಾವಶ್ಯಕವಾಗಿದೆ.

## ಸಂಪಾದಕೀಯ

**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**



ಕೆಲವು ಪಂಪ್‌ಗಳಲ್ಲಿ ಇಂಧನ ಸಂಗ್ರಹ ಇದ್ದರೂ ಕೊರತೆ ಎಂಬ ನೆಪದಲ್ಲಿ ಮಾರಾಟ ನಿಲ್ಲಿಸುವುದು, ಹೆಚ್ಚು ಲಾಭಕ್ಕಾಗಿ ಕಾಳಬಜಾರ್ ಮಾಡುವ ಪ್ರಯತ್ನಗಳು ನಡೆಯುತ್ತಿವೆ ಎಂಬ ಅನುಮಾನ ಜನರಲ್ಲಿ ಮೂಡಿದೆ. ಇಂತಹ ಬೆಳವಣಿಗೆಗಳು ಸಾರ್ವಜನಿಕರಲ್ಲಿ ಆತಂಕ ಉಂಟುಮಾಡುತ್ತವೆ. ಸರ್ಕಾರ ತಕ್ಷಣವೇ ಜಿಲ್ಲಾಧಿಕಾರಿಗಳು, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಹಾಗೂ ತೈಲ ಕಂಪನಿಗಳ ಮೂಲಕ ನಿಯಮಿತ ಪರಿಶೀಲನೆ ನಡೆಸಬೇಕು.

ಪಂಪ್‌ಗಳಲ್ಲಿ ಇಂಧನದ ಲಭ್ಯತೆ, ಸಂಗ್ರಹ ಪ್ರಮಾಣ ಮತ್ತು ಮಾರಾಟದ ವಿವರಗಳನ್ನು ಸಾರ್ವಜನಿಕವಾಗಿ ಪ್ರದರ್ಶಿಸುವ ವ್ಯವಸ್ಥೆ ಕಡ್ಡಾಯವಾಗಬೇಕು. ಯಾವುದೇ ಪಂಪ್‌ನಲ್ಲಿ ಕೃತಕ ಕೊರತೆ ಸೃಷ್ಟಿಸಿದರೆ ಅಥವಾ ಗ್ರಾಹಕರಿಗೆ ಅನ್ಯಾಯ ಮಾಡಿದರೆ ಅವರ ಪರವಾನಗಿ ರದ್ದುಪಡಿಸುವ ಮಟ್ಟದ ಕಠಿಣ ಕ್ರಮ ಕೈಗೊಳ್ಳಬೇಕು.

ರೈತರಿಗೆ ಕೃಷಿ ಕಾರ್ಯಗಳಿಗೆ ಡೀಸೆಲ್ ಅತ್ಯಗತ್ಯ. ಇಂತಹ ಸಂದರ್ಭದಲ್ಲಿ ಕೊರತೆ ಉಂಟಾದರೆ ಕೃಷಿ ಚಟುವಟಿಕೆಗಳೇ ಹಿನ್ನಡೆಯಾಗುತ್ತವೆ. ಹಾಗಾಗಿ ಸರ್ಕಾರ ಜನರ ಹಿತದೃಷ್ಟಿಯಿಂದ ಇಂಧನ ಪೂರೈಕೆಯನ್ನು ಸುಗಮವಾಗಿರಿಸಿ, ಪಂಪ್ ಮಾಲಿಕರ ಮೇಲೆ ನಿಗಾ ಬಿಗಿಗೊಳಿಸಬೇಕು. ಜನತೆಗೆ ತೊಂದರೆ ಆಗದಂತೆ ಕ್ರಮ ಕೈಗೊಳ್ಳುವುದು ಸರ್ಕಾರದ ಜವಾಬ್ದಾರಿಯಾಗಿದೆ.

## ಮಳೆಗೆ ಮೂರು ಲಕ್ಷದ ಪಪ್ಪಾಯ ಬೆಳೆ ಭಾರಿ ಹಾನಿ



**ಬೀದರ:** ತಾಲೂಕಿನ ಮಂದಕನಳ್ಳಿ ಗ್ರಾಮದಲ್ಲಿ ಬಿರುಗಾಳಿ ಆಲಿಕಲ್ಲಿನೊಂದಿಗೆ ಬೀದರ್ ತಾಲ್ಲೂಕಿನಲ್ಲಿ ಮಂಗಳವಾರ ಸುರಿದ ಮಳೆಯಿಂದ ಪಪ್ಪಾಯ ಬೆಳೆಗೆ ಭಾರಿ ಹಾನಿಯಾಗಿದೆ. ಮಂದಕನಳ್ಳಿಯಲ್ಲಿ ಐದು ಎಕರೆ ಬೆಳೆದ ಪಪ್ಪಾಯ ಮಳೆಯ ಆರ್ಭಟಕ್ಕೆ ನಲುಗಿದೆ. ಬಿರುಗಾಳಿ ಹಾಗೂ ಆಲಿಕಲ್ಲು ಮಳೆಯ ರಭಸಕ್ಕೆ ಪಪ್ಪಾಯ ಗಿಡದ ಹಣ್ಣು, ಹೂ, ಎಲೆಗಳು ಉದುರಿ ಹೋಗಿವೆ.ಗಿಡಗಳು ಬಾಗಿಕೊಂಡಿವೆ. ಮಂದಕನಳ್ಳಿಯ ತಮ್ಮ ಹೊಲದಲ್ಲಿ ಬೆಳೆದ ಮೂರು ಎಕರೆ ಹಾಗೂ ಬೇರೆ ರೈತರ ಎರಡು ಎಕರೆ ಸೇರಿ ಒಟ್ಟು ಐದು ಎಕರೆ ಪಪ್ಪಾಯ ಮಳೆಯಿಂದ ಹಾಳಾಗಿದೆ. ಡಿಸೆಂಬರ್‌ನಲ್ಲಿ ಪಪ್ಪಾಯ ನಾಟಿ ಮಾಡಿದ್ದೆ ಎರಡು ತಿಂಗಳಲ್ಲಿ ಫಸಲು ಬರುತ್ತಿತ್ತು. ಆದರೆ, ಆಲಿಕಲ್ಲು ಮಳೆ ಬೆಳೆಯನ್ನು ಆಹುತಿ ಪಡೆದಿದೆ. ಮಳೆಯಿಂದ ₹3 ಲಕ್ಷದ ಪಪ್ಪಾಯ ಬೆಳೆ ನಷ್ಟವಾಗಿದೆ ಎಂದು ರೈತ ಚನ್ನಬಸಪ್ಪ ಗೌರಶೆಟ್ಟಿ ತಿಳಿಸಿದರು.

## ಶ್ರೀ ಗಣೇಶ್ವರ ಅವಧೂತರ 30ನೇ ಆಗಮನ ಮಹೋತ್ಸವ

**ಬೀದರ್:** ತಾಲೂಕಿನ ಸುಕ್ಷೇತ್ರ ಕಮರಿಮಠ ಸಂಗೋಳಗಿ ಹಾಲಹಳ್ಳಿ



(ಕೆ) ಗ್ರಾಮದಲ್ಲಿ ಬ್ರಹ್ಮಶ್ರೀ ಸದ್ಗುರು ಶ್ರೀ ಗಣೇಶ್ವರ ಅವಧೂತರ ಕೃಪಾಶೀರ್ವಾದದಿಂದ ಹಾಗೂ ಪರಮ ಪೂಜ್ಯ ಶ್ರೀ ಶರಣಪ್ಪ ಸ್ವಾಮಿಗಳ ಸಾನ್ನಿಧ್ಯದಲ್ಲಿ ಶ್ರೀ ಬ್ರಹ್ಮಶ್ರೀ ಸದ್ಗುರು ಶ್ರೀ ಗಣೇಶ್ವರ ಅವಧೂತರ 30ನೇ ಆಗಮನ ಮಹೋತ್ಸವ ಹಾಗೂ ಪ್ರವಚನ ಕಾರ್ಯಕ್ರಮವು ಮೇ 22 ರಿಂದ (ಇಂದಿನಿಂದ)ಮೇ 26 ರವರೆಗೆ ಅತ್ಯಂತ ವೈಭವದಿಂದ ಜರುಗಲಿದೆ.

ಮೇ 22 (ಶುಕ್ರವಾರ): ಬೆಳಿಗ್ಗೆ 7:00 ಗಂಟೆಗೆ ಧ್ವಜಾರೋಹಣ ನೆರವೇರಲಿದ್ದು, 8:00 ಗಂಟೆಗೆ ಗುರುದೇವರ ರುದ್ರಾಭಿಷೇಕ ಹಾಗೂ ದೇವಿಯ ಮೂರ್ತಿಗೆ ರುದ್ರಾಭಿಷೇಕ ಜರುಗಲಿದೆ. ಸಾಯಂಕಾಲ 5:00 ಗಂಟೆಗೆ ಮಾತೆಯರಿಂದ ಚಂಡಿಕಾ ಹೋಮ ಮತ್ತು ಶಿವಸ್ತುತಿ ನೆರವೇರಲಿದ್ದು, ಸಂಜೆ 6:30 ರಿಂದ 9:30 ರವರೆಗೆ ಪೂಜ್ಯರಿಂದ ಪ್ರವಚನ ಹಾಗೂ ಮಹಾಪ್ರಸಾದ ವಿತರಣೆ ಇರಲಿದೆ. ಮೇ 23 ಮತ್ತು 24: ಈ ದಿನಗಳಲ್ಲಿಯೂ ಬೆಳಿಗ್ಗೆ ಗುರುದೇವರಿಗೆ ರುದ್ರಾಭಿಷೇಕ, ಸಾಯಂಕಾಲ 4:00 ಹಾಗೂ 5:00 ಗಂಟೆಗೆ ಚಂಡಿಕಾ ಹೋಮ, ಪ್ರಾರ್ಥನೆ, ಈಶ್ವರ ಸ್ತುತಿ ಹಾಗೂ ರಾತ್ರಿ ಪೂಜ್ಯರಿಂದ ಪ್ರವಚನ ಮತ್ತು ಮಹಾಪ್ರಸಾದ ಸೇವೆ ನಡೆಯಲಿದೆ.

ಮೇ 25 ರಂದು ಸೋಮವಾರ ಬೆಳಿಗ್ಗೆ 7 ಗಂಟೆಗೆ ರುದ್ರಾಭಿಷೇಕದ ನಂತರ ಸಾಯಂಕಾಲ 4 ಗಂಟೆಗೆ ಚಂಡಿಕಾ ಹೋಮ ಹಾಗೂ ಪ್ರಾರ್ಥನೆ ಜರುಗಲಿದೆ. ಮೇ 26 ಮಹೋತ್ಸವದ ಕೊನೆಯ ದಿನವಾದ ಮಂಗಳವಾರ ಬೆಳಿಗ್ಗೆ 6 ಗಂಟೆಗೆ ರುದ್ರಾಭಿಷೇಕ ನೆರವೇರಲಿದ್ದು, ಮಧ್ಯಾಹ್ನ 3 ಗಂಟೆಗೆ ಶ್ರೀ ಹನುಮಾನ ಮಂದಿರದಿಂದ ಶ್ರೀ ಸದ್ಗುರು ಗಣೇಶ್ವರ ಕಮರಿಮಠದವರೆಗೆ ಅದ್ದೂರಿ ಪಲ್ಲಕ್ಕಿ ಮಹೋತ್ಸವ ಹಾಗೂ ಶೋಭಾಯಾತ್ರೆ ಜರುಗಲಿದೆ.

**ವಿವಿಧ ವಿಷಯಗಳ ಕುರಿತು ಪ್ರವಚನ:** ಮಹೋತ್ಸವದ ಐದೂ ದಿನಗಳ ಕಾಲ ಸಂಜೆ ನಡೆಯುವ ಧಾರ್ಮಿಕ ಸಭೆಯಲ್ಲಿ ಪ್ರವಚನಕಾರರಿಂದ "ಮತಿಗೇ ಮಂಗಳ ವಿವುದಾವುದು ಉತ್ತಮರ ಸಂಘ, ನಿಜಗುಣ ಶಿವಯೋಗಿ","ವಿಮಲ ಮಾನಸದಿಂ ಶುಭ ತೀರ್ಥವುಂಟೆ","ಕೊಟ್ಟದ್ದು ತನಗೆ ಬಚ್ಚಿಟ್ಟದ್ದು ಪರರಿಗೆ", "ಬೆನ್ನು ಬಾಗುವ ಮುನ್ನ ತಲೆಯು ತೂಗುವ ಮುನ್ನ" ಹಾಗೂ ಸಮಾರೋಪದ ದಿನದಂದು "ತದ್ವಿಧಿ ಪ್ರಣಿಪಾತೇನ ಪರಿ ಪ್ರಶ್ನೇನ ಸೇವಾಯಾ" ಎಂಬ ಧಾರ್ಮಿಕ ವಿಷಯಗಳ ಕುರಿತು ಸವಿಸ್ತಾರವಾದ ಪ್ರವಚನ ಜರುಗಲಿದ್ದು, ತದನಂತರ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

# ಬಸವಗಿರಿಯಲ್ಲಿ ಬಸವೋತ್ಸವ: ಪ್ರಭುದೇವ ಸ್ವಾಮಿಜಿ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಅಕ್ಕ ಅನ್ನಪೂರ್ಣತಾಯಿ ಅವರ ದ್ವಿತೀಯ ಸ್ಮರಣೋತ್ಸವ ಅಂಗವಾಗಿ ಲಿಂಗಾಯತ ಮಹಾ ಮಠದ ವತಿಯಿಂದ ಇಲ್ಲಿಯ ಬಸವಗಿರಿಯಲ್ಲಿ ಮೇ 23 ಮತ್ತು 24 ರಂದು ಬಸವೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ಲಿಂಗಾಯತ ಮಹಾ ಮಠದ ಪ್ರಭುದೇವ ಸ್ವಾಮೀಜಿ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿರುವ ಅವರು, ಬಸವಣ್ಣನವರಿಗೆ ಜಂಗಮ ಪ್ರಾಣವಾಗಿದ್ದರೆ, ಅಕ್ಕ ಅನ್ನಪೂರ್ಣತಾಯಿ ಅವರಿಗೆ ಬಸವಣ್ಣನವರೇ ಪ್ರಾಣವಾಗಿದ್ದರು. ಹೀಗಾಗಿ ಅವರು ಬಸವಣ್ಣನವರ ತತ್ವ ಹಾಗೂ ವಚನ ಸಾಹಿತ್ಯದ ಪ್ರಚಾರ ಮತ್ತು ಪ್ರಸಾರಕ್ಕೆ ತಮ್ಮ ಬದುಕು ಸಮರ್ಪಿಸಿಕೊಂಡಿದ್ದರು. ಕಾರಣ, ಅಕ್ಕ ಅವರ ಸ್ಮರಣೋತ್ಸವವನ್ನು ಬಸವೋತ್ಸವ ಆಗಿ ಆಚರಿಸಲಾಗುತ್ತಿದೆ ಎಂದು ತಿಳಿಸಿದರು.

ಬಸವೋತ್ಸವ ಅಂಗವಾಗಿ ಮೂರು ತಿಂಗಳಲ್ಲಿ ಜಿಲ್ಲೆಯ ನೂರು ಗ್ರಾಮಗಳಲ್ಲಿ ಬಸವ ತತ್ವ ಪ್ರಚಾರ ಕೈಗೊಳ್ಳಲಾಗಿದೆ ಎಂದು ಹೇಳಿದರು.

ಬಸವೋತ್ಸವದಲ್ಲಿ ಬೀದರ್, ನೆರೆಯ ಜಿಲ್ಲೆಗಳು ಹಾಗೂ ನೆರೆ ರಾಜ್ಯಗಳ ಬಸವ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಅಕ್ಕ ಅನ್ನಪೂರ್ಣ ತಾಯಿ ಅವರಿಗೆ ಗೌರವ ಸಮರ್ಪಿಸಲಿದ್ದಾರೆ ಎಂದು ತಿಳಿಸಿದರು. ನಾಳೆ(23 ರಂದು) ಬೆಳಿಗ್ಗೆ 10ಕ್ಕೆ ನಡೆಯುವ ಸಮಾರಂಭದಲ್ಲಿ ರಾಷ್ಟ್ರೀಯ ಬಸವ ದಳದ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ ಪಾಟೀಲ ಗಾದಗಿ ಅವರು ಬಸವೋತ್ಸವವನ್ನು ಉದ್ಘಾಟಿಸಲಿದ್ದಾರೆ. ಹಾರಕೂಡದ ಚನ್ನವೀರ ಶಿವಾಚಾರ್ಯರು ಸಾನಿಧ್ಯ, ಉರಿಲಿಂಗ ಪೆದ್ದಿ ಮಠದ ಪಂಚಾಕ್ಷರಿ ಸ್ವಾಮೀಜಿ, ಕಲಬುರಗಿಯ ಅಕ್ಕ ಮಹಾದೇವಿ ಆಶ್ರಮದ ಮಾತೆ ಪ್ರಭುಶ್ರೀ ನೇತೃತ್ವ ಹಾಗೂ ಕಲಬುರಗಿಯ ಬಸವ ಸೇವಾ ಪ್ರತಿಷ್ಠಾನದ ಅಧ್ಯಕ್ಷ ರಾಜಶೇಖರ ಯಂಕಂಚಿ ಅಧ್ಯಕ್ಷತೆ ವಹಿಸಲಿದ್ದಾರೆ. ಬೆಂಗಳೂರಿನ ಜಾಗೃತ ಕರ್ನಾಟಕದ ಡಾ. ಎಚ್.ವಿ. ವಾಸು ಮುಖ್ಯ ಅನುಭಾವ ಮಂಡಿಸಲಿದ್ದಾರೆ ಎಂದು ಹೇಳಿದರು.

ಭಾರತೀಯ ಬಸವ ಬಳಗದ ರಾಜ್ಯ ಅಧ್ಯಕ್ಷ ಬಾಬುವಾಲಿ, ಸಮಾಜ ಸೇವಕ ನಾಗರಾಜ ಕರ್ಪೂರ, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ ಬಿರಾದಾರ ಚಿದ್ರಿ, ಸಂಘದ ರಾಜ್ಯ ಪರಿಷತ್ ಸದಸ್ಯ ರಾಜಕುಮಾರ ಮಾಳಗೆ, ಉದ್ಯಮಿ ವೀರಶೆಟ್ಟಿ ಪಟ್ನೆ, ನಂಜನಗೂಡಿನ ಅಕ್ಕನ ಬಳಗದ ಎಚ್. ಎಂ. ಮಂಜುಳಾ ಮಧು ಹಾಗೂ ಬೀದರ್‌ನ



ನೀಲಮ್ಮನ ಬಳಗದ ಸಂಗೀತಾ ಆರ್.ಪಾಟೀಲ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು ಎಂದು ತಿಳಿಸಿದರು.

ಇದಕ್ಕೂ ಮುನ್ನ ಬೆಳಿಗ್ಗೆ 7.30ಕ್ಕೆ ಸಾಮೂಹಿಕ ವಚನ ಪಾರಾಯಣ ಜರುಗಲಿದೆ. ಲಿಂಗಾಯತ ಮಹಾ ಮಠದ ಪ್ರಭುದೇವ ಸ್ವಾಮೀಜಿ, ಬಸವಕಲ್ಯಾಣದ ಅನುಭವ ಮಂಟಪದ ಶಿವಾನಂದ ಸ್ವಾಮೀಜಿ, ಕಲಖೋರಾದ ಅನಿಲ್ ಮಹಾರಾಜ, ಬಸವಕಲ್ಯಾಣದ ಬಸವ ದೇವರು, ಸಿದ್ರಾಮಪ್ಪ ಕಪಲಾಪುರ ದಿವ್ಯ ಸಾನಿಧ್ಯ, ಲಿಂಗಾಯತ ಮಹಾ ಮಠದ ಪರುಷಕಟ್ಟೆ ಚನ್ನಬಸವಣ್ಣ ನೇತೃತ್ವ, ನೀಲಮ್ಮ ಬಳಗದ ಶಾಮಲಾ ಎಲಿ ಅಧ್ಯಕ್ಷತೆ ವಹಿಸುವರು. ಕೊಪ್ಪಳದ ವೀರಭದ್ರಪ್ಪ ನಂದ್ಯಾಳ ಷಟ್‌ಸ್ಥಲ ಧ್ವಜಾರೋಹಣ ನೆರವೇರಿಸಿದರು ಎಂದು ಹೇಳಿದರು.

ಗೋರ್ಟಾ(ಬಿ)ದ ಗೋದಾವರಿ ತಾಯಿ, ಸಂಗೀತಾ ಚ. ಗಣಾಚಾರಿ, ಜಗದೇವಿ, ಚಿಮಕೋಡೆ, ಸಂಗೀತಾ ಕಾಡಾದಿ, ನಮ್ರತಾ ಪಾಟೀಲ, ಸುಪ್ರಿಯಾ ಭೂರೆ ಗೌರವ ಉಪಸ್ಥಿತಿ ವಹಿಸುವರು ಎಂದು ತಿಳಿಸಿದರು. ಅಂದು ಸಂಜೆ 5ಕ್ಕೆ ಅಕ್ಕನವರ ಸ್ಮರಣೋತ್ಸವ ನಡೆಯಲಿದೆ. ಲಿಂಗಾಯತ ಮಹಾ ಮಠದ ಪ್ರಭುದೇವ ಸ್ವಾಮೀಜಿ ನೇತೃತ್ವ, ಕೌಠಾ(ಬಿ) ಬಸವ ಯೋಗಾಶ್ರಮದ ಡಾ. ಸಿದ್ಧರಾಮೇಶ್ವರ ಶರಣರು ಬೆಲ್ದಾಳ, ಬಸವಕಲ್ಯಾಣದ ಬಸವ ಮಹಾಮನೆಯ ಜಗದ್ಗುರು ಸಿದ್ಧರಾಮ ಸ್ವಾಮೀಜಿ, ಕೊಪ್ಪಳದ ಯಳವಂತ ಶರಣರು ದಿವ್ಯ ಸಾನಿಧ್ಯ ವಹಿಸುವರು ಎಂದು ಹೇಳಿದರು.

ಭಾರತೀಯ ಬಸವ ಬಗಳಗದ ಅಧ್ಯಕ್ಷೆ ಶಕುಂತಲಾ ಬೆಲ್ದಾಳೆ, ಬಸವ ಜಯಂತಿ ಉತ್ಸವ ಸಮಿತಿ 2026 ರ ಅಧ್ಯಕ್ಷ ಡಾ.ರಜನೀಶ್ ವಾಲಿ, ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಧನ್ನೂರ, ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಸುರೇಶ ಚನಶೆಟ್ಟಿ, ರೋಟರಿ ಕಲ್ಯಾಣ ಝೋನ್ ಸಹಾಯಕ ಗವರ್ನರ್ ಹಾವಶೆಟ್ಟಿ ಪಾಟೀಲ, ಕನ್ನಡಾಂಬೆ ಗೆಳೆಯರ ಬಳಗದ ಅಧ್ಯಕ್ಷ ವಿರೂಪಾಕ್ಷ ಗಾದಗಿ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು..

ಗೋರ್ಟಾ(ಬಿ)ದ ಸೋಮನಾಥಪ್ಪ ರಾಜೇಶ್ವರೆ, ಕೊಪ್ಪಳದ ಅರ್ಚನಾ ಗವೀಶ್ ಸಸಿಮಠ, ಹುಬ್ಬಳ್ಳಿಯ ಪ್ರಭಾ ಎರೆಸೀಮಿ, ಸಿದ್ಧೇಶ್ವರ ಪಿಕೆಪಿಎಸ್ ಅಧ್ಯಕ್ಷೆ ಶಾಂತಾ ಜೈರಾಜ ಖಂಡ್ರೆ ಗೌರವ ಉಪಸ್ಥಿತಿ ವಹಿಸುವರು. ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷೆ ನೀಲಮ್ಮ ರೂಗನ್ ಅಧ್ಯಕ್ಷತೆ ವಹಿಸುವರು ಎಂದು ತಿಳಿಸಿದರು.

ಮೇ 24 ರಂದು ಬೆಳಿಗ್ಗೆ 8.30ಕ್ಕೆ ಶಿವನಗರ ಉತ್ತರದ ಬಸವ ಉದ್ಯಾನ ಶಿವ ಮಂದಿರದಿಂದ ಬಸವಗಿರಿ ವರೆಗೆ ವಚನ ವಿಜಯೋತ್ಸವ ಮೆರವಣಿಗೆ ನಡೆಯಲಿದೆ.ವಿಶೇಷ ಅಲಂಕೃತ ವಾಹನದಲ್ಲಿ ಬಸವಣ್ಣನವರು, ಅಕ್ಕ ಅನ್ನಪೂರ್ಣತಾಯಿ ಅವರ ಬೃಹತ್ ಭಾವಚಿತ್ರ ಹಾಗೂ ಲಿಂಗಾಯತ ಧರ್ಮಗ್ರಂಥ ಗುರು ವಚನ ಮೆರವಣಿಗೆಯ ಪ್ರಮುಖ ಆಕರ್ಷಣೆಯಾಗಲಿವೆ. ಸಹಸ್ರಾರು ಶರಣ ಶರಣೆಯರು ವಚನ ಸಾಹಿತ್ಯ ತಲೆ ಮೇಲೆ ಇಟ್ಟುಕೊಂಡು ಭಕ್ತಿ ಭಾವದಿಂದ ಹೆಜ್ಜೆ ಹಾಕಲಿದ್ದಾರೆ. ಷಟಸ್ಥಲ ಧ್ವಜಗಳು, ಛತ್ರಿ– ಚಾಮರಗಳು ರಾರಾಜಿಸಲಿವೆ. ಬೆಳಿಗ್ಗೆ 11ಕ್ಕೆ ಬಸವೋತ್ಸವ, ಸಮವಸ್ತ್ರಧಾರಿ 770 ಶರಣ ಶರಣೆಯರಿಂದ ಅಕ್ಕನ ಯೋಗಾಂಗ ತ್ರಿವಿಧಿ ಪಠಣ ಜರುಗಲಿದೆ ಎಂದು ಹೇಳಿದರು.

ಬಸವಕಲ್ಯಾಣದ ಅನುಭವ ಮಂಟಪದ ಅಧ್ಯಕ್ಷ ಡಾ. ಬಸವಲಿಂಗ ಪಟ್ಟದ್ದೇವರು, ಹುಲಸೂರಿನ ಡಾ. ಶಿವಾನಂದ ಸ್ವಾಮೀಜಿ, ಕಾಳಗಿಯ ಗುರುನಂಜೇಶ್ವರ ಸ್ವಾಮೀಜಿ ದಿವ್ಯ ಸಾನಿಧ್ಯ, ಲಿಂಗಾಯತ ಮಹಾ ಮಠದ ಪ್ರಭುದೇವ ಸ್ವಾಮೀಜಿ ನೇತೃತ್ವ ವಹಿಸುವರು ಎಂದರು. ಜಾಗತಿಕ ಲಿಂಗಾಯತ ಮಹಾಸಭಾದ ಕೇಂದ್ರ ಸಮಿತಿ ಉಪಾಧ್ಯಕ್ಷ ಬಸವರಾಜ ಬುಳ್ಳಾ ಉದ್ಘಾಟಿಸುವರು, ಧಾರವಾಡದ ಖ್ಯಾತ ಚಿಂತಕ ಡಾ. ಸಿದ್ದನಗೌಡ ಪಾಟೀಲ ಮುಖ್ಯ ಅನುಭಾವ ಮಂಡಿಸುವರು. ಹಾರೂರಗೇರಿಯ ಆರ್.ಆರ್. ಮಠಪತಿ ಅಧ್ಯಕ್ಷತೆ ವಹಿಸುವರು ಎಂದು ತಿಳಿಸಿದರು.

ಎನ್.ಎಸ್.ಎಸ್.ಕೆ. ಅಧ್ಯಕ್ಷ ಸೂರ್ಯಕಾಂತ ನಾಗಮಾರಪಳ್ಳಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಆನಂದ ದೇವಪ್ಪ, ಮುಖಂಡರಾದ ಶಂಕರಪ್ಪ ಪಾಟೀಲ, ಡಾ. ನಾಗೇಶ ಪಾಟೀಲ, ಅನಿಲಕುಮಾರ ರಗಟೆ, ಭಾರತಿ ಗಂಗಾಧರ ಜೋಗುರ, ನೀತಾ ಎಸ್. ಸುಳಿಭಾವಿ, ಕಮಲಾ ಎಸ್. ಭೂಸನೂರ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು ಎಂದು ಹೇಳಿದರು. ಅಂದು ಸಂಜೆ 4.30ಕ್ಕೆ ಸಮಾರೋಪ ಸಮಾರಂಭ ಜರುಗಲಿದ್ದು, ಭಾಲ್ಕಿ ಹಿರೇಮಠ ಸಂಸ್ಥಾನದ ಗುರುಬಸವ ಪಟ್ಟದ್ದೇವರು, ಆಳಂದದ ಕೋರಣೇಶ್ವರ ಸ್ವಾಮೀಜಿ, ಬಸವಕಲ್ಯಾಣದ ಬಸವಪ್ರಭು ಸ್ವಾಮೀಜಿ, ಸಿಂಧನಕೇರಾದ ಹೊನ್ನಲಿಂಗ ಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸುವರು. ಕಲಬುರಗಿಯ ಡಾ. ಕಿರಣ ಗಾಜನೂರು ಮುಖ್ಯ ಅನುಭಾವ ಮಂಡಿಸುವರು. ಗುಲಬರ್ಗಾ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ಸಿದ್ದಪ್ಪ ಮೂಲಗೆ, ಹೈದರಾಬಾದ್‌ನ ನಾಗರಾಜ ಸೋರಳ್ಳಿ, ಜಹೀರಾಬಾದ್‌ನ ಡಾ. ಬಸವರಾಜ ಮಠಪತಿ, ಡಾ. ದೇವಕಿ ನಾಗೂರೆ, ಜಗನ್ನಾಥ ಇದಲಾಯಿ, ಜಗನ್ನಾಥ ಶೇರಿಕಾರ್, ಮಲ್ಲಿಕಾರ್ಜುನ ಸಂಗಮಕರ್, ಎಸ್.ಎಸ್. ಪಾರಾ, ಹಲಸಿಯ ಸಂತೋಷ್ ಪಾಟೀಲ, ಮಲ್ಲಮ್ಮ ಹೆಬ್ಬಾಳೆ, ಅನಿತಾ ಆರ್. ಪಾಟೀಲ, ವಿಜಯಲಕ್ಷ್ಮಿ ರಾಜೋಳೆ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಬೀರೇಶ್ವರ ಸೌಹಾರ್ದ ಸಹಕಾರಿಯ ಸಲಹಾ ಸಮಿತಿ ಸದಸ್ಯೆ ಜಗದೇವಿ ಪನಸಾಲೆ ಅಧ್ಯಕ್ಷತೆ ವಹಿಸುವರು ಎಂದು ತಿಳಿಸಿದರು.

ಪತ್ರಿಕಾ ಗೋಷ್ಠಿಯಲ್ಲಿ ಸಾಹಿತಿ ರಮೇಶ ಮಠಪತಿ, ಪ್ರಮುಖರಾದ ಮಾಣಿಕಪ್ಪ ಗೋರನಾಳೆ, ಚಂದ್ರಶೇಖರ ಹೆಬ್ಬಾಳೆ, ಅಶೋಕ ಎಲಿ, ರಾಜಕುಮಾರ ಪಾಟೀಲ, ವಿ.ಎಸ್ ಬಿರಾದಾರ, ಆರ್.ಕೆ. ಪಾಟೀಲ, ಶಿವಕುಮಾರ ಪಾಖಾಲ್, ಪ್ರಕಾಶ ಮಠಪತಿ, ಚನ್ನಬಸಪ್ಪ ಹಂಗರಗಿ, ಸಿ.ಎಸ್. ಗಣಾಚಾರಿ, ಅಣುವೀರ ಕೂಡಂಬಲ್, ಅಭಿಷೇಕ ಮಠಪತಿ ಮತ್ತಿತರರು ಇದ್ದರು.

### ಬಸವ ತತ್ವ ಬೆಳೆಸಿದ್ದ ಅಕ್ಕ

**ಅಕ್ಕ ಅನ್ನಪೂರ್ಣತಾಯಿ ಅವರು ನಾಡಿನಲ್ಲಿ ಬಸವತತ್ವವನ್ನು ಬೆಳೆಸಿದ್ದರು ಎಂದು ಲಿಂಗಾಯತ ಮಹಾ ಮಠದ ಪ್ರಭುದೇವ ಸ್ವಾಮೀಜಿ ಹೇಳಿದರು.**

**ಅಪೂರ್ವ ಪ್ರವಚನಕಾರರಾಗಿದ್ದರು. ಬಸವ ತತ್ವ ಜನಮನದಲ್ಲಿ ನೆಲೆಗೊಳಿಸಲು ವಾರದ ಅನುಭವ ಮಂಟಪ, ಮಾಸಿಕ ಬಸವ ಜ್ಯೋತಿ, ಶರಣ ಸಂಗಮ, ವಚನ ವಿಜಯೋತ್ಸವ, ಸಾಮೂಹಿಕ ವಚನ ಪಾರಾಯಣ ಪರಂಪರೆ ಹುಟ್ಟುಹಾಕಿದರು ಎಂದು ಹೇಳಿದರು. ಬಸವಾದಿ ಶರಣರ ಮಾನವೀಯ ಮೌಲ್ಯಗಳನ್ನು ಬಿತ್ತಿ ಬೆಳೆಯಲು ಬಸವ ಸೇವಾ ಪ್ರತಿಷ್ಠಾನ, ಲಿಂಗಾಯತ ಮಹಾ ಮಠ, ನೀಲಮ್ಮನ ಬಳಗ, ಲಿಂಗಾಯತ ಸೇವಾ ದಳ ಸಂಸ್ಥೆಗಳನ್ನು ಕಟ್ಟಿದರು. ಬಸವಗಿರಿಯಲ್ಲಿ ಗುರುವಚನ ಪರುಷ ಕಟ್ಟೆ ಸ್ಥಾಪಿಸಿದರು ಎಂದು ತಿಳಿಸಿದರು. ನಾಲ್ಕು ದಶಕಗಳ ವರೆಗೆ ಬಸವ ತತ್ವ ಪ್ರಸಾರಕ್ಕೆ ಬಿಡುವಿಲ್ಲದೆ ಪರಿಶ್ರಮಿಸಿದ್ದರು. 21ನೇ ಶತಮಾನದ ಆಧ್ಯಾತ್ಮ ಲೋಕದ ಮರೆಯಲಾಗದ ಮಾಣಿಕ್ಯವಾಗಿದ್ದರು. ಅವರ ತತ್ವ, ಆದರ್ಶಗಳನ್ನು ಎಲ್ಲರೂ ಪಾಲಿಸಬೇಕಾಗಿದೆ. ಬಸವ ತತ್ವವನ್ನು ಬೆಳೆಸಬೇಕಾಗಿದೆ ಎಂದರು.**

# ರೈಲ್ವೆ ಕೆಳ ಸೇತುವೆ ನಿರ್ಮಾಣಕ್ಕಾಗಿ ಸ್ಥಳ ಪರಿಶೀಲನೆ

• ಮಲ್ಲಮ್ಮ ನುಡಿ ವಾರ್ತೆ ಬೀದರ

ನಗರದ ಹಳೆ ಆದರ್ಶ ಕಾಲೋನಿ ನ್ಯಾಶನಲ್ ಕಾಲೇಜು ಹತ್ತಿರ ರೈಲ್ವೆ ಕೆಳ ಸೇತುವೆ ನಿರ್ಮಾಣ ಕಾರ್ಯಕ್ಕಾಗಿ ಗುರುವಾರ ಸಂಸದ ಸಾಗರ ಈಶ್ವರ ಖಂಡ್ರೆ ಅವರು ಜಿಲ್ಲಾಧಿಕಾರಿ, ರೈಲ್ವೆ ಇಲಾಖೆ ಅಧಿಕಾರಿ, ಏರ್ಫೋರ್ಸ್ ಅಧಿಕಾರಿ ಹಾಗೂ ಪುರಾತತ್ವ ಇಲಾಖೆ ಅಧಿಕಾರಿಗಳೊಂದಿಗೆ ಜಂ–ಟಿಯಾಗಿ ಸ್ಥಳ ಪರಿಶೀಲನೆ ಮಾಡಿದರು.

ಈ ಸಮಯದಲ್ಲಿ ಸಂಸದರು ಅಧಿಕಾರಿಗಳೊಂದಿಗೆ ರೈಲ್ವೆ ಕೆಳ ಸೇತುವೆ ನಿರ್ಮಾಣದ ಸಾಧಕ–ಬಾದಕಗಳ ಬಗ್ಗೆ ಸಮಾಲೋಚನೆ ನಡೆಸಿದರು. ನಂತರ ಮಾತನಾಡಿದ ಅವರು, ಹಳೆ ಆದರ್ಶ ಕಾಲೋನಿ ಬಳಿ ರೈಲ್ವೆ ಕೆಳ ಸೇತುವೆ ನಿರ್ಮಾಣ ಮಾಡಬೇಕು ಎಂಬುದು ಜನರ ಬಹುದಿನಗಳ ಬೇಡಿಕೆಯಾಗಿತ್ತು. ಆದರೆ ಕೆಲವು ಸಮಸ್ಯೆಗಳ ಕಾರಣದಿಂದಾಗಿ ತೊಡಕಾಗಿತ್ತು, ನಿರಂತರ



ಮೇಲ್ವಿಚಾರಣೆ ನಡೆಸಿ ಸಮಸ್ಯೆಗನ್ನು ಪರೇಹರಿಸಿ ಇಂದು ವಾಯುಪಡೆ, ರೈಲ್ವೆ ಹಾಗೂ ಪುರಾತತ್ವ ಇಲಾಖೆಯ ಅಧಿಕಾರಿಗಳೊಂದಿಗೆ ಜಂಟಿ ಸಮೀಕ್ಷೆ ನಡೆಸಿದ್ದೇನೆ.

ಸೇತುವೆ ನಿರ್ಮಾಣಕ್ಕೆ ವಾಯುಪಡೆಯ 0.33, ಖಾಸಗಿಯ 0.33 ಎಕರೆ ಜಾಗ ಬೇಕಾಗುವ ನಿರೀಕ್ಷೆ ಇದೇ. ವಾಯು ಪಡೆಯ ಅಧಿಕಾರಿಗಳು ಈಗಾಗಲೇ ತಾವು ನಮಗೆ ಪ್ರಸ್ತಾವನೆ ಸಲ್ಲಿಸಿದಲ್ಲಿ ರಕ್ಷಣಾ ಸಚಿವಾಲಯದಿಂದ ಅನುಮೋದನೆ ಕೊಡಿಸುವುದಾಗಿ ಭರವಸೆ ನೀಡಿದ್ದಾರೆ. ಸ್ಮಾರಕಗಳು ಇರುವುದರಿಂದ ಪುರಾತತ್ವ ಇಲಾಖೆಯವರು ಸಹ ಸಹಕಾರ ನೀಡಿ ಅನುಮತಿ ಕೊಡಿಸುವುದಾಗಿ ತಿಳಿಸಿದ್ದಾರೆ. ಈಗಾಗಲೇ ಪ್ರಾಥಮಿಕ ವರದಿ ಸಿದ್ದವಾಗಿದೆ. ಅಧಿಕಾರಿಗಳು ರೂಟ್ ಅಲೈನ್‌ಮೆಂಟ್ ಫಿಕ್ಸ್ ಮಾಡುತ್ತಿದ್ದಾರೆ. ಒಂದು ತಿಂಗಳಲ್ಲಿ ವಿಸ್ತೃತ ವರದಿ ತಯ್ಯಾರಿಸಿ ಸಂಬಂದಿಸಿದ ಇಲಾಖೆಗಳಿಂದ ಎನ್.ಓ.ಸಿ ಪಡೆದು 8 ರಿಂದ 9 ತಿಂಗಳಲ್ಲಿ ಟೆಂಡರ್ ಕರೆದು ಕಾಮಗಾರಿ ಪ್ರಾರಂಭಿಸಲಾಗುವುದು. ಈ ರೈಲ್ವೆ ಕೆಳ ಸೇತುವೆ ನಿರ್ಮಾಣದಿಂದ ಟ್ರಾಫಿಕ್ ಸಮಸ್ಯೆ ನಿವಾರಣೆಯಾಗಿ ಜನರಿಗೆ ಅನುಕೂಲವಾಗಲಿದೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಮಹಾನಗರ ಪಾಲಿಕೆ ಆಯುಕ್ತ ಮುಕುಲ್ ಜೈನ್, ರೈಲ್ವೆ ಇಲಾಖೆ, ವಾಯುಪಡೆ ಹಾಗೂ ಪುರಾತತ್ವ ಇಲಾಖೆಯ ಅಧಿಕಾರಿಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಅಂತರಾಷ್ಟ್ರೀಯ ಯೋಗ ದಿನಾಚರಣೆ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ಇಂದು ನವೋದಯ ವ್ಯಸನಮುಕ್ತ ಕೇಂದ್ರ ಮರಳಿ ಯಲ್ಲಿ ಭಾರತ ಸರ್ಕಾರ – ಕರ್ನಾಟಕ ಸರ್ಕಾರ ಆಯುಷ್ಯ ನಿರ್ದೇಶನಾಲಯ ಜಿಲ್ಲಾ ಆಡಳಿತ ಜಿಲ್ಲಾ ಪಂಚಾಯತ ಕೊಪ್ಪಳ ಹಾಗೂ ಜಿಲ್ಲಾ ಆಯುಷ್ಯ ಇಲಾಖೆ ಕೊಪ್ಪಳ ಹಾಗೂ ಜಿಲ್ಲೆಯ ಆಯುಷ್ಮಾನ ಆರೋಗ್ಯ ಮಂದಿರಗಳ ಅಡಿಯಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆ–ಯ ಸಾಪ್ತಾಹ ಕಾರ್ಯಕ್ರಮವನ್ನು ಗಂಗಾವತಿ ಸರಕಾರಿ ಆಸ್ಪತ್ರೆಯ ಆಯುರ್ವೇದ ವಿಭಾಗದ ಮುಖ್ಯವೈಧ್ಯಾಧಿಕಾರಿಗಳಾದ ಗುರುರಾಜ ಉಮಚಗಿ ಸರ್ ಮತ್ತು ನಂದಿಹಳ್ಳಿ ಆಯುಷ್ ಆಸ್ಪತ್ರೆಯ ವೈಧ್ಯಾಧಿಕಾರಿಗಳು ಖಕ ಸುಂಕದ ಹಾಗೂ ಯೋಗ ತರಬೇತುದಾರರಾದ ಬಸವರಾಜ ನೀರಗಂಟಿ ಮತ್ತು ಸಂಸ್ಥೆಯ ಅಧ್ಯಕ್ಷರಾದ ಬಿ.ವಾಸುದೇವ & ಪ್ರಧಾನ ಕಾರ್ಯದರ್ಶಿಗಳಾದ ಕನಕರಾಯ ಪಾಟೀಲ್ ಹಾಗೂ ಪಧಾದಿಕಾರಿಗಳಿದ್ದರು..ಎಲ್ಲಾರೂ ಸೇರಿ ಸಸಿಗೆ ನೀರು ಹಾಕುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಉಮಚಗಿ ಸರ್ ಯೋಗ ಎಂದರೆ ಏನು ಅದನ್ನು ದಿನನಿತ್ಯ ಜೀವನದಲ್ಲಿ ಅಳವಡಿಸಿಕೊಂಡು ಹೇಗೆ ದೈಹಿಕವಾಗಿ ಮಾನಸಿಕವಾಗಿ ಮತ್ತು ಶಾರೀರಿಕ ವಾಗಿ ಹೇಗೆ ಚನ್ನಾಗಿ ಇರಬೇಕು ಮತ್ತು ವಾತ ಪಿತ್ತ ಕಫ. ವನ್ನು ಸಮಸ್ಥಿತಿಯಲ್ಲಿ ಕಾಯ್ದುಕೊಂಡು ಆರೋಗ್ಯದ ಸಮತೋಲನವನ್ನು ಕಾಯ್ದುಕೊಳ್ಳಬೇಕು ಎಂದರು ...ಖಕ ಸುಂಕದ ಸರ್ ಅವರು ಕಾರ್ಯಕ್ರಮದ ಪ್ರಾಸ್ತಾವಿಕ ನುಡಿಗಳನ್ನು ಹೇಳಿದರು ಮತ್ತು ಬಸವರಾಜ ನೀರಗಂಟಿ ಅವರು ಯೋಗ ಆಯಾಮಗಳನ್ನು



ಮಾಡಿಸಿದರು ಮತ್ತು ಅಧ್ಯಕ್ಷರು ಅಧ್ಯಕ್ಷೀಯ ನುಡಿಗಳನ್ನು ಹೇಳಿದರು...ಈ ಸಂದರ್ಭದಲ್ಲಿ ಆಯುರ್ವೇದದ ಸುಮಾರು ದಿನೋಪಯೋಗಿಯ ವಸ್ತುಗಳನ್ನು ವಿತರಿಸಲಾಯಿತು. ಆಯುಷ್ ಇಲಾಖೆ ಕೊಪ್ಪಳ

ಆಯುಷ್ಮಾನ್ ಆರೋಗ್ಯ ಮಂದಿರ ನಂದಿಹಳ್ಳಿ ಸರಕಾರಿ ಆಯುರ್ವೇದ ಆಸ್ಪತ್ರೆ ಗಂಗಾವತಿ ವತಿಯಿಂದ 12ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ನವೋದಯ ವ್ಯಸನಮುಕ್ತ ಮತ್ತು ಪುನರ್ವಸತಿ ಕೇಂದ್ರ ಮರಳಿ ಗಂಗಾವತಿಯಲ್ಲಿ ಶಿಬಿರಾರ್ಥಿಗಳಿಗೆ ಐದು ದಿನಗಳವರೆಗೆ ನಡೆಯುವ ಯೋಗ ಶಿಬಿರವನ್ನು ಮುಖ್ಯವೈದ್ಯಾಧಿಕಾರಿಗಳಾದ ಡಾ.ಗುರುರಾಜ್ ಉಮಚಗಿ, ಸಾಂಕೇತಿಕವಾಗಿ ಸಸಿಗೆ ನೀರು ಏರೆಯುವ ಮುಖಾಂತರ ಕಾರ್ಯಕ್ರಮವನ್ನು ಉದ್ಘಾಟನೆ ಮಾಡಿದರು. ವ್ಯಸನದಿಂದ ಮುಕ್ತ ರಾಗಲು ಯೋಗ ಮತ್ತು ಪ್ರಾಣಾಯಾಮವನ್ನು ನಿತ್ಯ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಆಯುಷ್ಯ ವೈದ್ಯಾಧಿಕಾರಿಗಳಾದ ಡಾ. ಶಿವಲಿಂಗಪ್ರಭು ಸುಂಕದ ಪ್ರಸ್ತಾವಿಕವಾಗಿ ಮಾತನಾಡುತ್ತಾ ಆಯುರ್ವೇದ ಮತ್ತು ಯೋಗವು ಆತ್ಮ ಇಂದ್ರಿಯ ಮತ್ತು ಮನಸ್ಸುಗಳನ್ನು ಬೆಸೆಯುವ ಕ್ರಿಯೆಗಳಾಗಿವೆ ಅಂತರಾಷ್ಟ್ರೀಯ ಯೋಗ ದಿನಾಚರಣೆಯು ಸರ್ವೇ ಜನ: ಸುಖಿನೂ ಭವಂತು ಎನ್ನುವ ಸಮಷ್ಟಿ ಪ್ರಜ್ಞೆಯನ್ನು ಮೂಡಿಸುತ್ತದೆ. ಆಚರಣೆಯಿಂದ ಜೀವನದ ಮೌಲ್ಯಗಳು ಹೆಚ್ಚುತ್ತವೆ ಎಂದು ತಿಳಿಸಿದರು.

ಯೋಗ ತರಬೇತಿಗಾರರಾದ ಬಸವರಾಜ ನೀರಗಂಟಿ ಪ್ರಾಯೋಗಿಕವಾಗಿ ಯೋಗ ತರಬೇತಿಯನ್ನು ನಡೆಸಿಕೊಟ್ಟರು. ತದನಂತರ ಎಲ್ಲಾ ಶಿಬಿರಾರ್ಥಿಗಳಿಗೆ ಚವನ್ಪ್ರಾಶ್, ಲಿವರ್ ಟಾನಿಕ್ ಕಾಲ ಮೇಘ ಸ್ಟಾಂಗ್ ಇನ್ನಿತರ ಆಯುರ್ವೇದ ಔಷಧಿಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಕೇಂದ್ರದ ಮುಖ್ಯಸ್ಥರಾದ ವಾಸುದೇವ ಡಣಾಪುರ,ಕನಕರಾಯ ಉಳೆನೂರು, ಮತ್ತು ಕೇಂದ್ರದ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಜನತೆಯ ಮನಸೂರೆಗೊಂಡ ಗ್ರಾಮೀಣ ಕಲೋತ್ಸವ ಕಾರ್ಯಕ್ರಮ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿಲ್ಲೆಯ ಸಿರುಗುಪ್ಪ ತಾಲೂಕಿನ ಶಾನವಾಸಪುರ ಗ್ರಾಮದ ಬಯಲು ರಂಗ ಮಂದಿರ ವೇದಿಕೆಯಲ್ಲಿ ಮಂಗಳವಾರ ಸಂಜೆ ಗ್ರಾಮೀಣ ಕಲೋತ್ಸವ 2026 ಕಾರ್ಯಕ್ರಮವನ್ನು ನೇತ್ರ ಕಲಾ ಸಂಘ ಸಿರುಗುಪ್ಪ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ವಿಶೇಷ ಘಟಕ ಯೋಜನೆ ಅಡಿಯಲ್ಲಿ ಆಯೋಜಿಸಲಾಗಿತ್ತು.

ಬಳ್ಳಾರಿಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಬಿ. ನಾಗರಾಜ್ ಕಾರ್ಯಕ್ರಮವನ್ನು ಉದ್ಘಾಟಿಸಿದರು. ನಂತರ ಮಾತನಾಡಿದ ಅವರು ಕರ್ನಾಟಕ ಸರ್ಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ನಾಡಿನ ಸಾಂಸ್ಕೃತಿಕ ಸಾಹಿತ್ಯಕ ಚಟುವಟಿಕೆಗಳಲ್ಲಿ ತೊಡಗಿಕೊಂಡಿರುವ ಕಲಾಸಂಘ ಸಂಸ್ಥೆಗಳಿಗೆ ಕಾರ್ಯಕ್ರಮಗಳನ್ನು ಸಂಘಟಿಸಲು ಮತ್ತು ಅಸಂಘಟಿತ ಕಲಾವಿದರಿಗೂ ಪ್ರತಿವರ್ಷವು ಧನ ಸಹಾಯ ನೀಡುತ್ತಿದ್ದು ಇದರಿಂದ ಗ್ರಾಮೀಣ ಭಾಗದ ಅಳಿವಿನಂಚಿನಲ್ಲಿರುವ ಜಾನಪದ ಕಲೆಗಳನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಧನ ಸಹಾಯ ನೀಡುವ ಮೂಲಕ ಪ್ರೋತ್ಸಾಹಿಸುತ್ತಿದೆ. ಎಂದು ಹೇಳಿದರು.

ಅದರಂತೆ ನೇತ್ರಕಲಾ ಸಂಘವು 15 ವರ್ಷಗಳಿಂದ ನಿರಂತರ ಸಾಂಸ್ಕೃತಿಕ ಸಾಹಿತ್ಯಕ ಸಾಮಾಜಿಕ ಸೇವೆ ಜೊತೆಗೆ ಬೀದಿ ನಾಟಕ,ಆರೋಗ್ಯ ಜಾಗೃತಿ, ಬಾಲ್ಯ ವಿವಾಹ, ಅಸ್ಪೃಶ್ಯತೆ ಯಂತಹ ಜಾಗೃತಿ ಕಾರ್ಯಕ್ರಮಗಳನ್ನು ಇಂದಿಗೂ ನಡೆಸಿಕೊಂಡು ಬರುತ್ತಿರುವುದು ವಿಶೇಷವಾಗಿದೆ ಎಂದು ಹೇಳಿದರು.

ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳು ಹಾಗೂ ಶಾನವಾಸಪುರ ಗ್ರಾಮ ಪಂಚಾಯಿತಿ ಆಡಳಿತ ಅಧಿಕಾರಿಗಳಾದ ಮಲ್ಲಿಕಾರ್ಜುನ ಅವರು ಅಧ್ಯಕ್ಷತೆ ವಹಿಸಿದರು. ಗ್ರಾಮೀಣ ಪ್ರದೇಶದಲ್ಲಿ ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಸಾಂಸ್ಕೃತಿಕ ಜಾಗೃತಿ ಮೂಡಿಸುವ ಜೊತೆಗೆ ಯುವಕರಲ್ಲಿ ಅಡಗಿರುವ ಪ್ರತಿಭೆಗಳನ್ನು ಗುರುತಿಸಿ ಅನಾವರಣಗೊಳಿಸಲು ಇಂತಹ ಕಾರ್ಯಕ್ರಮಗಳು ಅವಶ್ಯಕತೆ ಎಂದು ಹೇಳಿದರು. ಹಳ್ಳಿಗಳಲ್ಲಿ ಜನಪದ ಕಲೆ ನಶಿಸುತ್ತಿರುವ ಸಮಯದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಘ–ಸಂಸ್ಥೆಗಳು ಜೊತೆಗೂಡಿ ಕಲೆಗಳನ್ನು ಉಳಿಸುವ ಬೆಳೆಸುವ ಕೆಲಸ ನಡೆಯುತ್ತಿರುವುದು ಅತ್ಯಂತ ಶ್ಲಾಘನೀಯ ಸಂಗತಿ ಎಂದರೆ ತಪ್ಪಾಗಲಾರದು ಅದರಂತೆ ಸಾರ್ವಜನಿಕರಾದ ನಾವು ಪ್ರತಿಯೊಬ್ಬರೂ ಜನಪದ ಕಲೆಗಳನ್ನು ಉಳಿಸುವ ಮೂಲಕ ಇಂದಿನ ಯುವ ಪೀಳಿಗೆಯವರು ಕೂಡ ಕ್ರೀಡೆ,ಶಿಕ್ಷಣ,ಕೃಷಿ, ಆಧ್ಯಾತ್ಮ, ಜನಪದ ಮತ್ತು ಸಾಮಾಜಿಕ ಅಂಶಗಳನ್ನು ಮೈಗೂಡಿಸಿಕೊಂಡು ಗ್ರಾಮೀಣ ಭಾಗದ ಸೊಗಡನ್ನು ಜನಪದ ಕಲೆಯಿಂದಲೇ ಪರಿಚಯಿಸಿದಾಗ ಜನಪದ ಕಲೆ ಉಳಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಗ್ರಾಮ ಪಂಚಾಯಿತಿ ಅಭಿವೃದ್ಧಿಗಳ ಅಧಿಕಾರಿಗಳಾದ ಶ್ರೀ ವೀರೇಶ್ ಮತ್ತುಮತ್ತು ಊರಿನ ಹಿರಿಯ ಮುಖಂಡರಾದ ಎಂ. ಈರಪ್ಪ ವೈ. ನಾಗರಾಜ, ಸೋಮಪ್ಪ, ರಾಮಪ್ಪ,ಅಕ್ಬರ್ ಸಾಬ್, ತಿಪ್ಪೇರುದ್ರಗೌಡ, ಅಯ್ಯಪ್ಪ, ಬೈಲೂರು ನಾಗರಾಜ, ಬೈಲಾಟ ಅಕಾಡೆಮಿ ಮಾಜಿ ಸದಸ್ಯ ಹೆಚ್ ತಿಪ್ಪೇಸ್ವಾಮಿ ಉಪಸ್ಥಿತರಿದ್ದರು. ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಡಿ. ಮಹದೇವಿ ಸಿರುಗುಪ್ಪ ತಂಡದಿಂದ ಸುಗಮ ಸಂಗೀತ, ಮುತ್ತಣ್ಣ ಕುಡುದ್ರಾಳ್ ತಂಡದಿಂದ ಜನಪದ ಸಂಗೀತ, ದೊಡ್ಡ ಹುಸೇನಪ್ಪ ಅರಳಿಗನೂರು ತಂಡದಿಂದ ವಚನ ಸಂಗೀತ, ಹರಿಕೃಷ್ಣ ಸಂಗನಕಲ್ಲು ತಂಡದವರಿಂದ ಡೊಳ್ಳು ಕುಣಿತ, ದಾಸರ ಶಕ್ಷವಲಿ ಜಾಲಿಬೆಂಚಿ ತಂಡದವರಿಂದ ತತ್ವಪದ ಗಾಯನ ಹಾಗೂ ಸುಮಿತ್ರ ಮಾನ್ವಿ ತಂಡದವರಿಂದ ಪೌರಾಣಿಕ ನಗೆ ನಾಟಕ ಶ್ರೀಕೃಷ್ಣಸಂಧಾನ ಎಂಬ ನಾಟಕವು ನೆರೆದಿದ್ದ ಸಾವಿರಾರು ಜನರನ್ನು ನಗೆ–ಯಲಿ ತೇಲಿಸುತ್ತಾ ವೇದಿಕೆಯ ಸಾಂಸ್ಕೃತಿಕ ಸಂಗೀತ ಕಾರ್ಯಕ್ರಮಗಳು ಎಲ್ಲರನ್ನು ಮನರಂಜಿಸಿದರೆ ಮರಿಯಮ್ಮನಹಳ್ಳಿಯ ಜನಪದ ಕಲಾವಿದ ಹನುಮಯ್ಯ ಕಂಠದಲ್ಲಿ ಕೇಳಿ ಬಂದ ಮಹರ್ಷಿ ವಾಲ್ಮೀಕಿ ಗೀತೆ ಜನರನ್ನು ಕುಣಿದು ಕುಪ್ಪಳಿಸುವಂತೆ ಮಾಡಿದ್ದು ವಿಶೇಷವಾಗಿತ್ತು. ಕಾರ್ಯಕ್ರಮದ ನಿರ್ವಹಣೆ ಮತ್ತು ನಿರೂಪಣೆಯನ್ನು ಶ್ರೀ ವೀರೇಶ ದಳವಾಯಿ ಕಾರ್ಯದರ್ಶಿ ನೇತ್ರಕಲಾ ಸಂಘ ಇವರು ನಿರ್ವಹಿಸಿದರು.

# ಎಐ ತಂತ್ರಜ್ಞಾನ ಆಧಾರಿತ ಉಚಿತ ಆನ್‌ಲೈನ್ ಬ್ಯಾಚ್ ಆರಂಭ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಪ್ಯೂಪಿಲ್ ಟ್ರೀ ಪಿ.ಯು ಕಾಲೇಜು ವತಿಯಿಂದ ವಿಶ್ವದ ಅತ್ಯಾಧುನಿಕ ಂಐ ತಂತ್ರಜ್ಞಾನ ಆಧಾರಿತ ಸಂಪೂರ್ಣ ಉಚಿತ ಆನ್‌ಲೈನ್ ಓಇಇಖಿ ಶಾರ್ಟ್ ಟರ್ಮ್ ಬ್ಯಾಚ್ ಆರಂಭಿಸಲಾಗುತ್ತಿದೆ ಎಂದು ಘೋಷಿಸಿದರು.ಬಳ್ಳಾರಿ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿರುವ ಪತ್ರಿಕಾ ಭವನದಲ್ಲಿ ಇಂದು ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಪ್ಯೂಪಿಲ್ ಟ್ರೀ ಕಾಲೇಜಿನ ಸಂಸ್ಥಾಪಕರಾದ ಪ್ರಭುರಾಜ್ ಜಾಹಿಗಿರಿಧರ್ ಅವರು,

ಓಇಇಖಿ 2026 ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಿಗಾಗಿ ಈ ವಿಶೇಷ ಕಾರ್ಯಕ್ರಮವನ್ನು ಮೇ 27ರಿಂದ ಜೂನ್ 13, 2026ರವರೆಗೆ ನಡೆಸಲಾಗುತ್ತಿದ್ದು, ಬಳಿಕ ಜೂನ್ 14ರಿಂದ 20ರವರೆಗೆ ವಿಶೇಷ ರಿವಿಷನ್ ಹಂತ ನಡೆಯಲಿದೆ. ಜೂನ್ 21ರಂದು ನಡೆಯಲಿರುವ ಓಇಇಖಿ ಪರೀಕ್ಷೆಗೆ ವಿದ್ಯಾರ್ಥಿಗಳನ್ನು ಸಿದ್ಧಗೊಳಿಸುವ ಉದ್ದೇಶದಿಂದ ಈ ಕಾರ್ಯಕ್ರಮ ರೂಪಿಸಲಾಗಿದೆ ಎಂದು ತಿಳಿಸಿದರು.ಭಾರತದ ಓಇಇಖಿ ಇತಿಹಾಸದಲ್ಲೇ ಮೊದಲ ಬಾರಿಗೆ ಯಾವುದೇ ಶುಲ್ಕವಿಲ್ಲದೆ, ಯಾವುದೇ ಷರತ್ತಿಲ್ಲದೆ ಎಲ್ಲಾ ವಿದ್ಯಾರ್ಥಿಗಳಿಗೆ ಮುಕ್ತವಾಗಿ ಈ ಕಾರ್ಯಕ್ರಮವನ್ನು ನೀಡಲಾಗುತ್ತಿದೆ. ಇದು ಸಂಸ್ಥೆಯ ಸಾಮಾಜಿಕ ಸೇವೆಯ ಭಾಗವಾಗಿದೆ ಎಂದು ಹೇಳಿದರು.

ಈ ಶಾರ್ಟ್ ಟರ್ಮ್ ಬ್ಯಾಚ್‌ನ್ನು Pupil Tree.ai ಮೂಲಕ ನಡೆಸಲಾಗುತ್ತಿದ್ದು, ಇದು NEET ತಯಾರಿಗಾಗಿ ನಿರ್ಮಿಸಲಾದ ಅತ್ಯಾಧುನಿಕ ಂಐ ಆಧಾರಿತ ಶಿಕ್ಷಣ ವ್ಯವಸ್ಥೆಯಾಗಿದೆ. ಸಾಮಾನ್ಯ ತರಗತಿಗಳಂತೆ ಎಲ್ಲ ವಿದ್ಯಾರ್ಥಿಗಳಿಗೆ ಒಂದೇ ರೀತಿಯ ಪಾಠ ನೀಡುವುದಿಲ್ಲ. ಬದಲಾಗಿ, ಪ್ರತಿ ವಿದ್ಯಾರ್ಥಿಯ ದುರ್ಬಲ ವಿಷಯಗಳು, ತಪ್ಪು ಉತ್ತರಗಳು ಮತ್ತು ಅಂಕ ಕಳೆದುಕೊಳ್ಳುವ ಭಾಗಗಳನ್ನು ವಿಶ್ಲೇಷಿಸಿ, ಅವುಗಳನ್ನು ಸರಿಪಡಿಸುವ ವೈಯಕ್ತಿಕ ಕಲಿಕಾ ವ್ಯವಸ್ಥೆಯನ್ನು ಹೊಂದಿದೆ ಎಂದು ವಿವರಿಸಿದರು.

ಕಾರ್ಯಕ್ರಮದಡಿ ಪ್ರತಿದಿನ ಎರಡು ಸೆಷನ್‌ಗಳು ನಡೆಯಲಿವೆ. ಬೆಳಿಗ್ಗೆ 9.20ರಿಂದ ಮಧ್ಯಾಹ್ನ 2.30ರವರೆಗೆ ಆನ್‌ಲೈನ್ ಪೂರ್ಣಾವಧಿಯ ಓಇಇಖಿ ಮಾಕ್ ಟೆಸ್ಟ್‌ಗಳು ಪರೀಕ್ಷಾ ವಾತಾವರಣದಲ್ಲೇ ನಡೆಯಲಿವೆ. ಮಧ್ಯಾಹ್ನ 2.30ರಿಂದ ಸಂಜೆ 5.20ರವರೆಗೆ ಂಐ ಆಧಾರಿತ ವೈಯಕ್ತಿಕ ಕಲಿಕಾ ಹಾಗೂ ರಿವಿಷನ್ ತರಗತಿಗಳು ನಡೆಯಲಿವೆ.

ಸಂಸ್ಥೆಯ ಅಧ್ಯಾಪಕ ತಂಡವು ಎರಡು ದಶಕಗಳಿಗಿಂತ ಹೆಚ್ಚು ಕಾಲ ಓಇಇಖಿ ಆಕಾಂಕ್ಷಿಗಳಿಗೆ ಮಾರ್ಗದರ್ಶನ ನೀಡುತ್ತಿದ್ದು, ಭಾರತದಾದ್ಯಂತ 5,800ಕ್ಕೂ ಹೆಚ್ಚು ವೈದ್ಯಕೀಯ ಸೀಟುಗಳನ್ನು ಪಡೆದ ವಿದ್ಯಾರ್ಥಿಗಳನ್ನು ರೂಪಿಸಿದೆ. ಅನೇಕ ರಾಷ್ಟ್ರೀಯ ಶ್ರೇಯಾಂಕ ಪಡೆದ ವಿದ್ಯಾರ್ಥಿಗಳು, ಓಇಇಖಿನಲ್ಲಿ 700ರಿಂದ 720 ಅಂಕ ಗಳಿಸಿದ ವಿದ್ಯಾರ್ಥಿಗಳು, ಂಐಖಿಒಖ, ಎಐಖಿಒಇಖ ಸೇರಿದಂತೆ ದೇಶದ ಪ್ರಮುಖ ವೈದ್ಯಕೀಯ ಕಾಲೇಜುಗಳಲ್ಲಿ ಅಭ್ಯಾಸ ಮಾಡುತ್ತಿರುವ ಹಳೆಯ ವಿದ್ಯಾರ್ಥಿಗಳು ಈ ಸಂಸ್ಥೆಯ ಸಾಧನೆ ಎಂದು ಹೇಳಿದರು.

ಮೊದಲ 100 ವಿದ್ಯಾರ್ಥಿಗಳಿಗೆ ಸಂಪೂರ್ಣ ಉಚಿತ ಪ್ರವೇಶ ನೀಡಲಾಗುತ್ತಿದೆ. ನೋಂದಣಿಗಾಗಿ ವಿದ್ಯಾರ್ಥಿಯ ಹೆಸರು, ಹುಟ್ಟಿದ ದಿನಾಂಕ, ಮೊಬೈಲ್ ಸಂಖ್ಯೆ, ಇಮೇಲ್ ಐಡಿ, ತರಗತಿ ಹಾಗೂ ವಿಳಾಸ ವಿವರಗಳನ್ನು ಘುಚಿಣಂಠಿಠಿ ಮೂಲಕ 9740776883 ಅಥವಾ 9243239325 ಸಂಖ್ಯೆಗೆ ಕಳುಹಿಸುವಂತೆ ಮನವಿ ಮಾಡಿದರು.ತಾಳೂರು ರಸ್ತೆಯಲ್ಲಿರುವ ಪ್ಯೂಪಿಲ್ ಟ್ರೀ ಪಿ.ಯು ಕಾಲೇಜು ಕಳೆದ 18 ವರ್ಷಗಳಿಂದ ಓಇಇಖಿ ಹಾಗೂ ಶೈಕ್ಷಣಿಕ ತರಬೇತಿಯಲ್ಲಿ ವಿಶ್ವಾಸಾರ್ಹ ಸಂಸ್ಥೆಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಕಾಲೇಜಿನ ವೈಸ್ ಪ್ರಿನ್ಸಿಪಾಲ್ ವೈಷ್ಣವಿ, ಗಂಗಣ್ಣ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಚಿಂತೆ ಶರೀರಕ್ಕೆ ಆತ್ಮಕ್ಕಲ್ಲ :ಎಸ್ ಎಸ್ ಡೋಣುರ

• ಮಲ್ಲಮ್ಮ ನುಡಿ ವಾರ್ತೆಬಸವನಬಾಗೇವಾಡಿ



ಮನುಷ್ಯನಿಗೆ ಚಿಂತೆ ಬರುವುದು ಶರೀರಕ್ಕೆ, ಹೊರತು ಆತ್ಮಕ್ಕಲ್ಲ ಎಂದು ಸ್ಥಳೀಯ ಈಶ್ವರೀಯ ಬ್ರಹ್ಮಕುಮಾರಿ ವಿಶ್ವವಿದ್ಯಾಲಯದ ಹಿರಿಯ ವಿದ್ಯಾರ್ಥಿ ಸುಬ್ಬರಾಯ ಸಂಗಪ್ಪ ಡೋಣುರ ಅಭಿಪ್ರಾಯಪಟ್ಟರು.

ಪಟ್ಟಣದ ಈಸ್ವರೀಯ ವಿದ್ಯಾಲಯದಲ್ಲಿ ಗುರುವಾರ ಬೆಳಿಗ್ಗೆ ಆಯೋಜಿಸಿದ್ದ ಅವರ 93ನೇ ವರ್ಷದ ಜನ್ಮದಿನೋತ್ಸವ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಶರೀರದ ಮೋಹ ತ್ಯಜಿಸಿ ಆತ್ಮದ ಅಭಿಮಾನ ಬೆಳೆಸಿಕೊಳ್ಳಬೇಕಾಗಿದೆ.

ಇಲ್ಲಿ ನಿತ್ಯ ವಾಣಿ ಆಲಿಸಿ ಜೀವನದಲ್ಲಿ ಅಳವಡಿಸಿಕೊಳ್ಳುವುದರಲ್ಲಿ ಬದುಕು ಸಾರ್ಥಕವಾಗುತ್ತದೆ ಎಂದರು.

ಬಿ.ಕೆ ಸುರೇಖಾ ಅಕ್ಕನವರು ಮಾತನಾಡಿ ಡೋಣುರ ಅಣ್ಣನವರು ಇಲ್ಲಿಗೆ ಕಳೆದ 47 ವರ್ಷಗಳಿಂದ ವಿದ್ಯಾರ್ಥಿಯಾಗಿ ಪ್ರತಿ ಭಾನುವಾರ ಹಾಗೂ ಗುರುವಾರ ತಪ್ಪದೇ ಆಗಮಿಸುತ್ತಾರೆ. ಇವರು ತಾವಲ್ಲದೇ ಇಡೀ ಕುಟುಂಬ ಪರಿವಾರವನ್ನೇ ವಿದ್ಯಾಲಯಕ್ಕೆ ವಿದ್ಯಾರ್ಥಿಗಳನ್ನಾಗಿ ಸೇರಿಸಿದ ಶ್ರೇಯಸ್ಸು ಅವರಿಗೆ ಸಲ್ಲುತ್ತದೆ ಎಂದರು.

ಈ ಸಂದರ್ಭದಲ್ಲಿ ಬಿಕೆ ಪ್ರಕಾಶ, ಪ್ರಿಯದರ್ಶಿನಿ, ಭಾಗ್ಯ ಅಕ್ಕಂದಿರು, ರಮೇಶ ಡೋಣುರ, ಗೀತಾ, ಲತಾ, ಅನ್ನಪೂರ್ಣ, ವಿನಾಯಕ, ಪೂಜಾ, ಸೃಜನ, ಸೌಭಾಗ್ಯ, ನಿಖಿಲ, ರಾಘವೇಂದ್ರ, ವಿಠ್ಠಲ ಸೇರಿದಂತೆ ಡೋಣುರ ಪರಿವಾರ ಹಾಗೂ ಇತರೆ ಅಣ್ಣಂದಿರು ಹಾಗೂ ಅಕ್ಕಂದಿರು ಹಾಜರಿದ್ದರು. ನಂತರ ಕೇಕ್ ಕತ್ತರಿಸಿ ಸಿಹಿ ಹಂಚಿ ಸಂಭ್ರಮಿಸಿದರು.

ವಿದ್ಯಾಲಯದ ಮುಖ್ಯ ಉದ್ದೇಶ ರಾಜಯೋಗ ಧ್ಯಾನದ ಮೂಲಕ ಮನುಷ್ಯರಲ್ಲಿ ಆತ್ಮಜ್ಞಾನ, ಶಾಂತಿ, ಪ್ರೀತಿ, ಪವಿತ್ರತೆ ತುಂಬಿ ಸ್ವರ್ಣಯುಗ ಸ್ಥಾಪನೆ ಮಾಡುವುದು. ನಿರಾಕಾರ ಶಿವ ಪರಮಾತ್ಮನೇ ಎಲ್ಲರ ತಂದೆ.

ಬಿಕೆ ಸುರೇಖಾ ಅಕ್ಕನವರು,
ಈಶ್ವರೀಯ ವಿ.ವಿ.ಬಸವನಬಾಗೇವಾಡಿ.

# ಗೊಂಡ ಕುರುಬ ನೌಕರರ ಸಂಘಕ್ಕೆ ನೂತನ ಪದಾಧಿಕಾರಿಗಳ ಆಯ್ಕೆ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ



ಪಟ್ಟಣದ ಕನಕ ಭವನದಲ್ಲಿ ಇತ್ತೀಚೆಗೆ ನಡೆದ ತಾಲೂಕು ಗೊಂಡ (ಕುರುಬ) ನೌಕರರ ಸಂಘದ ಸಭೆಯಲ್ಲಿ ಸಂಘದ ನೂತನ ಪದಾಧಿಕಾರಿಗಳನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.ತಾಲೂಕು ಅಧ್ಯಕ್ಷ ನಿರಂಜಪ್ಪ ಪಾತ್ರೆ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಸಂಘದ ಸಂಘಟನೆ ಬಲಪಡಿಸುವುದು, ಸಮಾಜದ ಅಭಿವೃದ್ಧಿಗೆ ಕೈಜೋಡಿಸುವುದು ಹಾಗೂ ನೌಕರರ ಸಮಸ್ಯೆಗಳ ಪರಿಹಾರಕ್ಕಾಗಿ ಸಂಘದ ಚಟುವಟಿಕೆಗಳನ್ನು ವಿಸ್ತರಿಸುವ ಕುರಿತು ಚರ್ಚೆ ನಡೆಯಿತು.ಸಭೆಯಲ್ಲಿ ಶ್ರೀಮಂತ ಗಣೇಶವಾಡೆ ಅವರನ್ನು ಗೌರವಾಧ್ಯಕ್ಷರಾಗಿ, ಅರ್ಜುನ ಸೂರ್ಯವಂಶಿ ಅವರನ್ನು ಅಧ್ಯಕ್ಷರಾಗಿ, ಸತೀಶ ಸಿದ್ದೇಶ್ವರೆ ಮತ್ತು ಮಹಾನಂದಾ ಅಪ್ಪೆ ಅವರನ್ನು ಉಪಾಧ್ಯಕ್ಷರಾಗಿ ಆಯ್ಕೆ ಮಾಡಲಾಯಿತು. ಆನಂದ ಹಳೆಂಬುರೆ ಪ್ರಧಾನ ಕಾರ್ಯದರ್ಶಿಯಾಗಿ, ದೇವಿದಾಸ ಮೇತ್ರೆ ಖಜಾಂಚಿಯಾಗಿ ಹಾಗೂ ಅಮೋಲ ಮೇತ್ರೆ ಸಹ ಖಜಾಂಚಿಯಾಗಿ ನೇಮಕಗೊಂಡರು.

ಡಾ. ಕಾಮರಾಯ ಜಗ್ಗಿನವರ ಹಾಗೂ ಸತೀಶ ಗುಂಜರ್ಗೆ ಸಂಘಟನಾ ಕಾರ್ಯದರ್ಶಿಗಳಾಗಿ, ಬಸವಂತ ಶೇರಿಕಾರ, ಮಾರುತಿ ಬಾನೆ ಹಾಗೂ ಅಂಬ್ರೆಶ ದೇಸೊಳೆ ಸಹ ಸಂಘಟನಾ ಕಾರ್ಯದರ್ಶಿಗಳಾಗಿ ಜವಾಬ್ದಾರಿ ವಹಿಸಿಕೊಂಡರು. ಅಶೋಕ ಮಲ್ಲೇಶಿ ಮತ್ತು ಪಂಡಿತ ಬಿರಾದಾರ ಸಹ ಕಾರ್ಯದರ್ಶಿಗಳಾಗಿ ಆಯ್ಕೆಯಾಗಿದ್ದು, ರಮೇಶ ಬರ್ಮಾ ಹಾಗೂ ಮಾದಪ್ಪ ಜಬಾಡೆ ಗೌರವ ಸಲಹೆಗಾರರಾಗಿ ನೇಮಕಗೊಂಡರು.

ನೂತನ ಅಧ್ಯಕ್ಷ ಅರ್ಜುನ ಸೂರ್ಯವಂಶಿ ಮಾತನಾಡಿ, ಸಮಾಜದ ಶೈಕ್ಷಣಿಕ, ಸಾಮಾಜಿಕ ಹಾಗೂ ನೌಕರರ ಹಿತಾಸಕ್ತಿಗಾಗಿ ಸಂಘವನ್ನು ಇನ್ನಷ್ಟು ಕ್ರಿಯಾಶೀಲಗೊಳಿಸಲಾಗುವುದು ಎಂದು ಹೇಳಿದರು.

ಸಭೆಯಲ್ಲಿ ಶಿವಶರಣಪ್ಪ ಛತ್ರೆ, ಅಶೋಕ ಬರ್ಮಾ, ಬಾಜಿರಾವ ಮೇತ್ರೆ, ಭೀಮರಾವ ಗೀರಿ, ಹಣಮಶೆಟ್ಟಿ ಸಿದ್ದೇಶ್ವರೆ, ದಯಾನಂದ ಕಣಜೆ, ಶಿವಾಜಿ ದಂಡಿನ, ಅಶೋಕ ಮೊಸಳೆ, ಮಲ್ಲಿಕಾರ್ಜುನ ಮಲ್ಲೇಶಿ, ದತ್ತು ಮುದ್ದಾಳೆ, ಜಾಲಿಂದರ ಮೇತ್ರೆ, ದೀಪಕ ಹೊನ್ನಾಳೆ, ಅನ್ನಪೂರ್ಣಾ ಮೇತ್ರೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ವೆಂಕಟ ಮಲಗೊಂಡಾ ಸ್ವಾಗತಿಸಿದರು. ಚಂದ್ರಕಾಂತ ತಳವಾಡೆ ಕಾರ್ಯಕ್ರಮ ನಿರೂಪಿಸಿ, ಬೀರಣ್ಣ ಭೂರೆ ವಂದಿಸಿದರು.



ವಿಜಯನಗರ(ಹೊಸಪೇಟೆ): ಭಯೋತ್ಪಾದನಾ ವಿರೋದಿ ದಿನಾಚರಣೆ ಅಂಗವಾಗಿ ಗುರುವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್ ಪ್ರತಿಜ್ಞಾವಿಧಿ ಭೋಧಿಸಿದರು. ಈ ವೇಳೆ ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ವಿವಿಧ ಇಲಾಖೆ ಅಧಿಕಾರಿಗಳು ಸಿಬ್ಬಂದಿ ಇದ್ದರು.



ಕೊಪ್ಪಳ : ಭಯೋತ್ಪಾದನಾ ವಿರೋಧಿ ದಿನದ ಅಂಗವಾಗಿ ಕೊಪ್ಪಳ ಜಿಲ್ಲಾಡಳಿತದ ವತಿಯಿಂದ ಪ್ರಮಾಣ ವಚನ ಸ್ವೀಕಾರ ಕಾರ್ಯಕ್ರಮವು ಗುರುವಾರ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆಯಿತು.ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಪ್ರಮಾಣ ವಚನ ಬೋಧಿಸಿದರು. ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ, ಜಿಲ್ಲಾ ಖಜಾನಾಧಿಕಾರಿಗಳಾದ ಕೆ.ಸುರೇಶ್ ಸೇರಿದಂತೆ ವಿವಿಧ ಇಲಾಖೆಗಳ ಹಾಗೂ ಜಿಲ್ಲಾಧಿಕಾರಿಗಳ ಕಚೇರಿಯ ಅಧಿಕಾರಿಗಳು ಮತ್ತು ಸಿಬ್ಬಂದಿ ಇದೇ ಸಂದರ್ಭದಲ್ಲಿ ಉಪಸ್ಥಿತರಿದ್ದು, ಪ್ರಮಾಣ ವಚನ ಸ್ವೀಕರಿಸಿದರು.



ಇತ್ತೀಚೆಗೆ ಕೇರಳ ರಾಜ್ಯದಲ್ಲಿ ನಡೆದ ವಿಧಾನಸಭಾ ಚುನಾವಣೆಯಲ್ಲಿ ಕೋಝಿಕೋಡ್ ಜಿಲ್ಲೆಯ ಎಳತ್ತೂರು ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಸ್ಪರ್ಧಿಸಿ ವಿಜಯಶಾಲಿಯಾದ ವಿದ್ಯಾ ಬಾಲಕೃಷ್ಣನ್ ರವರನ್ನು ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಉಪಾಧ್ಯಕ್ಷರು ಹಾಗೂ ಎಳತ್ತೂರು ವಿಧಾನಸಭಾ ಕ್ಷೇತ್ರದ ಚುನಾವಣಾ ಕ್ಷೇತ್ರದ ಉಸ್ತುವಾರಿಯಾಗಿರುವ ಡಾ. ಪುಷ್ಪ ಅಮರನಾಥ್ ಗುರುವಾರದಂದು ಕೇರಳದ ತಿರುವನಂತಪುರಂ ವಿಧಾನಸೌಧದಲ್ಲಿ ಭೇಟಿ ಮಾಡಿ ಶುಭ ಕೋರಿದರು. ಈ ವೇಳೆ ಶಾಸಕಿ ವಿದ್ಯಾಬಾಲಕೃಷ್ಣನ್ ಕುಟುಂಬಸ್ಥರು ಇದ್ದಾರೆ.

# ಯಾಜಕ ದೀಕ್ಷೆಯ 25 ನೇ ವರ್ಷದ ಬೆಳ್ಳಿ ಮಹೋತ್ಸವ



• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ತಾಲೂಕಿನ ಹನಗೋಡು ಹೋಬಳಿಯ ಕೂಡ್ಲೂರು ಗ್ರಾಮದ ನಿವಾಸಿ ಹಾಗೂ ಮೈಸೂರಿನ ಆರ್ ಬಿ ಐ ಸಮೀಪವಿರುವ ಚರ್ಚ್ ನ ಧರ್ಮಗುರು

ಪೂಜ್ಯ ವಂ. ಗುರು ಜೋಸೆಫ್ ಮರಿ ಎ. ರವರು ಪವಿತ್ರ ಯಾಜಕ ದೀಕ್ಷೆಯನ್ನು ಸ್ವೀಕರಿಸಿ 25 ವರ್ಷಗಳಾದ ಹಿನ್ನಲೆಯಲ್ಲಿ ಯಾಜಕ ದೀಕ್ಷೆಯ 25 ನೇ ವರ್ಷದ ಬೆಳ್ಳಿ ಮಹೋತ್ಸವವನ್ನು ಸಂಭ್ರಮ ಸಡಗರದಿಂದ ಆಚರಿಸಿದರು.

ಕೂಡ್ಲೂರು ಗ್ರಾಮದ ಅಮಲೋದ್ಭವ ಮಾತೆಯ ದೇವಾಲಯದಲ್ಲಿ ಮೈಸೂರು ಧರ್ಮಾಧ್ಯಕ್ಷರಾದ ಪೂಜ್ಯ ಡಾ। ಫ್ರಾನ್ಸಿಸ್ ಸೆರಾವೋ ಎಸ್.ಜೆ. ರವರು ಆಶೀರ್ವಚನ ಮಾಡಿದರು.

ಯಾಜಕ ದೀಕ್ಷೆಯ 25 ನೇ ವರ್ಷದ ಬೆಳ್ಳಿ ಮಹೋತ್ಸವವನ್ನು ಆಚರಿಸಿಕೊಳ್ಳುತ್ತಿರುವ

ಪೂಜ್ಯ ವಂ. ಗುರು ಜೋಸೆಫ್ ಮರಿ ಎ. ರವರ ನಿವಾಸಕ್ಕೆ

ಮಾಜಿ ಶಾಸಕ ಹಾಗೂ ಸ್ನೇಹಜೀವಿ ಎಚ್ ಪಿ ಮಂಜುನಾಥ್ ಭೇಟಿ ನೀಡಿ ಪೂಜ್ಯ ವಂ. ಗುರು ಜೋಸೆಫ್ ಮರಿ ಎ. ರವರಿಗೆ ಸನ್ಮಾನಿಸಿ, ಶುಭ ಕೋರಿ ಪೂಜ್ಯ ಗುರುಗಳು ಧರ್ಮಸಭೆಯ ಸೇವೆಯಲ್ಲಿ ನಿಷ್ಠೆಯಿಂದ ಮತ್ತು ಭಕ್ತಿಯಿಂದ ಪಾಲನ ಸೇವೆ ನಿರ್ವಹಿಸುತ್ತಾ ಹಾಗೂ ದೈವ ಜನರ ಪಾಲನ ಸೇವೆಯಲ್ಲಿ ಪ್ರಭು ಯೇಸು ಕ್ರಿಸ್ತರ ಕೃಪೆಯನ್ನು ಅನುಭವಿಸುತ್ತಾ ಬಂದಿದ್ದಾರೆ. ಈ ದಿವ್ಯ ಅದ್ಭುತ ಕ್ಷಣಕ್ಕಾಗಿ ಸರ್ವಶಕ್ತ ದೇವರಿಗೆ ಹಾಗೂ ಯಾಜಕ ದೀಕ್ಷೆಯ 25 ನೇ ವರ್ಷದ ಬೆಳ್ಳಿ ಮಹೋತ್ಸವವನ್ನು ಆಚರಿಸಿಕೊಳ್ಳುತ್ತಿರುವ ಗುರುಗಳಾದ ಜೋಸೆಫ್ ಮರಿ ಎ. ರವರಿಗೆ ಕೃತಜ್ಞತೆಯನ್ನು ಅರ್ಪಿಸುತ್ತೇನೆಂದು ತಿಳಿಸಿ ಇದಲ್ಲದೆ ಅವರ ಕುಟುಂಬ ವರ್ಗದವರಿಗೂ ಅಭಿನಂದನೆ ತಿಳಿಸಿದರು.

ಈ ವೇಳೆ ಗ್ರಾಮದ ಮುಖಂಡರಾದ ಕುಮಾರ್, ಸಂತೋಷ್, ರಾಯಪ್ಪ, ಅಂತಪ್ಪ, ಅಂಜಲಿ, ಹೃದಯರಾಜ್, ಜಿಲ್ಲಾ ಜಾಗೃತ ಹಾಗೂ ಉಸ್ತುವಾರಿ ಸಮಿತಿ ಸದಸ್ಯ ನೇರಳಕುಪ್ಪೆ ಮಹದೇವ್ ಸೇರಿದಂತೆ ಇತರರು ಇದ್ದರು.

ಕರ್ನಾಟಕ ಸರ್ಕಾರ
**ಜಿಲ್ಲಾ ಪಂಚಾಯತ್ ಬೀದರ.**
**ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ**
**ಸಹಾಯಕ ನಿರ್ದೇಶಕರ ಕಛೇರಿ, ನೆಹರು ಕ್ರೀಡಾಂಗಣ ಬೀದರ –585401**
ದೂರವಾಣಿ ಹಾಗೂ ಫ್ಯಾಕ್ಸ್: 08482–226681. ಇ–ಮೇಲ್:adyssbdr@yahoo.in

ಸಂ:ಸನಿ/ಯುಸೆಕ್ರೀಇ/ಬಿ/ಸಿಆರ್–/2026–27 ದಿನಾಂಕ: 21–05–2026

**ದರಪಟ್ಟಿ ಅಹ್ವಾನ**

2026–27ನೇ ಸಾಲಿನ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಬೀದರ ಇವರಿಗೆ ಸರ್ಕಾರಿ ಅಧಿಕೃತ ಕೆಲಸಗಳಿಗಾಗಿ ನಾಲ್ಕು ಚಕ್ರದ ವಾಹನ ಈ ಕಾರ್ಯಾಲಯದಲ್ಲಿ ಇಲ್ಲದಿರುವುದರಿಂದ ವಾಹನವನ್ನು ಬಾಡಿಗೆ ಆಧಾರದ ಮೇಲೆ ಪಡೆಯುವುದು ಅವಶ್ಯಕತೆ ಇರುವುದರಿಂದ ಆಸಕ್ತ ಟ್ರಾವೇಲ್ಸ್ ಏಜೇನ್ಸಿಯವರು ಭಾಗವಹಿಸಬಹುದು. ದರಪಟ್ಟಿ ಮಾಹಿತಿಯನ್ನು ಸದರಿ ಕಛೇರಿಯಲ್ಲಿ ಪಡೆಯಬಹುದು. ಟೆಂಡರ್ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 29–05–2026 ಅಪರಾಹ್ನ 5.00 ಗಂಟೆಯವರೆಗೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂ: 9591609691 ಸಂಪರ್ಕಿಸಿ ಕಛೇರಿಯ ಸಮಯದಲ್ಲಿ ಮಾಹಿತಿ ಪಡೆಯಬಹುದು.

ಸಹಿ/– ಸಹಾಯಕ ನಿರ್ದೇಶಕರು
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ,ಬೀದರ.

ವಾ.ಸಾ.ಸಂ.ಇ/ಬೀದರ/38/ಕೆ.ಎಸ್.ಎಂ.ಸಿ.&ಎ/2026–27

# ಯಾದಗಿರಿ ಜಿಲ್ಲೆಯ ನೂತನ ಜಿಲ್ಲಾಧಿಕಾರಿಯಾಗಿ ರಾಹುಲ್ ಪಾಂಡ್ವೆ ಅಧಿಕಾರ ಸ್ವೀಕಾರ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ




ಮೇ:21: ಯಾದಗಿರಿ ಜಿಲ್ಲೆಯ ನೂತನ ಜಿಲ್ಲಾಧಿಕಾರಿಯಾಗಿ ರಾಹುಲ್ ಪಾಂಡ್ವೆ ತುಕಾರಾಮ್ ಅವರು ಇಂದು ಅಧಿಕಾರ ವಹಿಸಿಕೊಂಡಿದ್ದು,ನಿರ್ಗಮಿತ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ಅಧಿಕಾರ ಹಸ್ತಾಂತರಿಸಿದರು.

2016 ನೇ ವೃಂದದ ಐಎಎಸ್ ಅಧಿಕಾರಿಗಳಾದ ಶ್ರೀ ರಾಹುಲ್ ಪಾಂಡ್ವೆ ಅವರು ಕಲ್ಬುರ್ಗಿ ವಿಭಾಗದ ಸಾರ್ವಜನಿಕ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಹೆಚ್ಚುವರಿ ಆಯುಕ್ತರಾಗಿ ಕಾರ್ಯನಿರ್ವಹಿಸುತ್ತಿದ್ದರು. ಇದೀಗ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಆದೇಶದನ್ವಯ ಯಾದಗಿರಿ ನೂತನ ಜಿಲ್ಲಾಧಿಕಾರಿಯಾಗಿ ಇಂದು ಅವರು ಅಧಿಕಾರ ವಹಿಸಿಕೊಂಡಿದ್ದಾರೆ.

ಶ್ರೀ ರಾಹುಲ್ ಪಾಂಡ್ವೆ ಅವರು ರಾಯಚೂರು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿಗಳಾಗಿ, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿಯ ವ್ಯವಸ್ಥಾಪಕ ನಿರ್ದೇಶಕರಾಗಿ, ಕಲ್ಬುರ್ಗಿ ನಗರ ಪಾಲಿಕೆ ಆಯುಕ್ತರಾಗಿ, ದಾವಣಗೆರೆ ಜಿಲ್ಲೆಯ ಹರಪ್ಪನಹಳ್ಳಿ ಹಾಗೂ ಕಲ್ಬುರ್ಗಿ ಸಹಾಯಕ ಆಯುಕ್ತರಾಗಿ ಸೇವೆ ಸಲ್ಲಿಸಿದ ಅನುಭವ ಹೊಂದಿದ್ದಾರೆ.

ಕಲ್ಕತ್ತಾ ಐಐಎಮ್ ದಿಂದ ಎಮ್ ಬಿ ಎ ಮುಗಿಸಿರುವ ಅವರು, ಪುಣೆ ಯುನಿವರ್ಸಿಟಿಯಿಂದ ಬಿಎಸ್ಸಿ ಪದವಿ ಪಡೆದಿದ್ದಾರೆ.

ನಿರ್ಗಮಿತ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ಈಗ ವಿದ್ಯುನ್ಮಾನ ನಾಗರಿಕ ಸೇವಾ ವಿತರಣಾ ನಿರ್ದೇಶನಾಲಯದ (ಇಡಿಸಿಎಸ್) ನಿರ್ದೇಶಕರಾಗಿ ವರ್ಗಾವಣೆಗೊಂಡಿದ್ದಾರೆ.

# ಕೇಂದ್ರದ ವಿರುದ್ಧ ಮೇಟಿ ವಾಗ್ದಾಳಿ ದೇಶದಲ್ಲಿ ಆರ್ಥಿಕ ಸಮಸ್ಯೆ ಉಲ್ಬಣ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ದೇಶದಲ್ಲಿ ಆರ್ಥಿಕ ಸಮಸ್ಯೆಯ ಬಿರುಗಾಳಿ ಉಲ್ಬಣಿಸುತ್ತಿದೆ. ರೈತರು, ಕಾರ್ಮಿಕರು, ವ್ಯಾಪಾರಿಗಳು ಕಣ್ಣೀರು ಸುರಿಸುತ್ತಿದ್ದಾರೆ ಎಂದು ಕೆಪಿಸಿಸಿ ಪ್ರಚಾರ ಸಮಿತಿ ರಾಜ್ಯ ಉಪಾಧ್ಯಕ್ಷ ಡಾ. ಭೀಮಣ್ಣ ಮೇಟಿ ಗಂಭೀರವಾಗಿ ಆರೋಪಿಸಿದರು.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ದೇಶ ಭಾರಿ ಸಂಕಷ್ಟದಲ್ಲಿ ಇದ್ದರೂ ಕೂಡ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇದನ್ನು ಗಂಭೀರವಾಗಿ ಪರಿಗಣಿಸದಿರುವುದು ನಿಜಕ್ಕೂ ಸಹ ಅತ್ಯಂತ ಮಾರಕವಾದ ಬೆಳವಣಿಗೆಯಾಗಿದೆ ಎಂದು ಹೇಳಿದರು.

ಬಡ ಹಾಗೂ ಮಧ್ಯಮ ವರ್ಗದವರು ಜೀವನ ನಡೆಸಲು ಆಗುತ್ತಿಲ್ಲ. ಅಗತ್ಯ ವಸ್ತುಗಳ ಬೆಲೆ ದಿನದಿಂದ ದಿನಕ್ಕ ಗಗನಕ್ಕೇರುತ್ತಿವೆ. ಇನ್ನೂ ಇಂಧನ ಬೆಲೆಯಂತೂ ಹೇಳುವಂತಹ ಪರಿಸ್ಥಿತಿಯಿಲ್ಲ. ಇದರ ಕಡೆಗೆ ಗಮನ ಹರಿಸುವ ಮೂಲಕ ಬೆಲೆ ನಿಯಂತ್ರಣ ಮಾಡಬೇಕಾದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ದೂರು ಉಳಿದುಕೊಂಡಿದ್ದಾರೆ ಎಂದರು.

ದೇಶದ ಜನತೆ ಸಂಕಷ್ಟದಲ್ಲಿ ಇದ್ದಾರೆ. ಇದನ್ನು ನಿವಾರಣೆ ಮಾಡುವುದು ಕೇಂದ್ರ ಸರಕಾರದ ಜವಾಬ್ದಾರಿ ಆಗಿದೆ. ಆದರೆ ಅವರು ಮಾತ್ರ ಇದಕ್ಕೂ ತಮಗೂ ಯಾವುದೇ ರೀತಿಯಿಂದ ಸಂಬಂಧವೇ ಇಲ್ಲ ಎಂಬಂತೆ ವರ್ತನೆ ಮಾಡುತ್ತಿರುವುದು ದೇಶದ ಜನರಲ್ಲಿ ಆಕ್ರೋಶ ಮೂಡಿದೆ ಎಂದು ಕಿಡಿಕಾರಿದರು.

ಯುವ ಜನತೆ ಉದ್ಯೋಗ ಇಲ್ಲದೇ ಪರದಾಡುತ್ತಿದ್ದಾ-ರೆ. ಉದ್ಯೋಗ ಕೇಳಿದ್ರೆ ಗೃಹ ಸಚಿವರು ಯುವ ಜನತೆಗೆ ಪಕೋಡಾ ಮಾರಾಟ ಮಾಡಿ ಜೀವನ ಮಾಡಬೇಕು ಎನ್ನುತ್ತಾರೆ. ದೇಶ ಯಾವ ದಿಕ್ಕಿನಲ್ಲಿ ಸಾಗುತ್ತಿದೆ ಎಂಬುದು ತಿಳಿಯದಂತಾಗಿರುವುದು ಕಳವಳಕಾರಿ ಸಂಗತಿಯಾಗಿದೆ ಎಂದು ಹೇಳಿದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇದೇ ರೀತಿಯಾಗಿ ಮನಸ್ಸಿಗೆ ಬಂದಂತೆ ಆಡಳಿತ ನಡೆಸುತ್ತಿದ್ದರೇ ಮುಂದಿನ ದಿನಗಳಲ್ಲಿ ದೇಶದ ಜನತೆಯೇ ತಕ್ಕಪಾಠ ಕಲಿಸಲಿದ್ದಾರೆ. ಬೀದಿಗಿಳಿದು ಹೋರಾಟ ಮಾಡುವಂತಹ ಕಾಲಗಳು ಸಹ ದೂರವಿಲ್ಲ ಎಂದು ಎಚ್ಚರಿಕೆ ನೀಡಿದರು.

ಅಭಿವೃದ್ಧಿ ಹೆಸರಿನಲ್ಲಿ ಆಡಳಿತಕ್ಕೆ ಬಂದ ಬಿಜೆಪಿ ಬರೀ ಕೇಂದ್ರದಲ್ಲಿ ಸುಳ್ಳಿನ ಕಂತೆಗಳನ್ನು ಪೋಣಿಸುವ ಮೂಲಕ ಆಡಳಿತ ಮಾಡುತ್ತಿದ್ದಾರೆ. ಪ್ರಗತಿ ಎಂಬುದು ಸಂಪೂರ್ಣವಾಗಿ ಶೂನ್ಯವಾಗಿದೆ. ಇನ್ನೂ ಪ್ರಜಾಪ್ರಭುತ್ವ ವ್ಯವಸ್ಥೆಯನ್ನೇ ಮುಗಿಸುವಂತಹ ಕೆಲಸ ಬಿಜೆಪಿ ಸರಕಾರ ಮಾಡುತ್ತಿದೆ ಎಂದರು.

# ರಾಷ್ಟ್ರೀಯ ಹೆದ್ದಾರಿ 50 ರ ಕಮಲನಗರ ಪಟ್ಟಣದ ವಿಭಜಕಗಳ ಮಧ್ಯದ ವಿದ್ಯುತ್ ದೀಪಗಳ ದುರಸ್ತಿಗೆ ಒತ್ತಾಯಿಸಿ ಮನವಿ



• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಪಟ್ಟಣದ ರಾಷ್ಟ್ರೀಯ ಹೆದ್ದಾರಿ 50 ಕ್ಕೆ ಹೊಂದಿಕೊಂಡಿರುವ ಕಮಲನಗರ ಪಟ್ಟಣದ ದಾದಾರಾ ಸೇತುವೆಯಿಂದ ಬಿ.ಆರ್. ತೆಲಂಗಾ ಫಂಕ್ಷನ್ ಹಾಲ್‌ವರೆಗಿನ ರಸ್ತೆ ವಿಭಜಕಗಳ (ಡಿವೈಡರ್) ಮಧ್ಯದಲ್ಲಿರುವ ಬೀದಿ ದೀಪಗಳು ಕಳೆದ ಎರಡು ತಿಂಗಳಿಂದ ಕೆಟ್ಟು ಹೋಗಿದ್ದು, ಇಡೀ ರಸ್ತೆ ಕತ್ತಲೆಯಲ್ಲಿ ಮುಳುಗಿದೆ. ಈ ಹಿನ್ನೆಲೆಯಲ್ಲಿ ಸಾರ್ವಜನಿಕರ ಮತ್ತು ವಾಹನ ಸವಾರರ ಹಿತದೃಷ್ಟಿಯಿಂದ ವಿದ್ಯುತ್ ದೀಪಗಳನ್ನು ತಕ್ಷಣವೇ ದುರಸ್ತಿಗೊಳಿಸಬೇಕೆಂದು ಒತ್ತಾಯಿಸಿ ಕನ್ನಡ ಸೇನೆ ತಾಲ್ಲೂಕು ಅಧ್ಯಕ್ಷರಾದ ಶ್ರೀ ಜನಾರ್ಧನ ಸಾವರ್ಗೇಕರ್ ನೇತೃತ್ವದಲ್ಲಿ ತಹಶೀಲ್ದಾರ ಅಮಿತಕುಮಾರ ಕುಲಕರ್ಣಿ ಅವರ ಮುಖಾಂತರ ಬೀದರ್ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಕತ್ತಲೆಯಲ್ಲಿ ಮುಳುಗಿದ ಮುಖ್ಯ ರಸ್ತೆ:

ಈ ಮುಖ್ಯ ರಸ್ತೆಯಲ್ಲಿ ನಿತ್ಯ ಸಾವಿರಾರು ವಾಹನಗಳು ಸಂಚರಿಸುತ್ತವೆ. ಅಲ್ಲದೆ, ರೈಲ್ವೆ ನಿಲ್ದಾಣ, ಸೋನಾಳ ಮುಖ್ಯ ರಸ್ತೆ, ಮಿನಿ ಬಸ್ ತಂಗುದಾಣ ಹಾಗೂ ಆಸ್ಪತ್ರೆ ಕೂಡ ಇದೇ ರಸ್ತೆಯಲ್ಲಿದೆ. ರಾತ್ರಿ ಸಮಯದಲ್ಲಿ ಸುತ್ತಮುತ್ತಲಿನ ಗ್ರಾಮಸ್ಥರು ಹೈದರಾಬಾದ್, ಶಿರಡಿ, ಪುಣೆ, ಮುಂಬೈ ಸೇರಿದಂತೆ ವಿವಿಧ ನಗರಗಳಿಗೆ ಪ್ರಯಾಣಿಸಲು ಇದೇ ರಾಷ್ಟ್ರೀಯ ಹೆದ್ದಾರಿಯ ಮೂಲಕವೇ ರೈಲ್ವೆ ನಿಲ್ದಾಣ ಹಾಗೂ ಬಸ್ ತಂಗುದಾಣಗಳಿಗೆ ಹೋಗಬೇಕಾಗುತ್ತದೆ.

ಸಾರ್ವಜನಿಕರಲ್ಲಿ ಭೀತಿ:

ಕಳೆದ ಎರಡು ತಿಂಗಳಿಂದ ಬೀದಿ ದೀಪಗಳು ಉರಿಯದೆ ಇಡೀ ಪ್ರದೇಶ ಕತ್ತಲೆಯಿಂದ ಆವರಿಸಿರುವುದರಿಂದ ಸಾರ್ವಜನಿಕರು ಹಾಗೂ ಪ್ರಯಾಣಿಕರು ತೀವ್ರ ಆತಂಕ ಮತ್ತು ಭಯದ ನೆರಳಿನಲ್ಲಿ ಸಂಚರಿಸುವಂತಾಗಿದೆ. ಈ ಬಗ್ಗೆ ಈಗಾಗಲೇ ಪತ್ರಿಕೆಗಳಲ್ಲಿ ವರದಿಗಳು ಪ್ರಕಟವಾಗಿದ್ದರೂ, ಸಂಬಂಧಪಟ್ಟ ಅಧಿಕಾರಿಗಳು ಮಾತ್ರ ಯಾವುದೇ ಕ್ರಮ ಕೈಗೊಳ್ಳದೆ ಮೌನಕ್ಕೆ ಶರಣಾಗಿದ್ದಾರೆ ಎಂದು ಮನವಿಯಲ್ಲಿ ಆಕ್ರೋಶ ವ್ಯಕ್ತಪಡಿಸಲಾಗಿದೆ.

ತಕ್ಷಣದ ಕ್ರಮಕ್ಕೆ ಆಗ್ರಹ:

ಅಧಿಕಾರಿಗಳು ತಮ್ಮ ಬೇಜವಾಬ್ದಾರಿತನವನ್ನು ಬಿಟ್ಟು, ಕಮಲನಗರ ಪಟ್ಟಣದ ರಸ್ತೆ ವಿಭಜಕದಲ್ಲಿ ಕೆಟ್ಟು ನಿಂತಿರುವ ಎಲ್ಲಾ ವಿದ್ಯುತ್ ದೀಪಗಳನ್ನು ಕೂಡಲೇ ದುರಸ್ತಿ ಮಾಡಿಸಬೇಕು. ಆ ಮೂಲಕ ಪ್ರಯಾಣಿಕರು ಮತ್ತು ಸಾರ್ವಜನಿಕರ ಸುಗಮ ಹಾಗೂ ಸುರಕ್ಷಿತ ಸಂಚಾರಕ್ಕೆ ಅನುಕೂಲ ಮಾಡಿಕೊಡಬೇಕು ಎಂದು ಕನ್ನಡ ಸೇನೆ ತಾಲ್ಲೂಕು ಘಟಕ ಹಾಗೂ ಕಮಲನಗರದ ನಾಗರಿಕರು ಪ್ರಕಟಣೆಯ ಮೂಲಕ ತೀವ್ರವಾಗಿ ಒತ್ತಾಯಿಸಿದ್ದಾರೆ.ಈ ಸಂದರ್ಭದಲ್ಲಿ ಕನ್ನಡ ಸೇನೆ ತಾಲ್ಲೂಕು ಅಧ್ಯಕ್ಷರಾದ ಶ್ರೀ ಜನಾರ್ಧನ ಸಾವರ್ಗೇಕರ, ಕಲ್ಯಾಣರಾವ ಬಿರಾದಾರ, ವಿಜಯಕುಮಾರ ಸೂರ್ಯವಂಶಿ ಸೇರಿದಂತೆ ಪಟ್ಟಣದ ಪ್ರಮುಖ ಮುಖಂಡರು ಉಪಸ್ಥಿತರಿದ್ದರು.

# ಆರ್. ಹೊಸಳ್ಳಿಯಲ್ಲಿ ಉಚಿತ ಆರೋಗ್ಯ ಶಿಬಿರ ಯಶಸ್ವಿ




• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ತಾಲ್ಲೂಕಿನ ಆರ್. ಹೊಸಳ್ಳಿ ಗ್ರಾಮದಲ್ಲಿ ಡಾನ್ ಬೋಸ್ಕೊ ಮೊಬೈಲ್ ಕ್ಲಿನಿಕ್ ತಂಡವು ಸರ್ಕಾರಿ ಆಸ್ಪತ್ರೆ ಸೈದಾಪುರದ ಓಆಆ ಸಿಬ್ಬಂದಿಗಳ ಸಹಯೋಗದಲ್ಲಿ ಉಚಿತ ಆರೋಗ್ಯ ಶಿಬಿರವನ್ನು ಹಮ್ಮಿಕೊಂಡಿತು. ಕಾರ್ಯಕ್ರಮವು ಡಾನ್ ಬೋಸ್ಕೊ ಸಮಾಜ ಸೇವಾ ಕೇಂದ್ರದ ನಿರ್ದೇಶಕರಾದ ಫಾದರ್ ಶಾಬು ಫ್ರಾನ್ಸಿಸ್ ಅವರ ನೇತೃತ್ವದಲ್ಲಿ ಹನುಮಾನ್ ದೇವಸ್ಥಾನದ ಸಮೀಪದಲ್ಲಿ ನಡೆಯಿತು.

ಮೊಬೈಲ್ ಕ್ಲಿನಿಕ್ ಸಿಬ್ಬಂದಿಗಳಾದ ಸಿದ್ದಮ್ಮ (ಸ್ಟಾಫ್ ನರ್ಸ್), ಆರೋಗ್ಯ ಕಾರ್ಯಕರ್ತರಾದ ಮರೆಮ್ಮ ಮತ್ತು ಬಸವರಾಜ ಅವರು ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಿಕೊಟ್ಟರು. ಜೊತೆಗೆ ಸೈದಾಪುರ ಸರ್ಕಾರಿ ಆಸ್ಪತ್ರೆಯ ಸಿಬ್ಬಂದಿಗಳಾದ ಮಿಶಾಲ್ (Lab Technician) ಹಾಗೂ ಓಆಆ ಕೌನ್ಸಿಲರ್ ನಾಗೇಂದ್ರ ಸರ್ ಅವರು ಭಾಗವಹಿಸಿ ಆರೋಗ್ಯ ಸೇವೆ ನೀಡಿದರು.

ಶಿಬಿರದಲ್ಲಿ ಒಟ್ಟು 64 ಜನರು ಭಾಗವಹಿಸಿದ್ದು, ಇವರಲ್ಲಿ 36 ಪುರುಷರು, 27 ಮಹಿಳೆಯರು ಹಾಗೂ 1 ಮಗು ಸೇರಿದ್ದರು. ಭಾಗವಹಿಸಿದವರಿಗೆ ಉಚಿತವಾಗಿ ರಕ್ತದೊತ್ತಡ (BP) ಹಾಗೂ ರಕ್ತದಲ್ಲಿನ ಸಕ್ಕರೆ ಪ್ರಮಾಣ ಪರೀಕ್ಷೆಗಳನ್ನು ನಡೆಸಿ, ಅಗತ್ಯವಿರುವವರಿಗೆ ಉಚಿತ ಔಷಧಿಗಳನ್ನು ವಿತರಿಸಲಾಯಿತು.

BP ಮತ್ತು ಶುಗರ್ ಸಮಸ್ಯೆ ಹೊಂದಿರುವವರಿಗೆ ನಾಗೇಂದ್ರ ಸರ್ ಅವರು ಕೌನ್ಸಿಲಿಂಗ್ ನೀಡಿ, ಆರೋಗ್ಯಕರ ಆಹಾರ ಪದ್ಧತಿ, ವ್ಯಾಯಾಮ ಹಾಗೂ ನಿಯಮಿತ ಔಷಧ ಸೇವನೆಯ ಮಹತ್ವದ ಬಗ್ಗೆ ಮಾಹಿತಿ ನೀಡಿದರು. ಆರ್. ಹೊಸಳ್ಳಿ ಗ್ರಾಮದ ಆಶಾ ಕಾರ್ಯಕರ್ತೆಯರಾದ ರಾಮಲಿಂಗಮ್ಮ ಮತ್ತು ಸಾಬಮ್ಮ ಅವರು ಕಾರ್ಯಕ್ರಮ ಯಶಸ್ವಿಯಾಗಲು ಸಹಕರಿಸಿದರು.

ಈ ಕಾರ್ಯಕ್ರಮದಿಂದ ಗ್ರಾಮಸ್ಥರಲ್ಲಿ ಮಧುಮೇಹ, ರಕ್ತದೊತ್ತಡ ಹಾಗೂ ಇತರ ಅಸಂಕ್ರಾಮಕ ರೋಗಗಳ ಬಗ್ಗೆ ಜಾಗೃತಿ ಮೂಡಿತು. ಉಚಿತ ಆರೋಗ್ಯ ತಪಾಸಣೆ ಮತ್ತು ಔಷಧಿ ಸೌಲಭ್ಯ ಪಡೆದು ಗ್ರಾಮಸ್ಥರು ಸಂತೋಷ ವ್ಯಕ್ತಪಡಿಸಿದರು.

# ಮುಂಡಗೋಡ ತಾಲೂಕಿಗೆ ಅನಿರೀಕ್ಷಿತ ಭೇಟಿ, ಕಾಮಗಾರಿ ಸ್ಥಳದಲ್ಲಿ ಮನರೇಗಾ ಕೂಲಿಕಾರರ ಸಮಸ್ಯೆ ಆಲಿಸಿದ ಜಿ.ಪಂ ಸಿಇಒ.

• ಮಲ್ಲಮ್ಮ ನುಡಿ ವಾರ್ತೆ ಕಾರವಾರ



ಮೇ.21: ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ದಿಲೀಷ್ ಶಸಿ ಗುರುವಾರ ಮುಂಡಗೋಡ ತಾಲೂಕಿನಲ್ಲಿ ವಿವಿಧ ಗ್ರಾಮ ಪಂಚಾಯತ್, ಸರ್ಕಾರಿ ಕಟ್ಟಡ ಹಾಗೂ ಕಾಮಗಾರಿ ಸ್ಥಳಗಳಿಗೆ ಅನಿರೀಕ್ಷಿತ ಭೇಟಿ ನೀಡಿ, ಪರಿಶೀಲಿಸಿದರು.

ಮುಂಡಗೋಡ ತಾಲೂಕಿನ ಮಳಗಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಸ್ಮಶಾನಕಟ್ಟೆ ಕೆರೆ ಹೂಳೆತ್ತುವ ಕಾಮಗಾರಿ ಸ್ಥಳ ಪರಿಶೀಲಿಸಿ, ಕೂಲಿಕಾರರೊಂದಿಗೆ ಸಂವಾದ ನಡೆಸಿದರು. ಸ್ಥಳೀಯವಾಗಿ ಖಾಸಗಿ ಕೆಲಸಗಳಲ್ಲಿ ನರೇಗಾ ಕ್ಕಿಂತಲೂ ಕೂಲಿ ದರ ಹೆಚ್ಚಾಗಿದ್ದು, ಯೋಜನೆಯಡಿ ಕೂಲಿ ದರವನ್ನು ಹೆಚ್ಚಿಸಬೇಕು ಮತ್ತು ಬೇಸಿಗೆಯಲ್ಲಿ ರಿಯಾಯಿತಿ ನೀಡಬೇಕೆಂಬ ಕೂಲಿಕಾರರ ಬೇಡಿಕೆಗೆ ಸಕಾರಾತ್ಮಕವಾಗಿ ಸ್ಪಂದಿಸಿ, ಆಯುಕ್ತಾಲಯದ ಗಮನಕ್ಕೆ ತರುವುದಾಗಿ ತಿಳಿಸಿದರು.

ಬಳಿಕ ಮಳಗಿ ಹಾಗೂ ಪಾಳಾ ಗ್ರಾಮ ಪಂಚಾಯತಿ ಕಚೇರಿಗಳಿಗೆ ಭೇಟಿ ನೀಡಿ, ವಿವಿಧ ಯೋಜನೆಗಳ ಪ್ರಗತಿ ಮತ್ತು ಪ್ರಮುಖ ಕಡತಗಳನ್ನು ಪರಿಶೀಲಿಸಿ, ಅಗತ್ಯ ಸಲಹೆ ಸೂಚನೆಗಳನ್ನು ನೀಡಿದರು. ಇದೇ ವೇಳೆ ಗ್ರಂಥಾಲಯ, ಕೂಸಿನ ಮನೆಗಳನ್ನು ಪರಿವೀಕ್ಷಣೆ ಮಾಡಿದರು.

ಪಾಳಾ ಐಟಿಐ ಕಾಲೇಜಿಗೆ ಭೇಟಿ ನೀಡಿ, ಆಡಳಿತ ಕಚೇರಿ, ಲ್ಯಾಬ್, ಬೋಧನಾ ಕೊಠಡಿ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಪರಿಶೀಲಿಸಿ, ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ, ಕಾಲೇಜಿನಲ್ಲಿರುವ ಸಮಸ್ಯೆ ಮತ್ತು ಬೇಡಿಕೆಗಳನ್ನು ಆಲಿಸಿದರು. ನಂತರ ಇಂದೂರು ಗ್ರಾಮ ಪಂಚಾಯತ್ ವ್ಯಾಪ್ತಿಯ ಕೊಪ್ಪ ಗ್ರಾಮದಲ್ಲಿ ಬೂದು ನೀರು ನಿರ್ವಹಣೆಗಾಗಿ ಸಮುದಾಯ ಮಟ್ಟದಲ್ಲಿ ಚರಂಡಿಯಲ್ಲಿ ನೀರು ಸಂಸ್ಕರಣಾ ಘಟಕ ವೀಕ್ಷಣೆ ಮಾಡಿ, ಉತ್ತಮ ರೀತಿಯಲ್ಲಿ ನಿರ್ವಹಿಸುವಂತೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿ ಟಿ.ವಾಯ್. ದಾಸನಕೊಪ್ಪ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಹಾಯಕ ಅಭಿಯಂತರರಾದ ದೀಪಾ ಎಸ್ ಶೆಡಗೇರಿ, ಕಿರಿಯ ಅಭಿಯಂತರರಾದ ಪ್ರದೀಪ್ ಭಟ್, ಸಂಬಂಧಪಟ್ಟ ಗ್ರಾಪಂ ಪಿಡಿಒ, ನರೇಗಾ ತಾಂತ್ರಿಕ ಸಿಬ್ಬಂದಿ ಉಪಸ್ಥಿತರಿದ್ದರು.

# ಕಾನೂನು ಅರಿವು ಹಾಗೂ ನೆರವು ಕೇಂದ್ರ ಆರಂಭ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ




ಮೇ 21: ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಜಿಲ್ಲಾ ಕಾರಾಗೃಹ ಸಹಯೋಗದಲ್ಲಿ ಜಿಲ್ಲಾ ಕಾರಾಗೃಹದ ಮುಲಾಕತ್ ಸೇ ನ್ಯಾಯತಕ್ ಕಾನೂನು ಸಲಹಾ ಕೇಂದ್ರ ಪ್ರಾರಂಭವಾಯಿತು.

ಉಚಿತ ಕಾನೂನು ಅರಿವು ಹಾಗೂ ನೆರವು ಕೇಂದ್ರ ಆರಂಭಿಸಲಾಯಿತು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಗೌರವಾನ್ವಿತ ಶ್ರೀ ಮರಿಯಪ್ಪ ಅವರು ಮಾತನಾಡಿದರು.

ಈ ಕೇಂದ್ರದಲ್ಲಿ ಬಂಧಿಗಳ ಸಂಬಂಧಿಕರು, ಬಂಧನದಲ್ಲಿರವವರನ್ನು ಭೇಟಿಯಾಗಲು ಬಂದಂತಹ ಅವರ ಹಿತೈಷಿಗಳು, ಬಂಧಿಗಳು, ಆರೋಪಿಗಳು ಉಚಿತ ಕಾನೂನು ಮಾಹಿತಿಯನ್ನು ಹಾಗೂ ನೆರವು ಪಡೆಯಲು ಸಹಾಯಕವಾಗುತ್ತದೆ ಎಂದು ತಿಳಿಸಿದರು

ಈ ಕೇಂದ್ರಕ್ಕೆ ಶ್ರೀಮತಿ ಸುಷ್ಮಾ ಜಾದವ್, ಸಹಯಕ ಕಾನೂನು ಅಭಿರಕ್ಷಕರು, ಯಾದಗಿರಿ ಜಿಲ್ಲಾ ಕಾರಾಗೃಹದ ವಾರ್ಡನ್ ಶ್ರೀ ಎಸ್ ಎಸ್ ಪಾಟೀಲ್ ಉಪಸ್ಥಿತರಿದ್ದರು.

# ಇಂದು ಅಂಬಿಗರ ಚೌಡಯ್ಯ ಮೂರ್ತಿ ಪ್ರತಿಷ್ಠಾಪನೆ ಸಮಾಜದವರು ಭಾಗಿಯಾಗಲು ಜಾಲಗಾರ ಮನವಿ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



:ನಗರದ ಗಂಜ್ ಸರ್ಕಲ್ ನಲ್ಲಿ ಪ್ರತಿಷ್ಠಾಪಿಸಲು ಉದ್ದೇಶಿಸಿರುವ ನಿಜ ಶರಣ ಅಂಬಿಗರ ಚೌಡಯ್ಯ ಅವರ ಪಂಚಲೋಹದ ಮೂರ್ತಿಯನ್ನು ಕಲಬುರಗಿಯಲ್ಲಿ ಸಿದ್ದವಾಗಿದ್ದು, ಇಂದು ನಗರಕ್ಕೆ ತಂದು ಪೂಜಾ ವಿಧಿವಿಧಾನಗಳ ಮೂಲಕ ಸ್ವಾಗತಿಸಲಾಗುವುದು, ಜಿಲ್ಲಾಧಿಕಾರಿ ಕಚೇರಿ ಮುಂದಿನ ಮುದ್ನಾಳ್ ಸರ್ಕಲ್ ನಿಂದ ಮೂರ್ತಿಯ ಮೆರವಣಿಗೆ ಆರಂಭಿಸಲಾಗುವುದು. ಮುತ್ತೈತೆರಿಂದ ಗಂಗಾ ಸ್ಥಾನ ಮತ್ತು ಪೂಜೆ ಮಾಡಿ ನಂತರ ಗಂಜ್ ಸರ್ಕಲ್‌ವರೆಗೂ ಮೆರವಣಿಗೆ ಮೂಲಕ ತರಲಾಗುವುದು. ನಂತರ ಅಂಬಿಗರ ಚೌಡಯ್ಯ ಮೂರ್ತಿ ಪ್ರತಿಷ್ಠಾಪನೆ ಮಾಡಲಾಗುತ್ತದೆ, ಮೂರ್ತಿ ಉದ್ಘಾಟನೆಯನ್ನು ಅತೀ ಶೀಘ್ರದಲ್ಲೇ ಮಾಡಲಾಗುತ್ತದೆ ಆದ್ದರಿಂದ ಈ ಕಾರ್ಯಕ್ರಮವು ಬಹಳ ಅದ್ದೂರಿಯಾಗಿ ಮಾಡಲು ಸಮಾಜದ ಪ್ರತಿಯೊಂದು ಮನೆಯಿಂದ ಹೆಣ್ಣು ಮತ್ತು ಗಂಡು ಸೇರಿ ಬಂದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಕೋಲಿ ಕಬ್ಬಲಿಗ ಸಮಾಜದ ತಾಲೂಕು ಅಧ್ಯಕ್ಷ ನಿಂಗಪ್ಪ ಜಾಲಗಾರ, ಪತ್ರಿಕೆ ಹೇಳಿಕೆ ನೀಡುವ ಮುಖಾಂತರ ತಿಳಿಸಿದರು.

# ಜಿಲ್ಲಾ ಕಾರಾಗೃಹಕ್ಕೆ ಗೌರವಾನ್ವಿತ ನ್ಯಾಯಾಧೀಶ ಮರಿಯಪ್ಪ ಭೇಟಿ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಜಿಲ್ಲಾ ಕಾರಾಗೃಹ ಸಹಯೋಗದಲ್ಲಿ ಜಿಲ್ಲಾ ಕಾರಾಗೃಹದ ಮುಲಾಕತ್ ಸೇ ನ್ಯಾಯ ತಕ್ ಕಾನೂನು ಸಲಹಾ ಕೇಂದ್ರ ಪ್ರಾರಂಭವಾಯಿತು.

ಉಚಿತ ಕಾನೂನು ಅರಿವು ಹಾಗೂ ನೆರವು ಕೇಂದ್ರ ಆರಂಭಿಸಲಾಯಿತು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಗೌರವಾನ್ವಿತ ಶ್ರೀ ಮರಿಯಪ್ಪ ರವರು

ಈ ಕೇಂದ್ರದಲ್ಲಿ ಬಂಧಿಗಳ ಸಂಬಂಧಿಕರು, ಬಂಧನದಲ್ಲಿರವವರನ್ನು ಭೇಟಿಯಾಗಲು ಬಂದಂತಹ ಅವರ ಹಿತೈಷಿಗಳು, ಬಂಧಿಗಳು, ಆರೋಪಿಗಳು ಉಚಿತ ಕಾನೂನು ಮಾಹಿತಿಯನ್ನು ಹಾಗೂ ನೆರವು ಪಡೆಯಲು ಸಹಾಯಕವಾಗುತ್ತದೆ ಎಂದು ತಿಳಿಸಿದರು

ಈ ಕೇಂದ್ರಕ್ಕೆ ಶ್ರೀಮತಿ ಸುಷ್ಮಾ ಜಾದವ್,ಸಹಯಕ ಕಾನೂನು ಅಭಿರಕ್ಷಕರು, ಯಾದಗಿರಿ ಜಿಲ್ಲಾ ಕಾರಾಗೃಹದ ವಾರ್ಡನ್ ಶ್ರೀ ಎಸ್ ಎಸ್ ಪಾಟೀಲ್ ಅವರು ಇದ್ದರು.

# ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)

ಮೇ.21:ತಾಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ – ಬಾಲಕಿಯರ ವಸತಿ ನಿಲಯಗಳಿಗೆ ಪ್ರವೇಶ ಬಯಸುವ ಪ್ರವರ್ಗ–1, 2ಎ, 2ಬಿ, 3ಎ, 3ಬಿ, ಪ.ಜಾತಿ ಮತ್ತು ಪ.ವರ್ಗದ (ಪಿಯುಸಿ ಕೋರ್ಸಿನ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಮಾತ್ರ) ವಿದ್ಯಾರ್ಥಿಗಳು ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜೂನ್ 15 ಕೊನೆಯ ದಿನವಾಗಿದೆ.ಅರ್ಜಿ ಸಲ್ಲಿಸಲು ಪ್ರವರ್ಗ–1, ಎಸ್.ಸಿ ಮತ್ತು ಎಸ್‌ಟಿ ಅಭ್ಯರ್ಥಿಗಳ ಪೋಷಕರ ವಾರ್ಷಿಕ ಆದಾಯ 2.50 ಹಾಗೂ ಪ್ರವರ್ಗ–2ಎ, 2ಬಿ, 3ಎ, 3ಬಿ ಇತರೆ ಹಿಂದುಳಿದ ವರ್ಗದವರ ವಾರ್ಷಿಕ ಆದಾಯ ರೂ.1 ಲಕ್ಷ ಮೀರಿರಬಾರದು. ಅರ್ಹ ವಿದ್ಯಾರ್ಥಿಗಳು ಇಲಾಖಾ ವೆಬ್ಸೈಟ್ https;//shp.karnataka.gov.in/bcwd ನಲ್ಲಿ ಅರ್ಜಿ ಸಲ್ಲಿಸಬಹುದು.ಅರ್ಜಿ ಸಲ್ಲಿಸುವಲ್ಲಿ ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಇಮೇಲ್ ಅಥವಾ ಹೆಚ್ಚಿನ ಮಾಹಿತಿಗಾಗಿ ಹೊಸಪೇಟೆ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಭೇಟಿ ನೀಡಬಹುದು ಎಂದು ಪ್ರಕಟಣೆ ತಿಳಿಸಿದೆ.

## ತ್ಯಾಜ್ಯ ಸಂಸ್ಕರಿಸಿ ನೀಡದಿದ್ದರೆ ನೀರು, ವಿದ್ಯುತ್ ಕಟ್



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

: ಸುಪ್ರೀಂ ಕೋರ್ಟ್ನ ಆದೇಶದನುಸಾರ ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಘನ ತ್ಯಾಜ್ಯ ವಸ್ತು ವಿಲೇವಾರಿಗೆ ಸೂಕ್ತ ಕ್ರಮ ಕೈಗೊಂಡು, ತ್ಯಾಜ್ಯ ಸಂಸ್ಕರಸಿದವರಿಗೆ ನೀರು ಹಾಗೂ ವಿದ್ಯುತ್ ಸ್ಥಗಿತಗೊಳಿಸಲು ಅಗತ್ಯ ಕ್ರಮ ಜರುಗಿಸುವಂತೆ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಘನ ತ್ಯಾಜ್ಯ ವಸ್ತುಗಳ ನಿರ್ವಹಣಾ ನಿಯಮಗಳು-2026ರ ಕುರಿತು ಮಂಗಳವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳ ಮತ್ತು ಇತರೆ ಅಧಿಕಾರಿಗಳೊಂದಿಗೆ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಘನ ತ್ಯಾಜ್ಯ ವಸ್ತು ವಿಲೇವಾರಿಗೆ ಸಂಬಂಧಿಸಿದಂತೆ ಸುಪ್ರೀಂ ಕೋರ್ಟ್ನ ನಿರ್ದೇಶನದ ರೀತ್ಯಾ, ಕೇಂದ್ರ ಸರ್ಕಾರವು ದಿನಾಂಕ: 01/04/2026 ರಿಂದ ಅನ್ವಯವಾಗುವಂತೆ "ಘನ ತ್ಯಾಜ್ಯ ವಸ್ತುಗಳ ನಿರ್ವಹಣಾ ನಿಯಮಗಳ"ನ್ನು ಜಾರಿಗೊಳಿಸಲಾಗಿದ್ದು, ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳು ತಮ್ಮ ವ್ಯಾಪ್ತಿಯಲ್ಲಿ ಘನ ತ್ಯಾಜ್ಯ ವಸ್ತುಗಳ ನಿರ್ವಹಣಾ ನಿಯಮಗಳನ್ನು ಸಮರ್ಪಕವಾಗಿ ಅನುಷ್ಠಾನ ಮಾಡಲು ಕ್ರಮ ವಹಿಸಬೇಕು. ಸರಕಾರದ ಆದೇಶದನುಸಾರ ಘನ ತ್ಯಾಜ್ಯ ವಿಲೇವಾರಿ ಘಟಕ-ಕ್ಕೆ ಸಂಬಂಧಿಸದಂತೆ ಜಿಲ್ಲಾ ಮಟ್ಟದ ವಿಜಿಲನ್ಸ್ ಕಮೀಟಿ ಹಾಗೂ ವಿಶೇಷ ಶೆಲ್ ರಚಿಸಲಾಗಿದ್ದು, ತ್ಯಾಜ್ಯ ಸಂಸ್ಕರಣೆಯ ಬಗ್ಗೆ ಸಮಿತಿಯ ಆದೇಶ ಪಾಲಿಸಬೇಕೆಂದು ನಿರ್ದೇಶಿಸಿದರು.

ಘನ ತ್ಯಾಜ್ಯ ವಸ್ತುಗಳ ನಿರ್ವಹಣೆಯ 2026ರ ಹೊಸ ನಿಯಮಾವಳಿಗಳನ್ನು ತಪ್ಪದೇ ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಬೇಕು. ಈ ಬಗ್ಗೆ ನಾಗರೀಕರಿಗೆ ವ್ಯಾಪಕವಾಗಿ ಅರಿವು ಮೂಡಿಸಬೇಕು. ಸ್ವಚ್ಛ ಮತ್ತು ಆರೋಗ್ಯ ಪರಿಸರ ರೂಪಿಸುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯವಾಗಿದೆ. ಘನ ತ್ಯಾಜ್ಯವನ್ನು ಸಮರ್ಪಕವಾಗಿ ವಿಲೇವಾರಿ ಮತ್ತು ನಿರ್ವಹಣೆ ಮಾಡದಿರುವುದು ಪರಿಸರ ಹಾಗೂ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತದೆ. ಹಾಗಾಗಿ ಘನ ತ್ಯಾಜ್ಯವನ್ನು ಸಮರ್ಪಕವಾಗಿ ವಿಲೇವಾರಿ ಮಾಡಲು ಸೂಕ್ತ ಕ್ರಮವಹಿಸುವಂತೆ ಸೂಚನೆ ನೀಡಿದರು.

ಹೊಸ ನಿಯಮಾವಳಿಗಳನ್ವಯ ಪ್ರತಿ ಸ್ಥಳೀಯ ಸಂಸ್ಥೆಗಳಲ್ಲಿ 4 ವಿಧದ ತ್ಯಾಜ್ಯ ವಿಂಗಡಣೆಯನ್ನು ಕಡ್ಡಾಯವಾಗಿ ಪಾಲಿಸಬೇಕು. ಈ ಹಿನ್ನೆಲೆಯಲ್ಲಿ ಹಸಿ ತ್ಯಾಜ್ಯ, ಒಣ ತ್ಯಾಜ್ಯ, ಸ್ಯಾನಿಟರಿ ತ್ಯಾಜ್ಯ ಹಾಗೂ ಸ್ಪೆಷಲ್ ಕೇರ್ ತ್ಯಾಜ್ಯ (ಬಲ್ಬ್ ಗಳು, ಬ್ಯಾಟರಿಗಳು, ಅವಧಿ ಮೀರಿದ ಔಷಧಿಗಳು, ಪೇಂಟ್ ಡಬ್ಬಿಗಳು ಇತ್ಯಾದಿ) ವಿಧದ ತ್ಯಾಜ್ಯವನ್ನು ಸಂಗ್ರಹಣೆ, ಸಾಗಾಣಿಕೆ ಹಾಗೂ ಸಂಸ್ಕರಣೆ ಮತ್ತು ವಿಲೇವಾರಿಯನ್ನು ಸಮರ್ಪಕವಾಗಿ ನಿರ್ವಹಣೆ ಮಾಡಬೇಕು. ಘನ ತ್ಯಾಜ್ಯ ನಿರ್ವಹಣೆಯ ಬಗ್ಗೆ ಪ್ರತಿಯೊಬ್ಬ ನಾಗರೀಕರಿಗೆ ಸಮರ್ಪಕ ಅರಿವನ್ನು ಮೂಡಿಸಿ. ತ್ಯಾಜ್ಯ ಉತ್ಪಾದನೆ ಮಾಡುವ ಘಟಕಗಳನ್ನು ಗುರುತಿಸಿ ನೋಂದಾಯಿಸುವುದು ಮತ್ತು ಬೃಹತ್ ತ್ಯಾಜ್ಯವನ್ನು ಉತ್ಪಾದಿಸುವ ಸ್ಥಳಗಳಲ್ಲಿಯೇ ಘನ ತ್ಯಾಜ್ಯವನ್ನು ಸಂಸ್ಕರಿಸಲು ಕ್ರಮವಹಿಸಿ ಎಂದು ಹೇಳಿದರು.

ನೂತನ ನಿಯಮಾವಳಿಗಳನ್ನು ಉಲ್ಲಂಘನೆ ಮಾಡುವ ವ್ಯಕ್ತಿ ಅಥವಾ ಸಂಘ-ಸಂಸ್ಥೆಗಳ ವಿರುದ್ಧ ಕಡ್ಡಾಯವಾಗಿ ದಂಡ ವಿಧಿಸಬೇಕು ಹಾಗೂ ಅಂತಹ ವ್ಯಕ್ತಿ ಅಥವಾ ಸಂಘ-ಸಂಸ್ಥೆಗಳಿಗೆ ನೀರಿನ ಸಂಪರ್ಕವನ್ನು ಕಡಿತಗೊಳಿಸಲು ಕ್ರಮವಹಿಸಿ. ಪ್ರತಿ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ರಸ್ತೆ ಸ್ವಚ್ಛತೆಗಾಗಿ ನಿಯಮಿತವಾಗಿ ಬ್ಲಾಕ್ ಸ್ಪಾಟ್‌ಗಳನ್ನು ಕಾಲಕಾಲಕ್ಕೆ ತೆರವುಳಿಸಲು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಒಣ ತ್ಯಾಜ್ಯವನ್ನು ಪ್ರತ್ಯೇಕವಾಗಿ ಸಂಸ್ಕರಣೆಗೊಳಿಸಿ, ಈ ತ್ಯಾಜ್ಯವನ್ನು ಮರುಸಂಸ್ಕರಣೆಗೊಳಿಸಲು ಸಹ ಕ್ರಮವಹಿಸಬೇಕು. ಪ್ರತಿ ಮನೆ ಮಟ್ಟದಲ್ಲಿ ಕಾಂಪೊಸ್ಟಿಂಗ್ ಬಯೋಗ್ಯಾಸ್(ಅಂಟತಿಥಣುಟಿಂ ಏಂಂಭಿ) ಉತ್ಪಾದನೆಗೆ ಪ್ರೋತ್ಸಾಹ ಕೊಡುವಂತೆ ಸೂಚಿಸಲಾಯಿತು. ಪ್ರತಿ ನಿತ್ಯ ಮನೆ ಮನೆಗಳಲ್ಲಿ ಹಾಗೂ ರಸ್ತೆಗಳಲ್ಲಿನ ತ್ಯಾಜ್ಯ ಸಂಗ್ರಹಣೆಗೆ ಒತ್ತು ನೀಡಬೇಕು. ಒಟ್ಟಾರೆ ಕೊಪ್ಪಳ ಜಿಲ್ಲೆಯಲ್ಲಿನ ಎಲ್ಲಾ ಸ್ಥಳೀಯ ಸಂಸ್ಥೆಗಳ ಮೂಲಕ ಸ್ವಚ್ಛತೆಗೆ ಆದ್ಯತೆ ನೀಡಿ, ಸುತ್ತಮುತ್ತಲಿನ ಪರಿಸರ ಹಾಗೂ ಸಾರ್ವಜನಿಕರ ಆರೋಗ್ಯವನ್ನು ಕಾಪಾಡುವಲ್ಲಿ ಆದ್ಯತೆಯ ಮೇರೆಗೆ ಕ್ರಮವಹಿಸಬೇಕು. ಮಾನ್ಯ ಸರ್ವೋಚ್ಛ ನ್ಯಾಯಾಲಯದ ನಿರ್ದೇಶನದನ್ವಯ ಘನ ತ್ಯಾಜ್ಯ ವಸ್ತುಗಳ ನಿರ್ವಹಣಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಸಭೆಯಲ್ಲಿ ಕೊಪ್ಪಳ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಮಂಜುನಾಥ ಗುಂಡೂರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ. ಟಿ.ಲಿಂಗರಾಜು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕರಾದ ಸೋಮಶೇಖರಗೌಡ ಪಾಟೀಲ್, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಜಗದೀಶ, ಕೊಪ್ಪಳ ವಿಶ್ವವಿದ್ಯಾಲಯದ ಕುಲ ಸಚಿವರು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ರಾಯಚೂರು ವಿಮಾನ ನಿಲ್ದಾಣ ಕಾಮಗಾರಿ ಸ್ಥಳಕ್ಕೆ ಜಿಲ್ಲಾಧಿಕಾರಿ ಪೂವಿತಾ ಎಸ್. ಭೇಟಿ: ಪರಿಶೀಲನೆ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು



ಮೇ.21: ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಮೇ.20ರ ಸಂಜೆ 4ಗಂ-ಟೆಗೆ ರಾಯಚೂರು ನಗರದ ಹೊರ ವಲಯದ ಯರಮರಸ್ ಬಳಿಯಲ್ಲಿ ನಿರ್ಮಾಣ ಹಂತದಲ್ಲಿರುವ ವಿಮಾನ ನಿಲ್ದಾಣದ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಕಾಮಗಾರಿ ಪ್ರಗತಿಯ ಬಗ್ಗೆ ಸಮಗ್ರ ಪರಿಶೀಲನೆ ನಡೆಸಿದರು. ಜಿಲ್ಲಾಧಿಕಾರಿಗಳು, ಮೊದಲಿಗೆ ವಿಮಾನ ನಿಲ್ದಾಣದ ರನ್ ವೇ ಕಾಮಗಾರಿಯ ವೀಕ್ಷಣೆ ನಡೆಸಿ ಕಾಮಗಾರಿಯ ಪ್ರಗತಿಯ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದರು. ಒಟ್ಟು 1.7 ಕಿ ಮೀ ಉದ್ದದ ರನ್ ವೇ ಪೈಕಿ ಇದುವರೆಗೆ 850 ಮೀಟರ್‌ನಷ್ಟು ರನ್ ವೆಗೆ ಮರಂ ಹಾಕಿದ್ದು, ಬಾಕಿ ಕಾಮಗಾರಿ ಪ್ರಗತಿ ಹಂತದಲ್ಲಿದೆ ಎಂದು ಅಧಿಕಾರಿಗಳು ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಿದರು. ಬಳಿಕ ಜಿಲ್ಲಾಧಿಕಾರಿಗಳು ಪ್ಯಾಸೆಂಜರ್ ಟರ್ಮಿನಲ್ ಬಿಲ್ಡಿಂಗ್‌ಗೆ ಭೇಟಿ ನೀಡಿ ಪರಿಶೀಲಿಸಿದರು. ಈ ಕಟ್ಟಡಕ್ಕೆ ಈಗಾಗಲೇ ಕಾಲಂ ಮತ್ತು ಚೆತ್ ಹಾಕಿದ್ದು, ಈಗ ರೂಫ್ ಟ್ರಸ್ ಕಾಮಗಾರಿ ಕೈಗೊಳ್ಳಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದರು. ಇದೆ ವೇಳೆ ಎಲೆಕ್ಟ್ರಿಕಲ್ ಸಬ್ ಸ್ಟೇಷನ್ ಬಿಲ್ಡಿಂಗ್-1 ಮತ್ತು ಬಿಲ್ಡಿಂಗ್ 2ರ ಕಾಮಗಾರಿಗಳ ಬಗ್ಗೆ ಸಹ ಜಿಲ್ಲಾಧಿಕಾರಿಗಳು ಪರಿಶೀಲಿಸಿದರು.

ಒಟ್ಟು 12 ಸೆಕ್ಯುರಿಟಿ ವಾಚ್ ಟವರ್ ಪೈಕಿ ಇದೀಗ 8 ಟವರ್‌ಗಳ ನಿರ್ಮಾಣ ಕಾರ್ಯವು ಪ್ರಗತಿಯಲ್ಲಿದೆ. ವಿಮಾನ ನಿಲ್ದಾಣದ ಕಾಂಪೌಂಡ್ ಒಳಭಾಗದಲ್ಲಿನ ಆಂತರಿಕ ರಸ್ತೆಗಳ ನಿರ್ಮಾಣ ಕಾಮಗಾರಿಯು ಸಹ ಪ್ರಗತಿಯಲ್ಲಿದೆ. ವಿಮಾನ ನಿಲ್ದಾಣದ ಒಟ್ಟು 8 ಕಿ.ಮೀಟರ್ ಕಾಂಪೌಂಡ್ ನಿರ್ಮಾಣ ಕಾರ್ಯವು ಈಗಾಗಲೇ ಪೂರ್ಣಗೊಂಡಿದೆ ಎಂದು ಅಧಿಕಾರಿಗಳು ಮತ್ತು ಗುತ್ತಿಗೆದಾರರು ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಿದರು. ವೇಗ ನೀಡಲು ಸೂಚನೆ: ವಿಮಾನ ನಿಲ್ದಾಣ ಕಾಮಗಾರಿಯನ್ನು ವೇಗಗೊಳಿಸಿ, ಬಾಕಿ ಉಳಿಸಿದ ಎಲ್ಲ ಕಾರ್ಯಗಳನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸಬೇಕು ಎಂದು ಇದೆ ವೇಳೆ ಜಿಲ್ಲಾಧಿಕಾರಿಗಳು, ಸಂಬಂಧಿಸಿದ ಗುತ್ತಿಗೆದಾರರು ಮತ್ತು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಲೇಔಟ್ ಕಾಮಗಾರಿಗಳ ವೀಕ್ಷಣೆ: ರಾಯಚೂರು ಹೊರ ವಲಯದ ದಂಡ್ ಗ್ರಾಮದ 108 ಹಾಗೂ ಏಗನೂರು ಗ್ರಾಮದ 30 ಮನೆಗಳ ಹಸ್ತಾಂತರ ಹಿನ್ನಲೆಯಲ್ಲಿ ನೂತನವಾಗಿ ನಿರ್ಮಾಣವಾಗುತ್ತಿರುವ ಲೇಔಟ್‌ಗಳಿಗೆ ಬುಧವಾರ ಜಿಲ್ಲಾಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ಮಾಡಿದರು.

ಲೇಔಟ್‌ಗಳಲ್ಲಿ ಇರಬೇಕಾದ ಎಲ್ಲ ಮೂಲಭೂತ ಸೌಕರ್ಯಗಳನ್ನು ಅಚ್ಚುಕಟ್ಟಾಗಿ ಇರಬೇಕು. ಲೇಔಟ್ ಕಾಮಗಾರಿಯು ನಿಗದಿತ ಸಮಯದಲ್ಲಿ ಗುಣಮಟ್ಟದಿಂದ ಪೂರ್ಣಗೊಳಿಸಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ನಿರ್ದೇಶನ ನೀಡಿದರು.

ಇದೇ ಸಂದರ್ಭದಲ್ಲಿ ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರರಾದ ವೆಂಕಟೇಶ ಗಲಗ, ಸಹಾಯಕ ಅಭಿಯಂತರರಾದ ಮಹೇಶ್, ಗುತ್ತಿಗೆದಾರ ಕಂಪನಿ ಕೆಎಂವಿದ ಪ್ರತಿನಿಧಿಗಳಾದ ಪ್ರವೀಣ್ ಹಾಗೂ ಇನ್ನಿತರರು ಇದ್ದರು.

## ರೇಷನ್ ಕಾರ್ಡ್ ತಿದ್ದುಪಡಿ ಅವಧಿ ವಿಸ್ತರಣೆ ಮತ್ತು ಸೇವಾ ಶುಲ್ಕ ನಿಗದಿ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)



ಮೇ.21: ಜಿಲ್ಲೆಯ ಪಡಿತರ ಚೀಟಿದಾರರಿಗೆ ಪಡಿತರ ಚೀಟಿಯಲ್ಲಿನ ತಿದ್ದುಪಡಿ ಸೇವೆಗಳ ಅವಧಿಯನ್ನು ದಿನಾಂಕ ಮೇ 8 ರಿಂದ 2027ರ ಮಾರ್ಚ್ 31ರವರೆಗೆ ವಿಸ್ತರಿಸಲಾಗಿದ್ದು, ಸಾರ್ವಜನಿಕರು ಹತ್ತಿರದ ಗ್ರಾಮ ಒನ್ ಹಾಗೂ ಕರ್ನಾಟಕ ಒನ್ ಕೇಂದ್ರಗಳ ಮೂಲಕ ಈ ಸೌಲಭ್ಯ ಪಡೆಯಬಹುದು ಎಂದು ಆಹಾರ ಇಲಾಖೆ ಉಪನಿರ್ದೇಶಕ ರಿಯಾಜ್ ತಿಳಿಸಿದ್ದಾರೆ. ಸೇವಾ ಶುಲ್ಕಗಳ ವಿವರ: ಪಡಿತರ ಚೀಟಿ ತಿದ್ದುಪಡಿ ಹೆಸರು ಸೇರ್ಪಡೆ, ತೆಗೆದು ಹಾಕುವುದು, ವಿಳಾಸ ಅಥವಾ ನ್ಯಾಯಬೆಲೆ ಅಂಗಡಿ ಬದಲಾವಣೆ ಹಾಗೂ ಇ-ಕೆವೈಸಿ ಪ್ರಕ್ರಿಯೆಗಳಿಗೆ ರೂ. 25 ನಿಗದಿಪಡಿಸಲಾಗಿದೆ. ಹೊಸ ಪಡಿತರ ಚೀಟಿ ಅರ್ಜಿ ಶುಲ್ಕ ರೂ. 50 ಹಾಗೂ ಆದ್ಯತೇತರ (NPHH/APL) ಕುಟುಂಬಗಳ ಸ್ವ-ಇಚ್ಛೆ ನೋಂದಣಿ ಶುಲ್ಕ ರೂ.20 ನಿಗಧಿಪಡಿಸಲಾಗಿದೆ. (ಈ ಸೇವೆಗಳು ಪ್ರಸ್ತುತ ಸ್ಥಗಿತಗೊಳಿಸಲಾಗಿದೆ). ಈ ನಿಟ್ಟಿನಲ್ಲಿ ಸಾರ್ವಜನಿಕರು ಯಾವುದೇ ಕಾರಣಕ್ಕೂ ಮಧ್ಯವರ್ತಿ ಅಥವಾ ಮೂರನೇ ವ್ಯಕ್ತಿಗಳ ಸಂಪರ್ಕಿಸಿ ಆಮಿಷಕ್ಕೆ ಒಳಗಾಗಬಾರದು ಸರ್ಕಾರ ನಿಗದಿಪಡಿಸಿದ ನಿಗದಿತ ಶುಲ್ಕಕ್ಕಿಂತ ಹೆಚ್ಚಿನ ಹಣ ಯಾರಿಗೂ ನೀಡಬಾರದು. ಅರ್ಜಿ ವಿಲೇವಾರಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಸಾರ್ವಜನಿಕರು ಆಯಾ ತಾಲ್ಲೂಕು ಕಚೇರಿಯ ಆಹಾರ ಶಾಖೆಯನ್ನು ಸಂಪರ್ಕಿಸಬಹುದು ಎಂದು ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಮೇ 21: 2026-27ನೇ ಸಾಲಿನ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆದಿಂದ ಮೆಟ್ರಿಕ್ ಪೂರ್ವ ಬಾಲಕ, ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಅವರು ತಿಳಿಸಿದ್ದಾರೆ.

ಯಾದಗಿರಿ ತಾಲ್ಲೂಕಿನ ಮೆಟ್ರಿಕ್ ಪೂರ್ವ ಬಾಲಕರ, ಬಾಲಕಿಯರ ವಸತಿ ನಿಲಯಗಳ ವಿವರ : ಬಳಿಚಕ್ರ ಮೆಟ್ರಿಕ್ ಪೂರ್ವ ಬಾಲಕರ ನಿಲಯ ಹೆಚ್.ಐ.ಸಿ.ಸಂಖ್ಯೆ ಬಿಸಿಡಬ್ಲ್ಯೂ ಡಿ 1326 ಇದೆ. ಚಂಡ್ರಿಕಿ ಮೆಟ್ರಿಕ್ ಪೂರ್ವ ಬಾಲಕರ ನಿಲಯ ಬಿಸಿಡಬ್ಲ್ಯೂ ಡಿ 1327 ಇದೆ. ಗಾಜರಕೋಟ ಮೆಟ್ರಿಕ್ ಪೂರ್ವ ಬಾಲಕರ ನಿಲಯ ಬಿಸಿಡಬ್ಲ್ಯೂ ಡಿ 1328 ಇದೆ. ಗುರುಮಠಕಲ್ ಮೆಟ್ರಿಕ್ ಪೂರ್ವ ಬಾಲಕರ ನಿಲಯ ಬಿಸಿಡಬ್ಲ್ಯೂ ಡಿ 1329 ಇದೆ. ಹೊನಗೇರಾ ಮೆಟ್ರಿಕ್ ಪೂರ್ವ ಬಾಲಕರ ನಿಲಯ ಬಿಸಿಡಬ್ಲ್ಯೂ ಡಿ 1330 ಇದೆ. ಕೊಂಕಲ್ ಮೆಟ್ರಿಕ್ ಪೂರ್ವ ಬಾಲಕರ ನಿಲಯ ಬಿಸಿಡಬ್ಲ್ಯೂ ಡಿ 1331 ಇದೆ. ಕೊಟಗೇರಾ ಮೆಟ್ರಿಕ್ ಪೂರ್ವ ಬಾಲಕರ ನಿಲಯ ಬಿಸಿಡಬ್ಲ್ಯೂ ಡಿ 1332 ಇದೆ. ಮಧ್ವಾರ ಮೆಟ್ರಿಕ್ ಪೂರ್ವ ಬಾಲಕರ ನಿಲಯ ಬಿಸಿಡಬ್ಲ್ಯೂ ಡಿ 1333 ಇದೆ. ಪುಟಪಾಕ್ ಮೆಟ್ರಿಕ್ ಪೂರ್ವ ಬಾಲಕರ ನಿಲಯ ಬಿಸಿಡಬ್ಲ್ಯೂ ಡಿ 1334 ಇದೆ. ಸೈದಾಪೂರ ಮೆಟ್ರಿಕ್ ಪೂರ್ವ ಬಾಲಕರ ನಿಲಯ ಬಿಸಿಡಬ್ಲ್ಯೂ ಡಿ 1335 ಇದೆ. ಯಾದಗಿರಿ ಮೆಟ್ರಿಕ್ ಪೂರ್ವ ಬಾಲಕರ ನಿಲಯ ಬಿಸಿಡಬ್ಲ್ಯೂ ಡಿ 1336 ಇದೆ. ಯಲ್ಲೇರಿ ಮೆಟ್ರಿಕ್ ಪೂರ್ವ ಬಾಲಕರ ನಿಲಯ ಬಿಸಿಡಬ್ಲ್ಯೂ ಡಿ 1337 ಇದೆ. ಯರಗೋಳ ಮೆಟ್ರಿಕ್ ಪೂರ್ವ ಬಾಲಕರ ನಿಲಯ ಬಿಸಿಡಬ್ಲ್ಯೂ ಡಿ 1338 ಇದೆ. ಹತ್ತಿಕುಣಿ ಮೆಟ್ರಿಕ್ ಪೂರ್ವ ಬಾಲಕಿಯರ ನಿಲಯ ಬಿಸಿಡಬ್ಲ್ಯೂ ಡಿ 1339 ಇದೆ. ಕಂದಕೂರ ಮೆಟ್ರಿಕ್ ಪೂರ್ವ ಬಾಲಕಿಯರ ನಿಲಯ ಬಿಸಿಡಬ್ಲ್ಯೂ ಡಿ 1340 ಇದೆ. ಯಾದಗಿರಿ ಮೆಟ್ರಿಕ್ ಪೂರ್ವ ಬಾಲಕಿಯರ ನಿಲಯ ಬಿಸಿಡಬ್ಲ್ಯೂ ಡಿ 1341 ಇದೆ.

ತಾಲ್ಲೂಕು ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ (5 ರಿಂದ 10ನೇ ತರಗತಿ) ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ ಪ.ಜಾ, ಪ.ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಿದೆ. ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ಮಿತಿ ಪ್ರವರ್ಗ-1, ಎಸ್.ಸಿ, ಎಸ್.ಟಿ, 2.50 ಲಕ್ಷ ರೂ.ಗಳ ಒಳಗಿರಬೇಕು. ಪ್ರವರ್ಗ-2ಎ, 2ಬಿ, 3ಎ, 3ಬಿ 1 ಲಕ್ಷ ರೂ.ಗಳ ಒಳಗಿರಬೇಕು. ಆನ್‌ಲೈನ್ shp.karnataka.gov.in/bcwd ನಲ್ಲಿ 2026ರ ಜೂನ್ 8ರ ಒಳಗೆ ಅರ್ಜಿಸಲ್ಲಿಸಬೇಕು.

ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ bcwd.karnataka.gov.in ಭೇಟಿ ನೀಡಬೇಕು. ಅರ್ಜಿಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಗೆ ಇ-ಮೇಲ್ ಮುಖಾಂತರ ಅಥವಾ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂ.9743310896ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಒಂದು ವರ್ಷದ ರಂಗಶಿಕ್ಷಣ ತರಬೇತಿಗೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಮೇ.21: ಮೈಸೂರಿನ ರಂಗಶಿಕ್ಷಣ ಸಂಸ್ಥೆಯ ವತಿಯಿಂದ ಪ್ರಸ್ತುತ 2026-27ನೇ ಸಾಲಿನಲ್ಲಿ ಪ್ರವೇಶಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಸಂಸ್ಥೆಯು ಕರ್ನಾಟಕ ಸರ್ಕಾರದಿಂದ ಮೈಸೂರಿನಲ್ಲಿ ಸ್ಥಾಪಿತವಾಗಿರುವ ರಂಗಾಯಣ ರೆಪರ್ಟರಿಯು ಕಳೆದ 16 ವರ್ಷಗಳ ಹಿಂದೆ ಸ್ಥಾಪಿಸಿದ ಭಾರತೀಯ ರಂಗಶಿಕ್ಷಣ ಕೇಂದ್ರ ಪೂರ್ಣ ಪ್ರಮಾಣದ ರಂಗಶಿಕ್ಷಣವನ್ನು ನೀಡುವ ಸಂಸ್ಥೆಯಾಗಿದೆ. ಈ ಸಂಸ್ಥೆ ಮೈಸೂರಿನ ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಮಾನ್ಯತೆ ಪಡೆದಿದೆ.

ಪ್ರತಿವರ್ಷ ರಂಗಶಿಕ್ಷಣದಲ್ಲಿ ಹತ್ತು ತಿಂಗಳ ಡಿಪ್ಲೊಮೊ ಕೋರ್ಸ್ನ್ನು ನಡೆಸುವ ಈ ಸಂಸ್ಥೆಯು 2026-27ನೇ ಸಾಲಿನ ಈ ರಂಗತರಬೇತಿ ಕೋರ್ಸ್ಗೆ ಸೇರಬಯಸುವ ವಿದ್ಯಾರ್ಥಿಗಳು ರಂಗಭೂಮಿಯ ಪ್ರಾಥಮಿಕ ಅನುಭವ ಹೊಂದಿರಬೇಕು. ಕನಿಷ್ಠ ದ್ವಿತೀಯ ಪಿಯುಸಿ (10+2) ಅಥವಾ ತತ್ಸಮಾನ ಪರೀಕ್ಷೆ ತೇರ್ಗಡೆ ಹೊಂದಿರಬೇಕು.


**PUBLIC NOTICE**

Notice is hereby given that the original Partition Deed dated 09-05-2018 executed between SANGAMESH S/O VITHAL RAO and SANTOSH S/O VITHAL RAO, pertaining to the property situated at Village Kabirabad Wadi Tq Humnabad Dist Bidar, registered before the Sub-Registrar Office at Humnabad as Document No. 1613/2018-19, has been lost/misplaced and is not traceable despite diligent search.

The said document is believed to have been lost on or about 30-04-2026 around 9:30 AM at Bus Stop Humnabad, and I have already file a police complaint with no: 2209950/2026.

Any person/s having found or having any claim, objection, right, title, interest, lien, charge, or possession concerning the above said original Partition Deed or the property mentioned therein, are hereby requested to contact the undersigned within 15 days from the date of publication of this notice, failing which it shall be presumed that no person has any objection or claim and necessary steps will be taken for obtaining certified copies and further legal proceedings.

Date: 21-05-2026
Place: Humnabad

Applicant
Sangmesh S/o Vithal Rao
R/o Village Kabirabad Wadi
Tq Humnabad
Contact No.: 9860545617


## ಮುದಗಲ್ : ಔಷಧಿ ಅಂಗಡಿ ಬಂದ್



• ಮಲ್ಲಮ್ಮ ನುಡಿ ವಾರ್ತೆ ಮುದಗಲ್

ಅಖಿಲ ಭಾರತ ಔಷಧ ವ್ಯಾಪಾರಿ ಮತ್ತು ಔಷಧ ವ್ಯಾಪಾರಿಗಳ ಸಂಘಟನೆ ಕರೆಗೆ ಪಟ್ಟಣದ ಔಷಧ ವ್ಯಾಪಾರಿಗಳು ಬುಧವಾರ ತಮ್ಮ ಮೆಡಿಕಲ್ ಅಂಗಡಿಗಳನ್ನು ಬಂದ್ ಮಾಡಿ ಕಂದಾಯ ಇಲಾಖೆ ಉಪ ತಹಸಿಲ್ದಾರ್ ತುಜಾರಾಮ್ ಸಿಂಗ್ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ದೇಶಾದ್ಯಂತ ಅಕ್ರಮ ಹಾಗೂ ಅನಿಯಂತ್ರಿತ ಆನ್‌ಲೈನ್ ಔಷಧಿ ಮಾರಾಟವನ್ನು ಖಂಡಿಸಿ ಅಖಿಲ ಭಾರತ ಔಷಧ ವ್ಯಾಪಾರಿ ಮತ್ತು ಔಷಧ ವ್ಯಾಪಾರಿಗಳ ಸಂಘಟನೆ ಕರೆ ನೀಡಿದ ರಾಷ್ಟ್ರವ್ಯಾಪಿ ಒಂದು ದಿನದ ಮುಷ್ಕರಕ್ಕೆ ಬೆಂಬಲ ಸೂಚಿಸಿ, ಮುದಗಲ್ ಪಟ್ಟಣದ ಔಷಧ ವ್ಯಾಪಾರಿಗಳು ಬುಧವಾರ ತಮ್ಮ ಮೆಡಿಕಲ್ ಅಂಗಡಿಗಳನ್ನು ಬಂದ್ ಮಾಡಿ ಕಂದಾಯ ಇಲಾಖೆ ಸ್ಥಳೀಯ ಕಂದಾಯ ಇಲಾಖೆ ಅಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿದರು.

ವೆಂಕಟೇಶ ಕುಲಕರ್ಣಿ, ರಾಘವೇಂದ್ರ ಸುರಪುರ, ಸುಜಿತ್ ಸುರಪುರ, ಆಲಂಖಾನ್, ಶರಣಬಸವ, ಬಸವರಾಜ ಕರಡಿ, ಅಮರೇಶ ಜೇಡಿ, ಬಸವರಾಜ ಮಡಿವಾಳ, ಧರ್ಮೇಂದ್ರ ಗೌಡ, ಕನ್ನಾಳ ಗೌಡ, ತಸ್ಲೀಮ್ ಸೇರಿದಂತೆ ಇತರರಿದ್ದರು.

## ಸಚಿವ ತಂಗಡಗಿ ಹೇಳಿಕೆಗೆ ನವೀನ ಗುಳಗಣ್ಣವರ ಆಕ್ರೋಶ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ್ ತಂಗಡಗಿ ಅವರ ಹೇಳಿಕೆ ವಿರುದ್ಧ ಬಿಜೆಪಿ ಜಿಲ್ಲಾಧ್ಯಕ್ಷ ನವೀನಕುಮಾರ ಈ ಗುಳಗಣ್ಣವರ ತೀಕ್ಷ್ಣ ಪ್ರತಿಕ್ರಿಯೆ ನೀಡಿದ್ದು, ಸಾಮಾನ್ಯ ಜನರ ಬದುಕು ಮತ್ತು ಶ್ರಮವನ್ನು ಅವಮಾನಿಸುವ ಹೇಳಿಕೆಗಳನ್ನು ಸಚಿವರು ನೀಡಬಾರದು ಎಂದು ಆಗ್ರಹಿಸಿದ್ದಾರೆ. ಬುಧವಾರ ಪ್ರಕಟಣೆ ನೀಡಿದ ಅವರು, "ದೇಶದ ಕೋಟ್ಯಂತರ ಬಡವರು, ಕಾರ್ಮಿಕರು ಹಾಗೂ ಮಧ್ಯಮ ವರ್ಗದ ಜನರಿಗೆ ಸೈಕಲ್ ಕೇವಲ ಒಂದು ವಾಹನವಲ್ಲ, ಅದು ಅವರ ಪ್ರಾಮಾಣಿಕ ಬದುಕಿನ ಮತ್ತು ಸ್ವಾಭಿಮಾನದ ಸಂಕೇತವಾಗಿದೆ.

ಅಂತಹ ಸಾಮಾನ್ಯ ಜನರ ಬದುಕನ್ನು ಹೀಗಳೆಯುವುದು ಕಾಂಗ್ರೆಸ್ ಸಂಸ್ಕೃತಿಯನ್ನು ತೋರಿಸುತ್ತದೆ" ಎಂದು ವಾಗ್ದಾಳಿ ನಡೆಸಿದರು. ದೇಶದ ಆರ್ಥಿಕತೆ ಹಳ್ಳ ಹಿಡಿದಿದೆ ಎಂದು ಸುಳ್ಳು ಪ್ರಚಾರ ಮಾಡುವ ಬದಲು, ರಾಜ್ಯ ಸರ್ಕಾರದ ವೈಫಲ್ಯಗಳನ್ನು ಮುಚ್ಚಿಹಾಕಲು ಪ್ರಧಾನಿ ನರೇಂದ್ರ ಮೋದಿ ಅವರ ಆಡಳಿತವನ್ನು ಟೀಕಿಸುವುದನ್ನು ಕಾಂಗ್ರೆಸ್ ನಾಯಕರು ನಿಲ್ಲಿಸಬೇಕು ಎಂದು ಹೇಳಿದರು.

"ಜಾಗತಿಕ ಮಟ್ಟದಲ್ಲಿ ಭಾರತ ಇಂದು ಬಲಿಷ್ಠ ಆರ್ಥಿಕತೆಯಾಗಿ ಹೊರಹೊಮ್ಮುತ್ತಿದೆ.

ಯುದ್ಧ ಹಾಗೂ ಕೋವಿಡ್ ನಂತರದ ಆರ್ಥಿಕ ಬಿಕ್ಕಟ್ಟಿನ ನಡುವೆಯೂ



ಭಾರತದ ಜಿಡಿಪಿ ಶೇ.7 ಕ್ಕಿಂತ ಹೆಚ್ಚು ವೃದ್ಧಿಯಾಗುತ್ತಿದೆ.

ಐಎಂಎಫ್ ಹಾಗೂ ವಿಶ್ವ ಬ್ಯಾಂಕ್ ವರದಿಗಳ ಪ್ರಕಾರ ಭಾರತವು ವಿಶ್ವದಲ್ಲೇ ಅತಿ ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಯಾಗಿದೆ" ಎಂದು ಅವರು ಹೇಳಿದರು.

ಪ್ರತಿ ತಿಂಗಳ ಜಿಎಸ್‌ಟಿ ಸಂಗ್ರಹ ?1.70 ಲಕ್ಷ ಕೋಟಿ ರೂ.ಯಿಂದ ?2.10 ಲಕ್ಷ ಕೋಟಿ ರೂ. ದಾಟುತ್ತಿರುವುದು ದೇಶದ ಆರ್ಥಿಕ ಚಟುವಟಿಕೆಗಳ ಬಲವನ್ನು ತೋರಿಸುತ್ತದೆ.

ಅಲ್ಲದೆ, ಭಾರತದ ವಿದೇಶಿ ವಿನಿಮಯ ನಿಧಿ 640 ಬಿಲಿಯನ್ ಡಾಲರ್ ಮೀರಿರುವುದು ದೇಶದ ಆರ್ಥಿಕ ಸ್ಥಿರತೆಗೆ ಸಾಕ್ಷಿಯಾಗಿದೆ ಎಂದು ಹೇಳಿದರು.

ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳ ಹೆಸರಿನಲ್ಲಿ ಅಭಿವೃದ್ಧಿ ಕುಂಠಿತಗೊಳಿಸಿ ಜನರ ಗಮನ ಬೇರೆಡೆ ಸೆಳೆಯಲು ಸಚಿವರು ಬಾಲಿಶ ಹಾಗೂ ಬೇಜವಾಬ್ದಾರಿ ಹೇಳಿಕೆಗಳನ್ನು ನೀಡುತ್ತಿದ್ದಾರೆ ಎಂದು ಆರೋಪಿಸಿದ ಅವರು, "ಸಾಮಾನ್ಯ ಜನರ ಸವಾರಿಯನ್ನು ಅವಮಾನಿಸಿದ ಸಚಿವ ತಂಗಡಗಿಯವರು ತಕ್ಷಣ ದೇಶದ ಜನತೆಗೆ ಕ್ಷಮೆಯಾಚಿಸಬೇಕು" ಎಂದು ಆಗ್ರಹಿಸಿದರು.

ಕೊನೆಯಲ್ಲಿ ಕವನದ ಮೂಲಕ ಪ್ರತಿಕ್ರಿಯಿಸಿದ ಗುಳಗಣ್ಣನವರ ಅವರು,"ಕವನದ ಹಿಂದೆಯೇ ಸದಾ ಅಡಗದಿರಿ, ಬರೀ ಮಾತಿನಲ್ಲೇ ಕಾಲವ ದೂಡದಿರಿ! ಜನರ ನೆಮ್ಮದಿಗೆ ದಾರಿಯನ್ನೇ ತೋರಿಸಿರಿ, ನುಡಿದಂತೆ ನಡೆದು ಇತಿಹಾಸ ಬರೆಯಿರಿ"ಎಂದು ಹೇಳಿದ್ದಾರೆ.

# ಅನ್ನದಾತರಿಗೆ ಪರಿಹಾರ ಕೊಡಿ ಕೊಪ್ಪಳದಲ್ಲಿ ಬಿಜೆಪಿಯಿಂದ ವಿಭಿನ್ನ ರೀತಿಯಲ್ಲಿ ಪ್ರತಿಭಟನೆ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ತಾಲೂಕಿನ ವಿವಿಧ ಗ್ರಾಮಗಳಲ್ಲಿ ಬಾಳೆ, ಎಲೆ ಸೇರಿ ವಿವಿಧ ತೋಟಗಾರಿಕೆ ಬೆಳೆ ಬೆಳೆದು ಮಳೆ ಹಾಗೂ ಗಾಳಿಯಿಂದ ನಷ್ಟ ಹೊಂದಿದ ರೈತರಿಗೆ ಕೂಡಲೇ ಪರಿಹಾರ ವಿತರಿಸುವಂತೆ ಒತ್ತಾಯಿಸಿ, ಕೊಪ್ಪಳ ಬಿಜೆಪಿ ಗ್ರಾಮೀಣ ಮಂಡಲ ವತಿಯಿಂದ ಗುರುವಾರ ನಗರದಲ್ಲಿ ವಿನೂತನ ರೀತಿಯಲ್ಲಿ ಪ್ರತಿಭಟನೆ ನಡೆಸಿ, ಗಮನ ಸೆಳೆಯಿತು. ಪ್ರಧಾನಿ ನರೇಂದ್ರ ಮೋದಿ ಅವರ ಮನವಿಯಂತೆ ದೇಶದಲ್ಲಿ ಹೆಚ್ಚುತ್ತಿರುವ ಇಂಧನ ಬಳಕೆ, ಪೆಟ್ರೋಲ್–ಡೀಸೆಲ್ ಮೇಲಿನ ಅವಲಂಬನೆ ಕಡಿಮೆ ಮಾಡುವ ಅಗತ್ಯತೆ ಹಾಗೂ ಪರಿಸರ ಸಂರಕ್ಷಣೆ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಬಿಜೆಪಿ ನಾಯಕರು ಸೈಕಲ್ ಹಾಗೂ ಎಲೆಕ್ಟ್ರಿಕಲ್ ಬೈಕ್‌ಗಳಲ್ಲಿ ತೆರಳಿ ವಿಭಿನ್ನ ರೀತಿಯಲ್ಲಿ ಪ್ರತಿಭಟನೆ ನಡೆಸಿದರು.ನಗರದ ಅಶೋಕ ವೃತ್ತದಲ್ಲಿ ಜಮಾಯಿಸಿದ ಬಿಜೆಪಿ ಮುಖಂಡರು, ಅಲ್ಲಿಂದ ಡಿಸಿ ಕಚೇರಿಯವರೆಗೆ ಸೈಕಲ್ ಹಾಗೂ ಎಲೆಕ್ಟ್ರೀಕ್ ಬೈಕ್ ಮುಖಾಂತರ ಡಿಸಿ ಕಚೇರಿಯವರೆಗೆ ತೆರಳಿ ನಾಗರಿಕರಲ್ಲಿ ಪರಿಸರ ಜಾಗೃತಿ ಮೂಡಿಸಿದರು. ನಂತರ ರೈತರೊಂದಿಗೆ ಬಿಜೆಪಿ ನಾಯಕರು, ಜಿಲ್ಲಾಡಳಿತ ಭವನಕ್ಕೆ ಮುತ್ತಿಗೆ ಹಾಕಲು ಪ್ರಯತ್ನಿಸಿದರು. ಈ ವೇಳೆ ವಿಪ ಸದಸ್ಯೆ ಹೇಮಲತಾ ನಾಯಕ್, ಕೊಪ್ಪಳ ಲೋಕಸಭಾ ಕ್ಷೇತ್ರದ ನಿಕಟಪೂರ್ವ ಅಭ್ಯರ್ಥಿ ಬಸವರಾಜ ಕ್ಯಾವಟರ್ ಸೇರಿ ಇನ್ನಿತರ ನಾಯಕರನ್ನು ಪೊಲೀಸರು ತಡೆದರು. ಬಳಿಕ ಜಿಲ್ಲಾಡಳಿತ ಭವನದ ಮುಂಭಾಗದಲ್ಲಿ ಧರಣಿ ಕುಳಿತ ಬಿಜೆಪಿ ನಾಯಕರು, ಸರಕಾರದ ವಿಳಂಭ ಧೋರಣೆ ನೀತಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಅಲ್ಲದೆ, ಬೇಜವಾಬ್ದಾರಿ ಮೆರೆಯುತ್ತಿರುವ ಸ್ಥಳೀಯ ಶಾಸಕ ರಾಘವೇಂದ್ರ ಹಿಟ್ನಾಳ್ ಎಂದು ಘೋಷಣೆ ಕೂಗಿ ಆಡಳಿತ ವ್ಯವಸ್ಥೆಯ ಕಾರ್ಯ ವೈಖರಿ ಖಂಡಿಸಿದರು. ಕೊನೆಗೆ ಸ್ಥಳಕ್ಕಾಗಮಿಸಿದ ಅಪರ ಜಿಲ್ಲಾಧಿಕಾರಿ ಸಿದ್ದರಾಮೇಶ್ವರ ಅವರಿಗೆ ಮನವಿ ಸಲ್ಲಿಸಲಾಯಿತು.ಈ ವೇಳೆ ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ್ ಮಾತನಾಡಿ, ಒಂದು ಎಕರೆ ಬಾಳೆ ಬೆಳೆ ಬೆಳೆಯಲು ರೈತರು ಲಕ್ಷಾಂತರ ರೂಪಾಯಿ ಸಾಲ ಮಾಡಿ ಹೂಡಿಕೆ ಮಾಡಿದ್ದರೂ, ಅಕಾಲಿಕ ಮಳೆ ಮತ್ತು ಗಾಳಿಯಿಂದ ಕೈಗೆ ಬಂದ ಬೆಳೆ ಸಂಪೂರ್ಣ ಹಾನಿಗೊಳಗಾಗಿದೆ. ಇದರಿಂದ ರೈತರ ಕುಟುಂಬಗಳು ಆರ್ಥಿಕ ಸಂಕಷ್ಟಕ್ಕೆ ತುತ್ತಾಗಿ ಬದುಕಿನ ಮೇಲೆಯೇ ಆತಂಕ ಎದುರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ.

ಹೀಗಾಗಿ ತಕ್ಷಣವೇ ಸಮಗ್ರ ಬೆಳೆ ಹಾನಿ ಸಮೀಕ್ಷೆ ನಡೆಸಿ ನ್ಯಾಯಯುತ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ಮುಖಂಡ ಬಸವರಾಜ ಕ್ಯಾವಟರ್ ಮಾತನಾಡಿ,

ರಾಜ್ಯದಲ್ಲಿ ರೈತರ ಪರಿಸ್ಥಿತಿ ಚಿಂತಾಜನಕವಾಗಿದೆ. ಅದರಲ್ಲಿಯೂ ಕೊಪ್ಪಳ ತಾಲೂಕಿನಲ್ಲಿ ಮುಂಗಾರು ಪೂರ್ವ ಮಳೆಗೆ ತೋಟಗಾರಿಕೆ ಬೆಳೆಗಳು ನೆಲಕಚ್ಚಿವೆ.ಸಾಲ ಸೂಲ ಮಾಡಿ, ಬಾಳೆ, ಎಲೆ ಸೇರಿ ವಿವಿಧ ಬೆಳೆ ಬೆಳೆದಿದ್ದ ರೈತರ ಪರಿಸ್ಥಿತಿ ಕಷ್ಟ ನೋಡಲಾಗುತ್ತಿಲ್ಲ.

ಈ ವಿಚಾರದಲ್ಲಿ ಮುತುವರ್ಜಿ ವಹಿಸಿ, ಸರಕಾರದ ಗಮನಕ್ಕೆ ತಂದು ರೈತರಿಗೆ ಪರಿಹಾರ ಕೊಡಿಸಬೇಕಾದ ಶಾಸಕ ಹಿಟ್ನಾಳ್ ತಮ್ಮ ಜವಾಬ್ದಾರಿ ಮೆರೆಯುತ್ತಿಲ್ಲ.

ರೈತರು ದೇಶದ ಅನ್ನದಾತರು. ರೈತ ಉಳಿದರೆ ದೇಶ ಉಳಿಯುತ್ತದೆ ಎಂಬ ನಿಟ್ಟಿನಲ್ಲಿ ಸರಕಾರ ರೈತರ ಸಂಕಷ್ಟಕ್ಕೆ ತಕ್ಷಣ ಸ್ಪಂದಿಸಬೇಕು.

ಕೇವಲ ಭರವಸೆಗಳಲ್ಲ, ನೇರವಾಗಿ ರೈತರ ಬ್ಯಾಂಕ್ ಖಾತೆಗಳಿಗೆ ಪರಿಹಾರದ ಹಣ ಜಮಾ ಮಾಡುವ ಕೆಲಸವಾಗಬೇಕು ಎಂದು ಆಗ್ರಹಿಸಿದರು.

ಅಲ್ಲದೆ, ಇನ್ನೇನು ಮುಂಗಾರು ಆರಂಭವಾಗಲಿದ್ದು, ರಸಗೊಬ್ಬರ ವಿತರಣೆ ಸಮರ್ಪಕವಾಗಿ ನಡೆಯಬೇಕು. ರೈತ ಸಂಪರ್ಕ ಕೇಂದ್ರಗಳಲ್ಲಿ ಲಭ್ಯವಿರುವ ರೀ ಜಗಳ ಕುರಿತು ವ್ಯಾಪಕ ಪ್ರಚಾರ ಕೈಗೊಳ್ಳಬೇಕು ಎಂದು ಜಿಲ್ಲಾಡಳಿತವನ್ನು ಇದೇ ವೇಳೆ ಒತ್ತಾಯಿಸಿದರು.

ಈ ವೇಳೆ ಗ್ರಾಮೀಣ ಮಂಡಲ ಅಧ್ಯಕ್ಷ ವೀರೇಶ ಸಜ್ಜನ್, ಚಂದ್ರಶೇಖರ ಪಾಟೀಲ್ ಹಲಗೇರಿ, ಮಹಾಂತೇಶ್ ಪಾಟೀಲ್ ಮೈನಲ್ಲಿ, ಪಕೀರಪ್ಪ ಆರೇರ್, ಗಣೇಶ್ ಹೋರಟತ್ನಾಳ, ಪ್ರದೀಪ್ ಹಿಟ್ನಾಳ್, ರೈತ ಮೋರ್ಚಾ ಜಿಲ್ಲಾ ಅಧ್ಯಕ್ಷ ಅಶೋಕ್ ಗುಳದಳ್ಳಿ, ತಾಲೂಕು ಅಧ್ಯಕ್ಷ ವೀರೇಶ್ ಕಸನಖಂಡಿ, ಜಿಲ್ಲಾ ಕಾರ್ಯದರ್ಶಿ ಸುನಿಲ್ ಹೆಸರೂರ್, ಪ್ರಭುಗೌಡ ಪಾಟೀಲ್, ಮಹೇಶ್ ಅಂಗಡಿ, ಅಂದಪ್ಪ ಯಲ್ಲಮ್ಮನವರ, ಗುರಪ್ಪ ಗೋಡೆಕಾರ್, ಮಹಿಳಾ ನಗರ ಘಟಕದ ಅಧ್ಯಕ್ಷರು ಜಯಶ್ರೀ ಆರೇರ್, ಗ್ರಾಮೀಣ ಮಂಡಲ ಮಹಿಳಾ ಅಧ್ಯಕ್ಷರಾದ ಅನುರಾಧ ಬಿಸನಳ್ಳಿ, ಬಸವರೆಡ್ಡಿ ಬೈರಾಪುರ್, ರಾಜು ಬಾಕ್ಳೆ, ಗವಿರಾಜ್ ಗೊರವರ , ರಮೇಶ್ ಕವಲೂರು, ದೇವಪ್ಪ ಹ್ಯಾಟಿ, ಚನ್ನಬಸವ ಗಾಳಿ, ದೇವರಾಜ್ ಹಲಸಮುದ್ರ, ಮಹಾಲಕ್ಷ್ಮಿ ಕಂದಾರಿ, ಉಮೇಶ್ ಕುದ್ರೇಕರ್, ರಾಜ್ಯ ಕಾರ್ಯಕಾರಣಿ ಸದಸ್ಯರಾದ ಶೋಭಾ ನಗರಿ, ಮಾರುತಿ ಹಡಪದ, ನೀಲಕಂಠಯ್ಯ ಹಿರೇಮಠ, ದೀಪಕ್ ಹಿರೇಮಠ, ನಾಗರಾಜ್ ದೊಡ್ಡಮನಿ, ವಿಜಯಪಾಟೀಲ್ ಹಲಗೇರಿ, ಶರಣಯ್ಯ ಮುಂದರಗಿಮಠ, ಶರಣಪ್ಪ ಮಡಿವಾಳರ, ಚಂದ್ರು ಗೋಸಿ, ರಮೇಶ್ ಕರಡಿ, ಖಜಾ ಹುಸೇನ್, ಬಿಜೆಪಿಯ ಮುಖಂಡರು, ವಿವಿಧ ಮೋರ್ಚಾಗಳ ಪದಾಧಿಕಾರಿಗಳು, ಮಹಿಳಾ ಮುಖಂಡರು ಹಾಗೂ ಕಾರ್ಯಕರ್ತ ಮಿತ್ರರು ಉಪಸ್ಥಿತರಿದ್ದರು.

## ಅಂಗನವಾಡಿ, ಆಸ್ಪತ್ರೆಗೆ ಕರ್ನಾಟಕ ರಾಜ್ಯ ಆಹಾರ ಆಯೋಗ ಭೇಟಿ; ಪರಿಶೀಲನೆ



• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷರಾದ ಡಾ.ಹೆಚ್.ಕೃಷ್ಣ ಹಾಗೂ ಸದಸ್ಯರಾದ ಮಾರುತಿ ಎಂ.ದೊಡ್ಡಲಿಂಗಣ್ಣವರ ಅವರು ಮೇ 20ರಂದು ಕೊಪ್ಪಳ ಜಿಲ್ಲೆಯಲ್ಲಿ ಆಕಸ್ಮಿಕ ಭೇಟಿ ಕೈಗೊಂಡರು.

ಬೆಳಗ್ಗೆ, ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಭೆ ನಡೆಸಿ, ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಕಾರ್ಯಾಚರಣೆ ಆರಂಭಿಸಿದ ಅಧ್ಯಕ್ಷರು, ಜಿಲ್ಲಾಡಳಿತ ಭವನದಿಂದ ನೇರವಾಗಿ ಕೊಪ್ಪಳ ಸಿಟಿಯ ಗಾಂಧೀನಗರದಲ್ಲಿನ ವಾರ್ಡ್ ನಂಬರ 23ರಲ್ಲಿನ 2ನೇ ಅಂಗನವಾಡಿಗೆ ಕೇಂದ್ರಕ್ಕೆ ತೆರಳಿ ಮೊದಲಿಗೆ ಆಹಾರ ದಾಸ್ತಾನು ಕೊಠಡಿ ಪ್ರವೇಶಿಸಿ ಪರಿಶೀಲನೆ ನಡೆಸಿದರು. ಈ ದಿನ ಮೆನು ಚಾಟ್ ಪ್ರಕಾರ ಮಕ್ಕಳಿಗೆ ಏನು ಕೊಡಬೇಕು? ಎಂದು ಕೇಳಿ, ಸತತ 2 ಗಂಟೆಗಳ ಕಾಲ ನಾನಾ ವಹಿಗಳನ್ನು ಪರಿಶೀಲಿಸಿದರು. ಅಂಗನವಾಡಿಗಳಲ್ಲಿ ದಾಖಲಾದ ಮಕ್ಕಳು, ಗರ್ಭಿಣಿಯರು ಹಾಗೂ ಬಾಣಂತಿಯರ ಸಂಖ್ಯೆ ಬಗ್ಗೆ ಕೇಳಿದರು. ಕಾಲಕಾಲಕ್ಕೆ ಭೇಟಿ ನೀಡ್ತೀರಾ ಎಂದು ಸಿಡಿಪಿಓ ಅವರಿಗೆ ಪ್ರಶ್ನಿಸಿದರು. 6 ತಿಂಗಳಿನಿಂದ 3 ವರ್ಷದವರೆಗಿನ ಮಕ್ಕಳಿಗೆ, ಗರ್ಭಿಣಿ ಮತ್ತು ಬಾಣಂತಿಯರ ಮನೆಗೆ ನೀಡುವ ಆಹಾರ ವಿತರಣಾ ಪುಸ್ತಕದಲ್ಲಿನ ವಿವರವನ್ನು ಇದೆ ವೇಳೆ ಪರಿಶೀಲಿಸಿದರು. ಅಂಗನವಾಡಿಯಲ್ಲಿ ಮೊಟ್ಟೆ ಖರೀದಿ ಬಿಲ್ಲುಗಳು ಸಮರ್ಪಕವಾಗಿಲ್ಲ. ಆಹಾರ ವಿತರಣೆ ವಹಿಯಲ್ಲಿ ದಾಖಲಾದ ಗರ್ಭಿಣಿಯರು ಮತ್ತು ಬಾಣಂತಿಯರ ವಿಳಾಸ ಮತ್ತು ಸಂಪರ್ಕ ಸಂಖ್ಯೆ ಹೊಂದಾಣಿಕೆ ಆಗುತ್ತಿಲ್ಲ. ಬ್ಯಾಂಕಿನಿಂದ ಡ್ರಾ ಮಾಡಿದ ಹಣಕ್ಕೆ ಸರಿಯಾದ ಲೆಕ್ಕಪತ್ರವಿಲ್ಲ ಎಂದು ಆಯೋಗದ ಸದಸ್ಯರು ಅಸಮಾಧಾನ ವ್ಯಕ್ತಪಡಿಸಿದರು.

ಬಳಿಕ ಅಧ್ಯಕ್ಷರು, ಮಧ್ಯಾಹ್ನ 1.25ರ ವೇಳೆಗೆ ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಬೋಧಕ ಆಸ್ಪತ್ರೆಗೆ ಭೇಟಿ ನೀಡಿದರು. ಆಸ್ಪತ್ರೆಯಲ್ಲಿನ ತುರ್ತು ಚಿಕಿತ್ಸಾ ನಿಗಾ ವಾರ್ಡನಲ್ಲಿನ ರೋಗಿಗಳನ್ನು ಮಾತನಾಡಿಸಿ, ಬಾಳೆ ಹಣ್ಣು, ಮೊಟ್ಟೆ ಕೊಟ್ಟಿದ್ದಾರಾ? ಎಂದು ರೋಗಿಗಳಿಗೆ ಕೇಳಿ ಮಾಹಿತಿ ಪಡೆದುಕೊಂಡರು. ಬಳಿಕ ಆಸ್ಪತ್ರೆ ಆವರಣದಲ್ಲಿನ ಅಡುಗೆ ತಯಾರಿಕಾ ಕೇಂದ್ರಕ್ಕೆ ತೆರಳಿ ಪರಿಶೀಲನೆ ನಡೆಸಿದರು. ಆಹಾರ ದಾಸ್ತಾನು ಕೊಠಡಿಯಲ್ಲಿನ ಮಸಾಲ ಸೇರಿದಂತೆ ವಿವಿಧ ಸಾಮಗ್ರಿಗಳ ಮೇಲಿನ ದಿನಾಂಕನ್ನು ಪರೀಕ್ಷಿಸಿದರು. ಅಕ್ಕಿ ಖರೀದಿಗೆ ಸಂಬಂಧಿಸಿದಂತೆ ಟೆಂಡರ್ ಪಾರ್ಮ ಹಾಗೂ ಬೇರೆ ಬೇರೆ ದಾಖಲಾತಿಗಳನ್ನು ಪರಿಶೀಲಿಸಿದರು. ಬಳಿಕ ಚಿಕ್ಕಮಕ್ಕಳ ವಿಭಾಗದಲ್ಲಿನ ಸ್ಟೋರ ರೂಮಗೆ ಭೇಟಿ ನೀಡಿ ಅಲ್ಲಿನ ಅಡುಗೆ ಸಾಮಗ್ರಿಗಳನ್ನು ಪರಿಶೀಲಿಸಿದರು. ಬಳಿಕ ವೈದ್ಯಕೀಯ ಅಧೀಕ್ಷಕರ ಕಚೇರಿಯಲ್ಲಿ ಸಭೆ ನಡೆಸಿ ಆಸ್ಪತ್ರೆಯಲ್ಲಿನ ಸೌಕರ್ಯಗಳ ಬಗ್ಗೆ ಮಾಹಿತಿ ಪಡೆದುಕೊಂಡರು. ಆಸ್ಪತ್ರೆಯಲ್ಲಿನ ರೋಗಿಗಳಿಗೆ ಗುಣಮಟ್ಟದ ಆಹಾರ ಪೂರೈಕೆಯಲ್ಲಿ ಲೋಪ ಕಂಡು ಬಂದ ಹಿನ್ನಲೆಯಲ್ಲಿ ಆಸ್ಪತ್ರೆಯ ನರ್ಸಿಂಗ್ ಸೂಪರ್ ಡೆಂಟ್ ಅವರ ಮೇಲೆ ಕ್ರಮ ಜರುಗಿಸಲು ಮತ್ತು ಆಸ್ಪತ್ರೆಗೆ ಆಹಾರ ಸಾಮಗ್ರಿ ಪೂರೈಸುವ ಈಗಿನ ಗುತ್ತಿಗೆದಾರರನ್ನು ಬದಲಿಸಲು ಕ್ರಮ ವಹಿಸಬೇಕು ಎಂದು ವೈದ್ಯಕೀಯ ಅಧೀಕ್ಷಕರಾದ ಡಾ.ಮಂಜುನಾಥ ಪಿ ಸಾಲ್ಮನಿ ಅವರಿಗೆ ಆಯೋಗದ ಅಧ್ಯಕ್ಷರು ನಿರ್ದೇಶನ ನೀಡಿದರು. ಈ ಸಂದರ್ಭದಲ್ಲಿ ಡಿಎಚ್‌ಓ ಡಾ.ಲಿಂಗರಾಜ್, ಕರ್ನಾಟಕ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ನಿರ್ದೇಶನ ಡಾ.ವೈಜನಾಥ ಇಟಗಿ, ವೈದ್ಯಾಧಿಕಾರಿ ಡಾ.ಅಲಕಾನಂದ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ಅಮರೇಶ ಹಾವಿನ, ಸಿಡಿಪಿಓ ರೋಹಿಣಿ ಕೊಟಗಾರ, ಜಿಲ್ಲಾ ನಿರೂಪಣಾಧಿಕಾರಿ ನಟರಾಜ ಹಾಗೂ ಇತರರು ಇದ್ದರು.

# ಮಂದಗತಿಯಲ್ಲಿ ಸಾಗುತ್ತಿರುವ ಚತುಷ್ಪತ ರಸ್ತೆ ಕಾಮಗಾರಿ



• ಮಲ್ಲಮ್ಮ ನುಡಿ ವಾರ್ತೆ ಹುಣಸೂರು

ಲಕ್ಷ್ಮಣ ತೀರ್ಥ ನದಿಗೆ ಅಡ್ಡಲಾಗಿ ಮಂದಗತಿಯಲ್ಲಿ ಸಾಗುತ್ತಿರುವ 85 ಕೋಟಿ ವೆಚ್ಚದ ಚತುಸ್ಪತ ರಸ್ತೆ ಮತ್ತು ನೂತನ ಸೇತುವೆ ನಿರ್ಮಾಣ ಕಾರ್ಯವನ್ನು ಶೀಘ್ರ ಪೂರ್ಣಗೊಳಿಸುವಂತೆ ಸತ್ಯ ಎಮ್ ಎಸ್ ಫೌಂಡೇಶನ್ ಅಧ್ಯಕ್ಷರು ಸತ್ಯಪ್ಪ ಒತ್ತಾಯ.ನಂತರ ಮಾತನಾಡಿ ರಾಷ್ಟ್ರೀಯ ಹೆದ್ದಾರಿ 275ರಲ್ಲಿ ಮೂಕನಹಳ್ಳಿಯಿಂದ ಹಾಳಗೆರೆಯವರೆಗೆ ಚತುಸ್ಪತ ಹೆದ್ದಾರಿ ನಿರ್ಮಾಣ ಕಾರ್ಯ ನಡೆಯುತ್ತಿದ್ದು ಲಕ್ಷ್ಮಣ ತೀರ್ಥ ನದಿಗೆ ಅಡ್ಡಲಾಗಿ ಸೇತುವೆ ನಿರ್ಮಾಣ ಕಾರ್ಯ ಪ್ರಾರಂಭ ಮಾಡಿದ್ದು ಕಾಮಗಾರಿಯು ಬಹಳ ನಿಧಾನಗತಿಯಲ್ಲಿ ಸಾಗುತ್ತಿದೆ.ಆದರೆ ಕಳೆದ ವರ್ಷ ಇದೇ ಸಮಯದಲ್ಲಿ ಸೇತುವೆ ನಿರ್ಮಾಣಕ್ಕೆ ತೊಡಗಿಕೊಂಡಿದ್ದು ಮಳೆಗಾಲ ಆರಂಭದಲ್ಲೇ ಸುರಿದ ಭಾರಿಮಳೆಯಿಂದಾಗಿ ಕೋಟ್ಯಾಂತರ ವೆಚ್ಚ ಮಾಡಿ ಮಾಡಲಾಗಿದ್ದ ಸೇತುವೆ ನಿರ್ಮಾಣ ಕಾರ್ಯವು ಸಂಪೂರ್ಣಕೊಚ್ಚಿ ಹೋಗಿ ಕೋಟ್ಯಾಂತರ ರೂಪಾಯಿ ನಷ್ಟವಾಗಿದೆ.ಈ ಬಾರಿಯೂ ಮಳೆಗಾಲಕ್ಕೆ ಮುನ್ನಸೇತುವೆ ನಿರ್ಮಾಣ ಕಾರ್ಯ ಪ್ರಾರಂಭ ಮಾಡಲಾಗಿದ್ದರೂ ಕಾಮಗಾರಿಯನ್ನು ಆದಷ್ಟು ಶೀಘ್ರವಾಗಿ ಪೂರೈಸಬೇಕಿದೆ.ಈ ನಿಟ್ಟಿನಲ್ಲಿ ಸಂಬಂಧಪಟ್ಟ ಟೆಂಡರ್ ಪಡೆದ ಗುತ್ತಿಗೆದಾರರು ಆದಷ್ಟು ತ್ವರಿತಗತಿಯಲ್ಲಿ ಸೇತುವೆ ಕೆಲಸಕಾಮಗಾರಿಯನ್ನು ಮುಗಿಸಬೇಕೆಂದು ರವರು ಒತ್ತಾಯಿಸಿದರು.

# ಬೆಳೆವಿಮೆ ತಾರತಮ್ಯ ರೈತರಿಂದ ಧರಣಿ



ಧರಣಿ ನಿರತರ ಸಮಸ್ಯೆಗಳನ್ನು ಕೇಳಿದ್ದು ಸಂಭಂದಿಸಿದ ಅಧಿಕಾರಿಗಳಾದ ಕೃಷಿ ಮತ್ತು ತೋಟಗಾರಿಕಾ ಅಧಿಕಾರಗಳ ಜೊತೆ ಸಮಾಲೋಚಿಸಿದ್ದು ತನಿಕೆ ನಡೆಯಿಸಿ ತಪ್ಪಗಸ್ಥರ ಮೇಲೆ ಕ್ರಮಕೈಗೊಳ್ಳುವಂತೆ ಮೇಲಾಧಿಕಾರಿಗಳಿಗೆ ವರದಿ ಸಲ್ಲಿಸಲಾಗುವುದು.

ತಾಲೂಕಾ ತಹಶಿಲ್ದಾರ ಬಸವರಾಜ ಹೊಂಕಣ್ಣವರ

• ಮಲ್ಲಮ್ಮ ನುಡಿ ವಾರ್ತೆಕಲಘಟಗಿ

ತಾಲೂಕಿನ ತಬಕದಹೊನ್ನಳ್ಳಿ ಹೊಬಳಿ ಗ್ರಾಮಗಳಿಗೆ ಸಂಭಂದಿಸಿದ ರೈತರು ಕಟ್ಟಿದ ಬೆಳೆ ವಿಮೆ ಸರಿಯಾಗಿ ಜಮೆಯಾಗದೆ ತಾರತಮ್ಯ ಮಾಡಲಾಗಿದೆ ಎಂದು ಭಾರತೀಯ ಕಿಸಾನ ಸಂಘದ ರೈತರು ಮತ್ತು ಉಳಿದ ರೈತ ಪರ ಸಂಘಟನೆಗಳು ಧರಣಿ ಸತ್ಯಾಗ್ರಹ ನಡೆಸಿದರು.

ಪಟ್ಟಣದ ತಹಶಿಲ್ದಾರ ಕಚೇರಿ ಆವರಣದಲ್ಲಿ ಗುರುವಾರ ಆಯೋಜಿಸಿದ್ದ ಧರಣಿಯಲ್ಲಿ ತಾಲೂಕಾ ಕೀಸಾನ ಸಂಘದ ಅಧ್ಯಕ್ಷ ಸಿದ್ದಪ್ಪ ಬೆಟಗೇರಿ ಮಾತನಾಡಿದರು.

2025–2026 ನೇ ಸಾಲಿನಲ್ಲಿ ಗೋವಿನ ಜೋಳ ಭತ್ತ ,ಬಾಳೆ, ಅಡಿಕೆ ಸೇರಿದಂತೆ ಬೆಳೆಗಳಿಗೆ ಪ್ರಧಾನಮಂತ್ರಿ ಫಸಲ ಭೀಮಾ ಯೋಜನೆಗಳಲ್ಲಿ ಸಕಾಲದಲ್ಲಿ ಬೆಳೆ ವಿಮೆ ಕಂತು ಕಟ್ಟಿದ್ದು ಬೆಳೆ ಹಾಳಾದ ಕುರಿತು ವರದಿ ಕೂಡ ಇಲಾಖೆ ಅಧಿಕಾರಿಗಳು ಸರಕಾರಕ್ಕೆ ಸಲ್ಲಿಸಿದ್ದು ವಿಮೆ ಕಂಪನಿಯ ಅಧಿಕಾರಿಗಳು ಮತ್ತು ಮದ್ಯವರ್ತಿಗಳ ಕೈವಾಡದಿಂದ ಅರ್ಹ ರೈತರಿಗೆ ಬೆಳೆ ವಿಮೆ ಕಂತು ಜಮೆಯಾಗಿಲ್ಲವೆಂದರು.

ಮಾಜಿ ಗ್ರಾ.ಪಂ ಸದಸ್ಯ ಶಶಿಧರ ಹುಲಿಕಟ್ಟಿ ಮಾತನಾಡಿ ಕಷ್ಟಪಟ್ಟು ಬೆಳೆದ ಬೆಳೆಗಳಿಗೆ ಸರಕಾರದಿಂದ ರೈತರಿಗೆ ಅನೂಕೂಲವಾಗಲೆಂದು ಯೋಜನೆಗಳನ್ನು ನಿರ್ಮಾಣ ಮಾಡಿದರೆ ಮದ್ಯವರ್ತಿಗಳ ಹಾವಳಿಯಿಂದ ಅರ್ಹ ಫಲಾನುಭವಿಗಳಿಗೆ ಯೋಜನೆಗಳ ಸವಲತ್ತು ಸಿಗುತ್ತಿಲ್ಲ ಇಗಾಗಲೇ ಸಂಬಂದಿಸಿದ ಅಧಿಕಾರಿಗಳಿಗೆ ತನಿಖೆ ನಡೆಸಲು ದೂರು ನೀಡಿದ್ದು ಪರಿಹಾರ ಸಿಗುವರೆಗೂ ಧರಣಿ ಮುಂದುವರೆಸುವುದಾಗಿ ತಿಳಿಸಿದರು.

ಧರಣಿಯಲ್ಲಿ ಗೋಪಾಲ ದಿವಟಿ,ನಾಗಣ್ಣ ಬೆಳ್ಳಿಗಟ್ಟಿ,ವಿವೇಕ ಮಾಡೆ,ಪುಥ್ವ ಸ್ವಾಮಿಜಿ,ಬಸವರಾಜ ತಿಪ್ಪಣ್ಣವರ,ಈಶ್ವರಪ್ಪ ಜಾಯಗೌಡ್ರ,ಕಲ್ಲಪ್ಪ ಪುಟ್ಟಪ್ಪನವರ,ಬಸವರಾಜ ಕಟ್ಟಿಮನಿ,ಪರಶುರಾಮ ಹುಲಿಹೊಂಡ,ಗುರುನಾಥ ಬೀರನವರ,ಚನ್ನಯ್ಯ ಬುಗಟೆಗಾರ,ನಿಂಗಯ್ಯ ಕಳ್ಳಿಮನಿ. ಶಾಂತಮ್ಮ ಅಂಗಡಿ,ಈರಮ್ಮ ಹೊಸುರ,ಗಂಗಮ್ಮ ಹುಲ್ಲಿಕಟ್ಟಟ್ಟಿ ರುದ್ರಗೌಡ ಪಾಟೀಲ ಇದ್ದರು.ಸ್ಥಳಕ್ಕೆ ಸಿ.ಪಿ.ಐ ಶ್ರೀಶೈಲ ಕೌಜಲಗಿ ಭೇಟಿ ನೀಡಿ ಮಾಹಿತಿ ಪಡೆದು ಪರಿಶಿಲಿಸಿ ಕ್ರಮಕೈಗೊಳ್ಳುವುದಾಗಿ ಭರವಸೆ ನೀಡಿದ್ದಾರೆ.

# ಚಂಪಾ ಕ್ರೀಡಾಂಗಣದಲ್ಲಿ ಪ್ರಗತಿಯಲ್ಲಿರುವ ಕಾಮಗಾರಿಗಳು ಪರಿಶೀಲಿಸಿದ ಡಿ.ಸಿ.

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಮೇ.21: ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಅವು ಬುಧವರಾ ನಗರದ ಚಂದ್ರಶೇಖರ ಪಾಟೀಲ ಕ್ರೀಡಾಂಗಣ–ಕ್ಕೆ ಭೇಟಿ ನೀಡಿ ಲೋಕೋಪಯೋಗಿ ಮತ್ತು ಕೆ.ಅರ್.ಐ.ಡಿ.ಎಲ್. ಸಂಸ್ಥೆಯಿಂದ ನಡೆಯುತ್ತಿರುವ ವಿವಿಧ ಕಾಮಗಾರಿಗಳು ಪರಿಶೀಲಿಸಿದರು.ಕ್ರೀಡಾಂಗಣ ಆವರಣದಲ್ಲಿನ ವಿವಿಧ ಅಂಕಣಗಳಿಗೆ ಭೇಟಿ ನೀಡಿ ಅಲ್ಲಿ ನಡೆಯುತ್ತಿರುವ ಕಾಮಗಾರಿಗಳುಲ ಪ್ರಗತಿ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದ ಅವರು, ಕಾಮಗಾರಿಗಳು ಗುಣಮಟ್ಟದಿಂದ ಕೂಡಿರಬೇಕು. ಯಾವುದೇ ಕಳಪೆ ಕೆಲಸಗಳಿಗೆ ಇಲ್ಲಿ ಅವಕಾಶ ನೀಡಬಾರದು. ಕ್ರೀಡಾಪಟುಗಳಿಗೆ ಅನುಕೂಲವಾಗುವಂತೆ ಮೂಲಸೌಕರ್ಯಗಳು ಅಭಿವೃದ್ಧಿಪಡಿಸಬೇಕು ಎಂದು ಎಜೆನ್ಸಿಗಳಿಗೆ ಸೂಚಿಸಿದರು..ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಸಂಗಮೇಶ, ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತ ರಾಹುಲ್ ಕಾಂಬಳೆ, ಕೆ.ಆರ್. ಐ.ಡಿ.ಎಲ್ ಇಲಾಖೆಯ ಅಭಿಷೇಕ್, ಕ್ರೀಡಾ ಇಲಾಖೆಯ ತರಬೇತುದಾರರಾದ ಸಜಯ್, ರಾಜು ಚವ್ಹಾಣ್, ಪ್ರವೀಣ್ ಪುಣೆ, ಅಶೋಕ್ ಎಂ ಹಾಗೂ ಕ್ರೀಡಾಂಗಣದ ಇತರೆ ಸಿಬ್ಬಂದಿ ವರ್ಗದವರು ಹಾಜರಿದ್ದರು.

## ಬಿ ಆರ್ ಪಾಟೀಲ ಶಿಷ್ಟಾಚಾರ ತಾವು ಪಾಲಿಸಿ ಇನ್ನೊಬ್ಬರಿಗೆ ಬೋಧಿಸಲಿ

ಆಳಂದ:ಸಾರ್ವಜನಿಕ ಜೀವನದಲ್ಲಿ ಇರುವವರು ಶಿಷ್ಟಾಚಾರ, ಸಂಸ್ಕಾರ ಹಾಗೂ ಗೌರವಯುತ ನಡೆ–ನುಡಿಗಳನ್ನು ಪಾಲಿಸುವುದು ಅತ್ಯಂತ ಮುಖ್ಯವಾಗಿದೆ ಈ ನಿಟ್ಟಿನಲ್ಲಿ ಶಾಸಕ ಬಿ ಆರ್ ಪಾಟೀಲ ಮೊದಲು ತಾವು ಪಾಲಿಸಿ ಇತರರಿಗೆ ಮಾದರಿಯಾಗಲಿ ಎಂದು ಭೂಸನೂರ ಗ್ರಾಮ ಪಂಚಾಯತ ಅಧ್ಯಕ್ಷ ಮುತ್ತಣ್ಣ ಬೀಳಗಿ ಅಭಿಪ್ರಾಯಪಟ್ಟಿದ್ದಾರೆ.ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಇತ್ತೀಚಿನ ದಿನಗಳಲ್ಲಿ ಶಾಸಕ ಬಿ ಆರ್ ಪಾಟೀಲ ಸಾರ್ವಜನಿಕ ವೇದಿಕೆಗಳಲ್ಲಿ ಬಳಸುತ್ತಿರುವ ಪದಪ್ರಯೋಗಗಳು ಹಾಗೂ ಹೇಳಿಕೆಗಳು ಸಮಾಜದಲ್ಲಿ ಅಸಮಾಧಾನ ಉಂಟುಮಾಡುತ್ತಿವೆ. ಶಾಸಕ ಬಿ ಆರ್ ಪಾಟೀಲ ಜಾತಿವಾದಿ ರಾಜಕಾರಣಿಯಾಗಿದ್ದು.ತಾವು ಪರಿಶಿಷ್ಟ ವರ್ಗಕ್ಕೆ ಸೇರಿದವರಾಗಿರುವುದರಿಂದ ಉದ್ದೇಶಪೂರ್ವಕವಾಗಿ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳ ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ತಮ್ಮ ಹೆಸರು ಕೈ ಬಿಟ್ಟಿದ್ದಾರೆ ಎಂದು ಆಪಾದಿಸಿದ್ದಾರೆ. ಇತ್ತೀಚಿಗೆ ಭೂಸನೂರ ಸಹಕಾರಿ ಸಕ್ಕರೆ ಕಾರ್ಖಾನೆಯಿಂದ ಭೂಸನೂರ ಗ್ರಾಮದವರೆಗಿನ ಹಾಗೂ ಭೂಸನೂರ ಬಸವೇಶ್ವರ ಚೌಕದಿಂದ ಭೂಸನೂರ ತಾಂಡಾದವರೆಗಿನ ರಸ್ತೆ ಸುಧಾರಣೆ ಕಾಮಗಾರಿ ಶಂಕುಸ್ಥಾಪನೆಯಲ್ಲಿ ಶಿಷ್ಟಾಚಾರಕ್ಕಾಗಿಯಾದರೂ ಹೆಸರು ಹಾಕಿಲ್ಲ ಮತ್ತು ಕಾರ್ಯಕ್ರಮಕ್ಕೆ ಕರೆದಿಲ್ಲ ಎಂದು ತಿಳಿಸಿದ್ದಾರೆ. ಕಳೆದ ಮೂರು ವರ್ಷಗಳಲ್ಲಿ ಆಳಂದ ತಾಲೂಕಿನಲ್ಲಿ ಶಿಷ್ಟಾಚಾರ ಎನ್ನುವುದು ಕಳೆದು ಹೋಗಿದೆ. ತಾಲೂಕಿನಲ್ಲಿ ಸರ್ಕಾರದ ಪ್ರತಿಯೊಂದು ಕಾಮಗಾರಿಗಳನ್ನು ಜನರಿಂದ ನೇರವಾಗಿ ಚುನಾಯಿತರಲ್ಲದ ಕೆಎಂಎಫ್ ಅಧ್ಯಕ್ಷ ಆರ್ ಕೆ ಪಾಟೀಲ ಗುದ್ದಲಿ ಪೂಜೆ ಮಾಡಿದ್ದಾರೆ ಇದಕ್ಕೆ ಶಾಸಕರು ಮೊದಲು ಉತ್ತರಿಸಲಿ ಎಂದು ಸವಾಲು ಹಾಕಿದ್ದಾರೆ.ಶಾಸಕ ಬಿ ಆರ್ ಪಾಟೀಲರ ಅಣ್ಣನ ಮಗ ಆರ್ ಕೆ ಪಾಟೀಲ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಶಾಸಕರಲ್ಲದಿದ್ದರೂ ಸರ್ಕಾರದ ಯೋಜನೆಯ ವಿವಿಧ ಕಾಮಗಾರಿಗಳನ್ನು ಅನುಷ್ಠಾನಗೊಳಿಸುತ್ತಿದ್ದಾರೆ. ಅಧಿಕಾರಿಗಳು ಇಲ್ಲಿ ಶಿಷ್ಟಾಚಾರ ಪಾಲಿಸುತ್ತಿಲ್ಲ. ಕೃಷಿ ಇಲಾಖೆಯ ರೈತ ಸಂಪರ್ಕ ಕೇಂದ್ರದ ಮೂಲಕ ವಿತರಣೆ ಮಾಡುವ ಬೀಜಗಳನ್ನು ಮತ್ತು ಸ್ಪ್ರಿಂಕ್ಲರ್ ಪೈಪುಗಳನ್ನು ವಿತರಿಸಿದ್ದಾರೆ ಇದರ ಬಗ್ಗೆ ಈ ಹಿಂದೆಯೇ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಗೆ ಪತ್ರ ಬರೆಯಲಾಗಿದೆ ಎಂದು ತಿಳಿಸಿದ್ದಾರೆ.

## ಆಕಾಶವಾಣಿ "ಹಲೋ ಪೊಲೀಸ್ ಕಮಿಷನರ್" ನೇರ ಫೋನ್ ಇನ್ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಮೇ 21:ಆಕಾಶವಾಣಿ ಕಲಬುರಗಿ ಕೇಂದ್ರವು ಮೇ 22(ಶುಕ್ರವಾರ) ರ ಬೆಳಗ್ಗೆ 11 ಗಂಟೆಗೆ ಕಲ್ಯಾಣ ವಾಣಿ ಕಾರ್ಯಕ್ರಮದಲ್ಲಿ "ಹಲೋ ಪೊಲೀಸ್ ಕಮಿಷನರ್" ನೇರ ಫೋನ್ ಇನ್ ಕಾರ್ಯಕ್ರಮವನ್ನು ಏರ್ಪಡಿಸಿದ್ದು, ಕಲಬುರಗಿ ನಗರ ಪೊಲೀಸ್ ಕಮಿಷನರ್ ಡಾ. ಶರಣಪ್ಪ .ಎಸ್.ಡಿ ಅವರು ಕಾರ್ಯಕ್ರಮದಲ್ಲಿ ಭಾಗವಹಿಸಿ ಕೇಳುಗರ ಪ್ರಶ್ನೆಗಳಿಗೆ ನೇರವಾಗಿ ಉತ್ತರಿಸಲಿದ್ದಾರೆ.

ಇ–ಚಲನ್, ಹೆಲ್ಮೆಟ್ ಕಡ್ಡಾಯ, ಸ್ಮಾರ್ಟ್ ಟ್ರಾಫಿಕ್ ಮ್ಯಾನೇಜ್ಮೆಂಟ್ ಸಿಸ್ಟಮ್, ಸೈಬರ್ ಅಪರಾಧ, ಡಿಜಿಟಲ್ ಅರೆಸ್ಟ್, ಡ್ರಗ್ ಮುಕ್ತ ಕಲಬುರಗಿ ಮುಂತಾದ ವಿಷಯಗಳ ಕುರಿತು ಕೇಳುಗರು ಪ್ರಶ್ನೆಗಳನ್ನು ಕೇಳಬಹುದು.

ಈ ನೇರ ಫೋನ್ ಇನ್ ಕಾರ್ಯಕ್ರಮದಲ್ಲಿ ಪ್ರಶ್ನೆಗಳನ್ನು ಕೇಳಲು ನಿಲಯದ ದೂರವಾಣಿ ಸಂಖ್ಯೆಗಳು, 08472–295986, 08472–295987, ಹಾಗೂ 08472–310105 ಗೆ ಕರೆ ಮಾಡಬಹುದಾಗಿದೆ ಎಂದು ಕಲಬುರಗಿ ಆಕಾಶವಾಣಿ ಮುಖ್ಯಸ್ಥರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾಂಗ್ರೆಸ್ ಕಛೇರಿಯಲ್ಲಿ ರಾಜೀವ್ ಗಾಂಧಿ ಪುಣ್ಯಸ್ಮರಣೆ



**ಬಳ್ಳಾರಿ:** ಮಾಜಿ ಪ್ರಧಾನಿ ರಾಜೀವ್ ಗಾಂಧಿ ಅವರ ಪುಣ್ಯಸ್ಮರಣೆಯನ್ನು ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಗುರುವಾರ ಆಚರಿಸಲಾಯಿತು.

ಬಳ್ಳಾರಿ ನಗರ ಜಿಲ್ಲಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಅಲ್ಲಂ ಪ್ರಶಾಂತ್ ಅವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ, ರಾಜೀವ್ ಗಾಂಧಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಗೌರವ ನಮನ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಕಾಂಗ್ರೆಸ್ ಮುಖಂಡರು, ದೇಶದ ಆಧುನಿಕ ಭಾರತ ನಿರ್ಮಾಣಕ್ಕೆ ರಾಜೀವ್ ಗಾಂಧಿ ಮಹತ್ವದ ಕೊಡುಗೆ ನೀಡಿದ್ದಾರೆ ಎಂದು ಸ್ಮರಿಸಿದರು. ಮಾಹಿತಿ ತಂತ್ರಜ್ಞಾನ ಮತ್ತು ಡಿಜಿಟಲ್ ಕ್ರಾಂತಿಗೆ ಅಡಿಗಲ್ಲು ಹಾಕಿದ ನಾಯಕನಾಗಿ ಅವರು ದೇಶದ ಅಭಿವೃದ್ಧಿಯಲ್ಲಿ ವಿಶೇಷ ಪಾತ್ರವಹಿಸಿದ್ದರು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಹಿರಿಯ ಕಾಂಗ್ರೆಸ್ ನಾಯಕ ಮಾನಯ್ಯ, ವಿರಸೇನಾ ರೆಡ್ಡಿ, ಕ್ರೈಸ್ತ ಅಭಿವೃದ್ಧಿ ನಿಗಮದ ರಾಜ್ಯ ನಿರ್ದೇಶಕ ಜಿ.ಜೆ. ರವಿಕುಮಾರ್, ಡಿಸಿಸಿ ಕಾರ್ಯಾಧ್ಯಕ್ಷ ಬೊಯಪಾಟಿ ವಿಷ್ಣುವರ್ಧನ್, ಡಿಸಿಸಿ ಉಪಾಧ್ಯಕ್ಷ ಕೆ. ಶ್ರೀನಿವಾಸುಲು, ಪ್ರಧಾನ ಕಾರ್ಯದರ್ಶಿ ಆಯಾಜ್ ಅಹಮ್ಮದ್, ನಗರ ಪ್ರಚಾರ ಸಮಿತಿಯ ಜಿಲ್ಲಾಧ್ಯಕ್ಷ ಈರಣ್ಣ ಗೌಡ, ಕೆಪಿಸಿಸಿ ವಕ್ತಾರ ಬಿ.ಎಂ. ಪಾಟೀಲ್, ಮುಂಚೂಣಿ ಘಟಕಗಳ ಅಧ್ಯಕ್ಷರಾದ ಎರುಕುಲ ಸ್ವಾಮಿ, ಅಲಿವೇಲು ಸುರೇಶ್, ಧನುಂಜಯ್ ಹಮಲ್, ಶ್ರೀಕಾಂತ್, ಅತ್ತಾವುಲ್ಲ ಸೇರಿದಂತೆ ಹಲವು ಮುಖಂಡರು ಭಾಗವಹಿಸಿದ್ದರು. ಡಿಸಿಸಿ ಕಾರ್ಯಕಾರಿಣಿ ಸದಸ್ಯ ವೆಂಕಟಲಕ್ಷ್ಮಿ ನಾರಾಯಣ, ಮುಖಂಡರಾದ ಬಿ.ಎ. ಮಲ್ಲೇಶ್ವರಿ, ಪರ್ವಿನ್ ಭಾನು, ಗೋನಾಳ್ ನಾಗಭೂಷಣ ಗೌಡ, ವಿಜಯ್, ಲಿಂಗರಾಜು ಹಾಗೂ ಇತರರು ಉಪಸ್ಥಿತರಿದ್ದರು.

## ಶಶಿಧರ್‌ಗೆ ಹೃದಯಸ್ಪರ್ಶಿ ಬೀಳ್ಕೊಡುಗೆ




**ಬಾಗಲಕೋಟೆ:** ಜಿಲ್ಲೆಯ ಅಭಿವೃದ್ಧಿಗೆ ಸಹಕರಿಸಿದ ಜನಪ್ರತಿನಿಧಿಗಳು, ಅಧಿಕಾರಿ ಮತ್ತು ಸಿಬ್ಬಂದಿ ವರ್ಗ, ಜಿಲ್ಲೆಯ ಜನರ ಪ್ರೀತಿ, ವಿಶ್ವಾಸ ಹಾಗೂ ಸಹೋದ್ಯೋಗಿಗಳ ಬೆಂಬಲ ಎಂದಿಗೂ ಮರೆಯಲಾಗದು ಎಂದು ವರ್ಗಾವಣೆಗೊಂಡಿರುವ ಜಿ.ಪಂ ಸಿಇಓ ಶಶಿಧರ ಕುರೇರ ಹೇಳಿದರು. ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಜರುಗಿದ ಬೀಳ್ಕೊಡುಗೆ ಸಮಾರಂಭದಲ್ಲಿ ಆತ್ಮೀಯ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಬಾಗಲಕೋಟೆ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರದ ಹುದ್ದೆಯನ್ನು ವಹಿಸಿಕೊಂಡಾಗ ನನ್ನ ಮೇಲೆ ಗುರುತರವಾದ ಜವಾಬ್ದಾರಿ ಹಾಗೂ ಹೊಣೆಗಾರಿಕೆ ಇತ್ತು. ಆದರೆ ಇಲ್ಲಿನ ಜನಪ್ರತಿನಿಧಿಗಳು, ಅಧಿಕಾರಿ ಹಾಗೂ ಸಿಬ್ಬಂದಿ ವರ್ಗಗಳ ಸಹಕಾರದಿಂದ ಉತ್ತಮವಾಗಿ ಕೆಲಸ ಮಾಡಲು ಸಾಧ್ಯವಾಯಿತು. ಪ್ರತಿಯೊಂದು ಯಶಸ್ಸಿನ ಹಿಂದೆ ಎಲ್ಲರ ಶ್ರಮ ಇರುತ್ತದೆ ಎಂದು ತಿಳಿಸಿದರು.

ಸರಕಾರಿ ಸೇವೆಗೆ ಸೇರಿದ ಬಳಿಕ ಸಮಾಜಕ್ಕೆ ಉತ್ತಮ ಸೇವೆ ನೀಡುವುದು ನಮ್ಮ ಜವಾಬ್ದಾರಿ. ಇದನ್ನು ಅರಿತು ನಾವು ಕೆಲಸ ಮಾಡಬೇಕಾಗುತ್ತದೆ. ಜಿಲ್ಲೆಯ ಅಭಿವೃದ್ಧಿ ಹಿನ್ನಲೆಯಲ್ಲಿ ಈ ಹಿಂದಿನ ಹಾಗೂ ಇಂದಿನ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಜೊತೆ ಜೊತೆಯಾಗಿ ಕೆಲಸ ಮಾಡಿದ್ದೇನೆ. ಎಲ್ಲರೂ ಸಹಕಾರ ಕೊಟ್ಟಿದ್ದರಿಂದ ಉತ್ತಮವಾಗಿ ಕಾರ್ಯನಿರ್ವಹಿಸಲು ಸಾಧ್ಯವಾಯಿತು. ಜಿಲ್ಲೆಯ ಅಭಿವೃದ್ಧಿ ಕಾರ್ಯಗಳಿಗೆ ದೊರೆತ ಪ್ರತಿಯೊಂದು ಪ್ರಶಸ್ತಿಗಳು ಕೇವಲ ನಮ್ಮ ಶ್ರಮವಲ್ಲ. ಇದಕ್ಕೆ ಶ್ರಮಿಸಿದ ಜಿಲ್ಲಾ ಹಾಗೂ ತಾಲೂಕಾ ಮಟ್ಟದ ಅಧಿಕಾರಿ ಮತ್ತು ಸಿಬ್ಬಂದಿಗಳ ಶ್ರಮವಿದೆ ಎಂದರು.

ಜಿಲ್ಲಾಧಿಕಾರಿ ಸಂಗಪ್ಪ ಮಾತನಾಡಿ, ಜಿಲ್ಲೆಯ ವಿವಿಧ ಕ್ಷೇತ್ರಗಳಲ್ಲಿ ಕುರೇರ ಮಾಡಿದ ಕಾರ್ಯಗಳು ಶ್ಲಾಘನೀಯವಾಗಿದ್ದು, ಜಿಲ್ಲಾಡಳಿತ ಜೊತೆಗೆ ಉತ್ತಮವಾಗಿ ಕೆಲಸ ಮಾಡಿ ಸಲಹೆ ನೀಡಿದ್ದಾರೆ. ಅಭಿವೃದ್ಧಿಗೆ ಅವರು ನೀಡಿದ ಮಾರ್ಗದರ್ಶನ ಹಾಗೂ ಆಡಳಿತದ ಶೈಲಿ ಸದಾ ಸ್ಮರಣೀಯವಾಗಿರಲಿ ಎಂದು ಅಭಿಪ್ರಾಯ ಪಟ್ಟರು.

ಪ್ರಾರಂಭದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಜಿ.ಪಂ ಉಪ ಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ, ಶಶಿಧರ ಕುರೇರ್ ಅವರು ಮೂರು ವರ್ಷಗಳ ಅವಧಿಯಲ್ಲಿ ಮಾಡಿದ ಅಭಿವೃದ್ಧಿ ಕಾರ್ಯಗಳನ್ನು ಸ್ಮರಿಸಿ, ಮೆಚ್ಚುಗೆ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಜಿ.ಪಂ ಮುಖ್ಯ ಯೋಜನಾಧಿಕಾರಿ ಅಲ್ಲಮಪ್ರಭು, ಮುಖ್ಯ ಲೆಕ್ಕಾಧಿಕಾರಿ ಸಿದ್ದರಾಮೇಶ್ವರ ಉಕ್ಕಲಿ, ಸೇರಿದಂತೆ ಜಿ.ಪಂ ವ್ಯಾಪ್ತಿಯ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಸುರಕ್ಷತಾ ಕ್ರಮಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಡಿಸಿ ಸೂಚನೆ



**ಬಾಗಲಕೋಟೆ:** ರಾಷ್ಟ್ರೀಯ ಹೆದ್ದಾರಿಗಳ ಸುರಕ್ಷತೆಗೆ ಸಂಬಂಧಿಸಿದಂತೆ ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ಸುರಕ್ಷತಾ ಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ಜಿಲ್ಲಾಧಿಕಾರಿ ಸಂಗಪ್ಪ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜಿಲ್ಲೆಯ ರಾಷ್ಟ್ರೀಯ ಹೆದ್ದಾರಿಗಳ ಸುರಕ್ಷತೆ, ಆಕ್ರಮಣಗಳ ತೆರವು ಹಾಗೂ ರಸ್ತೆ ಅಪಘಾತಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಸರ್ವೋಚ್ಛ ನ್ಯಾಯಾಲಯದಲ್ಲಿ ದಾಖಲಾದ ಪ್ರಕರಣಕ್ಕೆ ಸಂಬಂಧಿಸಿದಂತೆ ನೀಡಿರುವ ಆದೇಶಗಳ ಅನುಷ್ಠಾನ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರಾಷ್ಟ್ರೀಯ ಹೆದ್ದಾರಿಗಳಲ್ಲಿ ಉಂಟಾಗುವ ಅಪಘಾತಗಳ ಸಂಖ್ಯೆ ಕಡಿಮೆ ಮಾಡಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ರಾಷ್ಟ್ರೀಯ ಹೆದ್ದಾರಿ ಪಕ್ಕದ ಅನಧಿಕೃತ ಆಕ್ರಮಗಳನ್ನು ತೆರವುಗೊಳಿಸಿ ವಾಹನ ಸಂಚಾರಕ್ಕೆ ಅಡ್ಡಿಯಾಗದಂತೆ ಕ್ರಮಕೈಗೊಳ್ಳಬೇಕು. ಹೆದ್ದಾರಿ ವ್ಯಾಪ್ತಿಯಲ್ಲಿ ಗೊತ್ತುಪಡಿಸಿದ ಬೇ, ಲೇ-ಬೈ ಅಥವಾ ವೇಸೈಡ್ ಸೌಲಭ್ಯವನ್ನು ಹೊರತುಪಡಿಸಿ ನಿಲ್ಲಿಸುವದನ್ನು ತಡೆಯಬೇಕು. ಇದಕ್ಕಾಗಿ ಪೊಲೀಸ್ ಇಲಾಖೆಯ ಜೊತೆಗೆ ಇತರೆ ಇಲಾಖೆಯೊಂದಿಗೆ ಜಂಟಿಯಾಗಿ ತಪಾಸಣೆ ಮತ್ತು ಗಸ್ತು ತಿರುಗುವ ಕೆಲಸವಾಗಬೇಕು. ಅತಿಕ್ರಮಣ ದೂರುಗಳಿಗಾಗಿ ಸಾರ್ವಜನಿಕರು ಉಚಿತ ಸಹಾಯವಾಣಿ ಸಂಖ್ಯೆ 1033 ಗೆ ಕರೆ ಮಾಡಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

# ವೇಶ್ಯಾವಾಟಿಕೆ: ಮಹಿಳೆಯರ ರಕ್ಷಣೆ, ಪ್ರಕರಣ ದಾಖಲು

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**



ನಗರದ ಗಾಂಧಿನಗರ ಹಾಗೂ ಎಪಿಎಂಸಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದ ಮೂರು ಪ್ರತ್ಯೇಕ ದಾಳಿಗಳಲ್ಲಿ ವೇಶ್ಯಾವಾಟಿಕೆ ನಡೆಸಲಾಗುತ್ತಿದ್ದ ಅಡ್ಡೆಗಳನ್ನು ಪತ್ತೆಹಚ್ಚಿದ ಪೊಲೀಸರು ನಾಲ್ವರು ಮಹಿಳೆಯರನ್ನು ರಕ್ಷಣೆ ಮಾಡಿ ಸ್ತ್ರೀ ಸೇವಾನೀಕೇತನ ಕೇಂದ್ರಕ್ಕೆ ಒಪ್ಪಿಸಿದ್ದಾರೆ. ಪ್ರಕರಣ ಸಂಬಂಧ ಹಲವರ ವಿರುದ್ಧ ಪ್ರಕರಣ ದಾಖಲಾಗಿದ್ದು, ಕೆಲ ಆರೋಪಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಕಳುಹಿಸಲಾಗಿದೆ.

ಗಾಂಧಿನಗರ ಪೊಲೀಸ್ ಠಾಣೆ ವ್ಯಾಪ್ತಿಯ ಸೊಂತ ಅಂಗಣ್ಣ ಕಾಲೋನಿಯ ತಿರುಮಲ ಆಸ್ಪತ್ರೆ ಮುಂಭಾಗದ ಮನೆಯಲ್ಲಿ ವೇಶ್ಯಾವಾಟಿಕೆ ನಡೆಯುತ್ತಿರುವ ಖಚಿತ ಮಾಹಿತಿ ಮೇರೆಗೆ ಮೇ 17ರಂದು ಪೊಲೀಸರು ಶೋಧನಾ ವಾರೆಂಟ್ ಮೂಲಕ ದಾಳಿ ನಡೆಸಿದರು. ದಾಳಿಯಲ್ಲಿ ಒಬ್ಬ ಮಹಿಳೆಯನ್ನು ರಕ್ಷಣೆ ಮಾಡಲಾಗಿದ್ದು, ಪ್ರಕರಣ ಸಂಬಂಧ ಅಪರಾಧ ಸಂಖ್ಯೆ 78/2026ರಡಿ BNS-2023ರ ಕಲಂ 143(1)(b), 144(2) ಹಾಗೂ Immoral Traffic Prevention Act–1956ರ ಕಲಂ 3, 4, 5, 6 ಅಡಿಯಲ್ಲಿ ಪ್ರಕರಣ ದಾಖಲಾಗಿದೆ.

ಪ್ರಕರಣದ ಆರೋಪಿಗಳಾದ ದೇವಿಪ್ರಸನ್ನ ಹಾಗೂ ಸೂರಿ @ ಜಲ್ಲಾ ಸೂರಿ ಮನೆ ಬಾಡಿಗೆ ಪಡೆದು ಬಾಗಲಕೋಟೆ ಮೂಲದ ಮಹಿಳೆಗೆ ಹಣದ ಆಮಿಷ ತೋರಿಸಿ ವೇಶ್ಯಾವಾಟಿಕೆ ನಡೆಸುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಆರೋಪಿಗಳಿಬ್ಬರು ಪರಾರಿಯಾಗಿದ್ದು, ಪತ್ತೆ ಕಾರ್ಯ ಮುಂದುವರೆದಿದೆ. ದೇವಿಪ್ರಸನ್ನ ವಿರುದ್ಧ ಈಗಾಗಲೇ ಗಾಂಧಿನಗರ ಪೊಲೀಸ್ ಠಾಣೆಯಲ್ಲಿ ನಾಲ್ಕು ಹಾಗೂ ಬಳ್ಳಾರಿ ಗ್ರಾಮೀಣ ಠಾಣೆಯಲ್ಲಿ ಒಂದು ಸೇರಿ ಒಟ್ಟು ಐದು ಪ್ರಕರಣಗಳು ದಾಖಲಾಗಿವೆ. ಆರೋಪಿಯನ್ನು ಗಡಿಪಾರು ಮಾಡುವ ಪ್ರಕ್ರಿಯೆಯೂ ಚಾಲ್ತಿಯಲ್ಲಿದೆ ಎಂದು ತಿಳಿದುಬಂದಿದೆ. ಸೂರಿ ಆಟೋ ಚಾಲಕನಾಗಿದ್ದು, ಗ್ರಾಹಕರನ್ನು ಸ್ಥಳಕ್ಕೆ ಕರೆತರುವ ಕೆಲಸ ಮಾಡುತ್ತಿದ್ದನೆಂದು ಪೊಲೀಸರು ತಿಳಿಸಿದ್ದಾರೆ.

ಮತ್ತೊಂದು ಪ್ರಕರಣದಲ್ಲಿ ಮೇ 20ರಂದು ಅನಂತಪುರ ರಸ್ತೆಯ ವೆಂಕಟೇಶ್ವರ ನಗರಕ್ಕೆ ಹೋಗುವ ಮಾರ್ಗದಲ್ಲಿರುವ ಎನ್.ಬಿ ಆಸ್ಪತ್ರೆ ಸಮೀಪದ "ನೀಲಕಂಠೇಶ್ವರ ನಿಲಯ"ದಲ್ಲಿ ಅಕ್ರಮ ಲೈಂಗಿಕ ಚಟುವಟಿಕೆ ನಡೆಯುತ್ತಿರುವ ಮಾಹಿತಿ ಮೇರೆಗೆ ಗಾಂಧಿನಗರ ಪೊಲೀಸರು ದಾಳಿ ನಡೆಸಿ ಒಬ್ಬ ಮಹಿಳೆಯನ್ನು ರಕ್ಷಿಸಿದ್ದಾರೆ.

ಈ ಕುರಿತು ಅಪರಾಧ ಸಂಖ್ಯೆ 82/2026ರಡಿ BNS-2023ರ ಕಲಂ 143(1)(2), 144(2) ಹಾಗೂ Immoral Traffic Prevention Act-1956ರ ಕಲಂ 3, 4, 5, 6 ಅಡಿಯಲ್ಲಿ ಪ್ರಕರಣ ದಾಖಲಾಗಿದೆ. ಪ್ರಕರಣದ ಆರೋಪಿತಳಾದ ಎಸ್. ಶಹಜಾದಿ (46) ಮನೆ ಬಾಡಿಗೆ ಪಡೆದು ಬೆಂಗಳೂರಿನ ಮಹಿಳೆಗೆ ಹಣದ ಆಮಿಷ ತೋರಿಸಿ ಅಕ್ರಮ ಚಟುವಟಿಕೆಯಲ್ಲಿ ತೊಡಗಿಸಿದ್ದಳು ಎಂದು ಆರೋಪಿಸಲಾಗಿದೆ. ಆರೋಪಿತಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಕಳುಹಿಸಲಾಗಿದೆ.

ಈ ಎರಡೂ ದಾಳಿಗಳನ್ನು ಗಾಂಧಿನಗರ ಪೊಲೀಸ್ ಠಾಣೆಯ ಪಿ.ಐ. ರವಿಚಂದ್ರ ಅವರ ನೇತೃತ್ವದಲ್ಲಿ ಡಿ.ಬಿ ಸಿಬ್ಬಂದಿಗಳಾದ ಹನುಮಂತಪ್ಪ, ಮಹಲಿಂಗಪ್ಪ, ಜಯರಾಜ್, ಮಂಜುನಾಥ, ದಯಾಸಾಗರ್, ಚಿನ್ನಸ್ವಾಮಿ, ಅಯ್ಯಪ್ಪ ಹಾಗೂ ಶ್ರೀಮತಿ ಬಸಲಿಂಗಮ್ಮ ಅವರ ತಂಡ ನಡೆಸಿತು.

ಇನ್ನೊಂದೆಡೆ, ಎಪಿಎಂಸಿ ಪೊಲೀಸ್ ಠಾಣೆ ವ್ಯಾಪ್ತಿಯ ಅಗಡಿ ಮಾರಪ್ಪ ಕಾಂಪೌಂಡ್‌ನ 2ನೇ ಸ್ಟೇಜ್ ಮುಖ್ಯರಸ್ತೆ ಸಮೀಪದ "ಕೆ. ಎಂ.ಎಸ್ ಶಕುಂತಲಮ್ಮ ನಿಲಯಂ" ಮನೆಯ ನೆಲಮಹಡಿಯಲ್ಲಿ ವೇಶ್ಯಾವಾಟಿಕೆ ನಡೆಯುತ್ತಿರುವ ಮಾಹಿತಿ ಮೇರೆಗೆ ಪೊಲೀಸರು ದಾಳಿ ನಡೆಸಿ ಇಬ್ಬರು ಮಹಿಳೆಯರನ್ನು ರಕ್ಷಿಸಿದ್ದಾರೆ.

ಘಟನೆ ಸಂಬಂಧ ಅಪರಾಧ ಸಂಖ್ಯೆ 118/2026ರಡಿ BNS-2023ರ ಕಲಂ 143 ಹಾಗೂ Immoral Traffic Prevention Act-1956ರ ಕಲಂ 3, 4, 5, 6 ಅಡಿಯಲ್ಲಿ ಮೂವರು ಆರೋಪಿಗಳ ವಿರುದ್ಧ ಪ್ರಕರಣ ದಾಖಲಾಗಿದೆ. ರಕ್ಷಿಸಲ್ಪಟ್ಟ ಮಹಿಳೆಯರಲ್ಲಿ ಒಬ್ಬರು ಬೆಂಗಳೂರು ನಿವಾಸಿಯಾಗಿದ್ದು, ಮತ್ತೊಬ್ಬರು ಆಂಧ್ರಪ್ರದೇಶ ಮೂಲದವರಾಗಿದ್ದಾರೆ. ಸ್ಥಳದಲ್ಲಿದ್ದ ಒಬ್ಬ ಗ್ರಾಹಕನಿಗೆ ನೋಟಿಸ್ ಜಾರಿ ಮಾಡಲಾಗಿದೆ.

ಪ್ರಕರಣದಲ್ಲಿ ಗಣೇಶ (48) ಹಾಗೂ ಉಷಾ (27) ಅವರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಕಳುಹಿಸಲಾಗಿದ್ದು, ಮತ್ತೊಬ್ಬ ಆರೋಪಿತೆ ಶಾಂತಿ ಪರಾರಿಯಾಗಿದ್ದು, ಆಕೆಯ ಪತ್ತೆಗಾಗಿ ಪೊಲೀಸರು ಶೋಧ ಕಾರ್ಯ ಮುಂದುವರಿಸಿದ್ದಾರೆ.

# ಒಳ್ಳೆಯ ರಸ್ತೆಗಳನ್ನು ದುರಸ್ತಿಗೊಳಿಸುತ್ತಿರುವ ಗುತ್ತಿಗೆದಾರರ ಮೇಲೆ ಕ್ರಮ..?

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**



ಮಹಾನಗರಪಾಲಿಕೆ ವ್ಯಾಪ್ತಿಯ ಹಲವಾರು ವಾರ್ಡುಗಳಲ್ಲಿ ಈಗಾಗಲೇ ಉತ್ತಮ ಸ್ಥಿತಿಯಲ್ಲಿರುವ ರಸ್ತೆಗಳನ್ನು "ದುರಸ್ತಿ ಕಾಮಗಾರಿ" ಹೆಸರಿನಲ್ಲಿ ಮತ್ತೆ ಅಗೆದು ಕಾಮಗಾರಿ ನಡೆಸುತ್ತಿರುವ ಬಗ್ಗೆ ಸಾರ್ವಜನಿಕರಲ್ಲಿ ತೀವ್ರ ಅಸಮಾಧಾನ ವ್ಯಕ್ತವಾಗುತ್ತಿದೆ. ಸ್ಥಳೀಯರು ಕೇಳುತ್ತಿರುವ ಪ್ರಮುಖ ಪ್ರಶ್ನೆ ಏನೆಂದರೆ ಇದು ನಿಜವಾಗಿಯೂ ಅಗತ್ಯ ಕಾಮಗಾರಿಯಾ? ಅಥವಾ ಗುತ್ತಿಗೆದಾರರಿಗೆ ಲಾಭ ಮಾಡುವ ವ್ಯವಸ್ಥೆಯಾ?

ನಗರದ ವಿವಿಧ ವಾರ್ಡುಗಳಲ್ಲಿ ಹೊಸದಾಗಿ ನಿರ್ಮಾಣಗೊಂಡಿದ್ದ ಅಥವಾ ಇನ್ನೂ ಬಳಕೆಗೆ ಯೋಗ್ಯವಾಗಿದ್ದ ರಸ್ತೆಗಳನ್ನು ಮರುತೋಡಲಾಗುತ್ತಿದೆ ಎನ್ನುವ ಆರೋಪ ಕೇಳಿಬರುತ್ತಿದೆ. ಕೆಲವೆಡೆ ನೀರು, ಒಳಚರಂಡಿ, ಕೇಬಲ್ ಅಥವಾ ಇತ-ರೆ ಇಲಾಖೆಗಳ ಸಮನ್ವಯದ ಕೊರತೆಯಿಂದ ರಸ್ತೆ ನಿರ್ಮಾಣವಾದ ಕೆಲವೇ ದಿನಗಳಲ್ಲಿ ಮತ್ತೆ ಅಗೆದಿರುವ ಉದಾಹರಣೆಗಳೂ ಕಂಡುಬರುತ್ತಿವೆ. ಇದರಿಂದ ಸಾರ್ವಜನಿಕ ಹಣ ವ್ಯರ್ಥವಾಗುತ್ತಿದೆ ಎಂಬ ಟೀಕೆ ಹೆಚ್ಚಾಗಿದೆ.

**ಸ್ಥಳೀಯ ನಿವಾಸಿಗಳ ಅಭಿಪ್ರಾಯದಂತೆ:**

- ಕಾಮಗಾರಿ ಆರಂಭಿಸುವ ಮೊದಲು ಸಮಗ್ರ ಯೋಜನೆ ಇಲ್ಲ.
- ರಸ್ತೆ ಗುಣಮಟ್ಟ ಪರಿಶೀಲನೆಗೆ ಪರಿಣಾಮಕಾರಿ ವ್ಯವಸ್ಥೆ ಕಾಣುತ್ತಿಲ್ಲ.
- ಗುತ್ತಿಗೆದಾರರ ವಿರುದ್ಧ ದೂರುಗಳಿದ್ದರೂ ಕ್ರಮ ವಿಳಂಬವಾಗುತ್ತಿದೆ.
- ಅಧಿಕಾರಿಗಳು ಸ್ಥಳ ಪರಿಶೀಲನೆ ಮಾಡದೇ ಬಿಲ್ ಪಾಸ್ ಮಾಡುತ್ತಿದ್ದಾರೆ ಎಂಬ ಆರೋಪಗಳಿವೆ.

**ಈ ಹಿನ್ನೆಲೆದಲ್ಲಿ ಎರಡು ಪ್ರಶ್ನೆಗಳು ಹೆಚ್ಚು ಕೇಳಿಬರುತ್ತಿವೆ:**

- ಸಂಬಂಧಪಟ್ಟ ಅಧಿಕಾರಿಗಳ ನಿರ್ಲಕ್ಷ್ಯವೇ?
- ಅಥವಾ ಜನಪ್ರತಿನಿಧಿಗಳ ರಾಜಕೀಯ ಬೆಂಬಲದಿಂದ ಗುತ್ತಿಗೆದಾರರು ಮನಬಂದಂತೆ ಕೆಲಸ ಮಾಡುತ್ತಿದ್ದಾರೆಯೇ?

ಸಾರ್ವಜನಿಕ ವಲಯದಲ್ಲಿ ಈಗಾಗಲೇ "ಒಳ್ಳೆಯ ರಸ್ತೆಯನ್ನು ಕೆಡವಿ ಮತ್ತೆ ಕಾಮಗಾರಿ" ಮಾಡುವ ಪದ್ಧತಿ ಕಮಿಷನ್ ಆಧಾರಿತ ವ್ಯವಸ್ಥೆಯ ಭಾಗವೇ ಎಂಬ ಅನುಮಾನ ವ್ಯಕ್ತವಾಗುತ್ತಿದೆ. ಸಾಮಾಜಿಕ ಜಾಲತಾಣಗಳಲ್ಲೂ ಜನರು ಕಾಮಗಾರಿ ಗುಣಮಟ್ಟದ ವಿರುದ್ಧ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ನಗರಾಭಿವೃದ್ಧಿ ತಜ್ಞರ ಅಭಿಪ್ರಾಯದಂತೆ, ಯಾವುದೇ ರಸ್ತೆ ಕಾಮಗಾರಿಗೆ: ತಾಂತ್ರಿಕ ಪರಿಶೀಲನೆ, ಅವಶ್ಯಕತೆ ಮೌಲ್ಯಮಾಪನ, ವಾರಂಟಿ ಅವಧಿ ಪರಿಶೀಲನೆ, ಹಾಗೂ ಸಾರ್ವಜನಿಕ ಮಾಹಿತಿ ಪ್ರಕಟಣೆ ಕಡ್ಡಾಯವಾಗಬೇಕು.

ಇಲ್ಲದಿದ್ದರೆ ಅಭಿವೃದ್ಧಿ ಹೆಸರಿನಲ್ಲಿ ಸಾರ್ವಜನಿಕ ಹಣ ದುರುಪಯೋಗವಾಗುವ ಸಾಧ್ಯತೆ ಹೆಚ್ಚುತ್ತದೆ.

ಸದ್ಯಕ್ಕೆ ಬಳ್ಳಾರಿ ಮಹಾನಗರ ಪಾಲಿಕೆ ಅಥವಾ ಸಂಬಂಧಪಟ್ಟ ಇಲಾಖೆಯಿಂದ ಈ ಆರೋಪಗಳಿಗೆ ಸ್ಪಷ್ಟ ಪ್ರತಿಕ್ರಿಯೆ ಬಂದಿಲ್ಲ. ಆದರೆ ನಾಗರಿಕ ಸಂಘಟನೆಗಳು ಕಾಮಗಾರಿಗಳ ತನಿಖೆ ನಡೆಸಬೇಕು ಹಾಗೂ ತಪ್ಪಿತಸ್ಥ ಗುತ್ತಿಗೆದಾರರು ಮತ್ತು ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸುತ್ತಿವೆ.

# ಮತದಾರರನ್ನು ಪಟ್ಟಿಯಿಂದ ಕೈಬಿಡುವ ವ್ಯವಸ್ಥಿತ ಷಡ್ಯಂತ್ರ

• **ಮಲ್ಲಮ್ಮ ನುಡಿ ವಾರ್ತೆ ಹುಣಸೂರು**



ಕೇಂದ್ರ ಸರಕಾರವು ಕೇಂದ್ರ ಚುನಾವಣಾ ಆಯೋಗದ ಮೂಲಕ ತಾಲೂಕಿನಲ್ಲಿ 23 ಸಾವಿರ ಸೇರಿದಂತೆ ಜಿಲ್ಲೆಯಲ್ಲಿ ಮೂರು ಲಕ್ಷಕ್ಕೂ ಹೆಚ್ಚು ಮತದಾರರನ್ನು ಪಟ್ಟಿಯಿಂದ ಕೈಬಿಡುವ ವ್ಯವಸ್ಥಿತ ಷಡ್ಯಂತ್ರ ನಡೆಯುತ್ತಿದೆ ಎಂದು ಮಾಜಿ ಶಾಸಕ ಎಚ್.ಪಿ. ಮಂಜುನಾಥ್ ಆರೋಪಿಸಿದರು.

ನಗರದ ಕಾಂಗ್ರೆಸ್ ಕಚೇರಿ ಆವರಣದಲ್ಲಿ ಹುಣಸೂರು ವಿಧಾನಸಭಾ ವ್ಯಾಪ್ತಿಯ ಬೂತ್ ಅಧ್ಯಕ್ಷರು (ಬಿಎಲ್‌ಎ)ಗಳ ಸಭೆಯಲ್ಲಿ ಮಾತನಾಡಿದ ಅವರು, "ಈಗಾಗಲೇ ಚುನಾವಣಾ ಆಯೋಗ ಮತದಾರ ಪಟ್ಟಿಯ ಮ್ಯಾಪಿಂಗ್ ಕಾರ್ಯ ಮುಗಿಸಿದೆ. ಈ ಸಮಯದಲ್ಲಿ ನಮ್ಮ ಪಕ್ಷದ ಬಿಎಲ್ ಎಗಳು ಎಚ್ಚೆತ್ತು ಸರಿಯಾದ ದಾಖಲೆಗಳ ಪರಿಶೀಲನೆ ಮಾಡುವ ಬಿಎಲ್‌ಒಗಳ ಬಳಿಯಲ್ಲಿ ಪಟ್ಟಿ ಇದ್ದು, ಯಾರ ಹೆಸರು ಕೈಬಿಟ್ಟಿದ್ದಾರೆ. ಸೇರಿಸಿದ್ದಾರೆ ಎಂಬುದನ್ನು ಖಚಿತ ಪಡಿಸಿಕೊಳ್ಳಬೇಕು. ಒಂದೇ ಒಂದು ಲೋಪ ದೋಷ ಕಂಡ ಬಂದರೆ ಕೂಡಲೆ ನಮ್ಮ ಗಮನಕ್ಕೆ ತರಬೇಕು," ಎಂದರು.

ಕೆಪಿಸಿಸಿ ವಕ್ತಾರ ಎಂ.ಲಕ್ಷಣ್ ಮಾತನಾಡಿ, 'ಕೇಂದ್ರ ಬಿಜೆಪಿ ಸರಕಾರ ಪ್ರಮುಖವಾಗಿ ಪರಿಶಿಷ್ಟರು, ಮುಸ್ಲಿಂ, ಕ್ರಿಶ್ಚಿಯನ್‌ರನ್ನೇ ಗುರಿ ಮಾಡಿ ಮತದಾರರ ಪಟ್ಟಿಯಿಂದ ಕೆಲ ಮತದಾರರನ್ನು ಕೈಬಿಡುತ್ತಿದ್ದು, ಈ ಬಗ್ಗೆ ಕಾಂಗ್ರೆಸ್ ಬಿಎಲ್‌ಎಗಳು ಎಚ್ಚರವಹಿಸಬೇಕು. ಜಿಲ್ಲಾಧಿಕಾರಿಗಳು ಮ್ಯಾಪಿಂಗ್ ಇನ್ನೂ ಸಮಯವಿದೆ ಎನ್ನುತ್ತಿದ್ದಾರೆ. ಆದರೆ, ಈಗಾಗಲೇ ಮತದಾರರ ಪಟ್ಟಿ ಮ್ಯಾಪಿಂಗ್ ಕಾರ್ಯ ಮುಗಿದಿದೆ. ಮ್ಯಾಪಿಂಗ್ ಕಾರ್ಯದಲ್ಲಿ ಸಮರ್ಪಕ ದಾಖಲೆ ನೀಡಲು ಮಾತ್ರ ಸಮಯವಿದೆ. ಎಸ್ ಐ ಆರ್ ಗೆ 12 ದಾಖಲಾತಿ ನೀಡಬೇಕು ಎಂದು ಆದೇಶ ಮಾಡಿದ್ದಾರೆ ಇದು ಅಗತ್ಯವಿತ್ತೆ ಎಂದು ಪ್ರಶ್ನಿಸಿ ಜಿಲ್ಲಾಡಳಿತ ಕೂಡಲೇ ಮತದಾರರ ಪಟ್ಟಿಯಿಂದ ಕೈ ಬಿಟ್ಟಿರುವ ಮತದಾರರ ಪಟ್ಟಿಯನ್ನು ಕೂಡಲೇ ಬಿಡುಗಡೆ ಮಾಡಬೇಕೆಂದು ಆಗ್ರಹಿಸಿ, 10 ವರ್ಷ ಬಿಜೆಪಿಯವರ ಕೈಗೆ ಕೊಟ್ಟಲ್ಲಿ ಬದುಕಿರುವವರನ್ನೇ ಸಾಯಿಸಿಬಿಡುತ್ತಾರೆ.

ನಾನು ನೇರವಾಗಿ ನೀಡುವ ಹೇಳಿಕೆಗಳಿಗೆ ಬಿಜೆಪಿಯ ಅಂದ ಭಕ್ತರು ನನ್ನನ್ನು ಕೆಟ್ಟದಾಗಿ ಬಿಂಬಿಸಿ ಬೈಯುತ್ತಾರೆ. ಇದಕ್ಕೆ ನಾನು ಕೇರ್ ಮಾಡುವವನಲ್ಲ.

ಮಾಜಿ ಶಾಸಕರಾದ ಎಚ್ ಪಿ ಮಂಜುನಾಥ್ ರವರು ಕಳೆದ ವಿಧಾನ ಸಭಾ ಚುನಾವಣೆಯಲ್ಲಿ ಸೋತಿದ್ದರೂ ಸಿದ್ದಾರಾಮಯ್ಯನವರಲ್ಲಿ ಮನವಿ ಮಾಡಿಕೊಂಡು ತಾಲೂಕಿನ ಅಭಿವೃದ್ಧಿಗೆ ಶ್ರಮಿಸುತ್ತಿದ್ದರಲ್ಲದೆ ವೈಯಕ್ತಿಕವಾಗಿಯೂ ಸಹಾಯಸ್ತ ನೀಡುತ್ತಿದ್ದಾರೆ. ಮೈಸೂರು-ಕೊಡಗು ಲೋಕಸಭಾ ಚುನಾವಣೆಯಲ್ಲಿ ಮಹಾರಾಜರು ಬರುತ್ತಾರೆಂದು ನನ್ನನ್ನೂ ಸೋಲಿಸಿದರು.

ಕೇಂದ್ರ ಸರ್ಕಾರ ದೇಶದಲ್ಲಿ ಎಲ್ಲಾ ಅಗತ್ಯ ವಸ್ತುಗಳಗೆ ಬೆಲೆ ಏರಿಕೆ ಮಾಡಿದ್ದಾರೆ. ಈ ಬಗ್ಗೆ ಪ್ರಶ್ನಿಸಿದರೆ ಯುದ್ಧ ನಡೀತಿದೆ ಸಾಬೂಬು ಹೇಳುತ್ತಾರೆ. ತಂಬಾಕು ಬೆಲೆ ಕುಸಿತ ಗೊಂಡಿದ್ದು, ಇಲ್ಲಿನ ಸ್ಥಳೀಯ ಶಾಸಕರು ಕೇಂದ್ರ ಸಚಿವರೊಂದಿಗೆ ಫೋಟೋ ತೆಗೆಸಿಕೊಂಡು ಪತ್ರಿಕೆಗಳಲ್ಲಿ ದೊಡ್ಡದಾಗಿ ಸುದ್ದಿ ಮಾಡಿಸಿಕೊಂಡು ರೈತರ ಹಿತಕ್ಕ ಪಡುತ್ತೇನೆಂದು ಹೇಳಿಕೊಂಡವರು ತಂಬಾಕು ಬೆಳೆಗಾರರ ಸ್ಥಿತಿಯನ್ನು ಅದೋಗತಿಗೆ ತಂದಿಟ್ಟಿದ್ದಾರೆ ಎಂದು ಎಂದು ಕೆಂಡ ಕಾರಿದರು. ಸಭೆಯಲ್ಲಿ ಕಾಂಗ್ರೆಸ್ ಕಾರ್ಯಾಧ್ಯಕ್ಷಗದ್ದಿಗೆ ದೇವರಾಜ್, ಬ್ಲಾಕ್ ಅಧ್ಯಕ್ಷರಾದ ಪ್ರೇಮ್‌ಕುಮಾರ್, ಬಾಲಸುಂದರ್, ಹುಡಾ ಅಧ್ಯಕ್ಷ ಎಚ್.ಪಿ. ಅಮರನಾಥ್ ಇತರರಿದ್ದರು.

# ಬಡಾವಣೆ ಸಮಸ್ಯೆ ಸರಿಪಡಿಸಲು ನಿವಾಸಿಗಳ ಆಗ್ರಹ





• **ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್**

ಪಟ್ಟಣದಲ್ಲಿನ ಬೀರಪ್ಪಗಡ್ಡ ಬಡಾವಣೆಯಲ್ಲಿ ಕುಡಿಯುವ ನೀರಿನ ಸಮಸ್ಯೆ, ಸಮರ್ಪಕ ಚರಂಡಿ ವ್ಯವಸ್ಥೆಯ ಕೊರತೆ ಹಾಗೂ ಅಂಗನವಾಡಿ ಕೇಂದ್ರದ ಮುಂಭಾಗದ ಅಸ್ವಚ್ಛತೆ ವಿರುದ್ಧ ಸ್ಥಳೀಯರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಪಟ್ಟಣದ ವಾರ್ಡ್ ಸಂಖ್ಯೆ 13ರ ಬೀರಪ್ಪಗಡ್ಡ ಬಡಾವಣೆಯಲ್ಲಿ ಸಮರ್ಪಕವಾಗಿ ಕುಡಿಯುವ ನೀರು ಸರಬರಾಜಾಗುತ್ತಿಲ್ಲ. ಚರಂಡಿ ನೀರು ರಸ್ತೆಗಳಿಗೆ ಹರಿದು ದುರ್ವಾಸನೆ ಬೀರುತ್ತಿದ್ದು, ಸಾರ್ವಜನಿಕರು ಸಂಕಷ್ಟ ಅನುಭವಿಸುತ್ತಿದ್ದಾರೆ. ವಿಶೇಷವಾಗಿ ಅಂಗನವಾಡಿ ಕೇಂದ್ರದ ಮುಂಭಾಗದಲ್ಲಿರುವ ಅಸ್ವಚ್ಛ ಪರಿಸ್ಥಿತಿ ಮಕ್ಕಳ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಆತಂಕವನ್ನು ಉಂಟುಮಾಡಿದೆ ಎಂದು ಬಡಾವಣೆ ನಿವಾಸಿ ರವಿಕುಮಾರ್ ಆರೋಪಿಸಿದ್ದಾರೆ.

ಈ ಸಂದರ್ಭದಲ್ಲಿ ರವಿ ಕುಮಾರ್ ಪಾಪನೋಲ್, ನವೀನ್ ಮಿನಿಂಟಿ, ಮೋಹನ್ ಮುಕ್ಕಿಡಿ, ತಿರುಪತಿ ಮುಕ್ಕಿಡಿ, ಅನಿಲ್ ಮುಕ್ಕಿಡಿ, ಶ್ರೀನಿವಾಸ್ ಮ್ಯಾತರಿ, ಪ್ರವೀಣ್ ಪಾಪನೋಲ್ ಹಾಗೂ ಅಮರೇಶ್ ಬಸಪೋಲ್ ಮಾತನಾಡಿ, ನೀರಿನ ಘಟಕದ ಮೇಲ್ವಿಚಾರಕರನ್ನು ತಕ್ಷಣ ಅಮಾನತು ಮಾಡಬೇಕು ಎಂದು ಆಗ್ರಹಿಸಿದರು.

ಈ ಕುರಿತು ಮಾತನಾಡಿದ ರವಿ ಕುಮಾರ್ ಪಾಪನೋಲ್ ಅವರು, "ಬಡಾವಣೆಯಲ್ಲಿ ಸಮರ್ಪಕ ಕುಡಿಯುವ ನೀರು ಪೂರೈಕೆ ಆಗುತ್ತಿಲ್ಲ. ಬೋರವೆಲ್ ಕಳೆದ ಎರಡು ತಿಂಗಳಿಂದ ಪದೇ ಪದೇ ಹಾಳಾಗುತ್ತಿದ್ದು, ತಾತ್ಕಾಲಿಕ ದುರಸ್ತಿಯಿಂದ ಸಮಸ್ಯೆ ಬಗೆಹರಿಯುತ್ತಿಲ್ಲ. ಈ ಬಗ್ಗೆ ಹಲವು ಬಾರಿ ಪುರಸಭೆ ಮುಖ್ಯಾಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ. ಸಾರ್ವಜನಿಕರ ಆರೋಗ್ಯದ ವಿಚಾರದಲ್ಲಿ ನಿರ್ಲಕ್ಷ್ಯ ತೋರಲಾಗುತ್ತಿದೆ" ಎಂದು ಆರೋಪಿಸಿದರು.

ನವೀನ್ ಮಿನಿಂಟಿ ಅವರು, "ಅಂಗನವಾಡಿ ಕೇಂದ್ರದ ಮುಂಭಾಗದಲ್ಲೇ ಕಸದ ರಾಶಿ ಹಾಗೂ ಚರಂಡಿ ನೀರು ನಿಂತಿದ್ದು, ಮಕ್ಕಳು ಮತ್ತು ಸಾರ್ವಜನಿಕರಿಗೆ ತೀವ್ರ ತೊಂದರೆ ಉಂಟಾಗಿದೆ. ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಕ್ರಮ ಕೈಗೊಳ್ಳಬೇಕು" ಎಂದು ಒತ್ತಾಯಿಸಿದರು.

ಮೋಹನ್ ಮುಕ್ಕಿಡಿ ಅವರು, "ಸಮಸ್ಯೆಗೆ ಶಾಶ್ವತ ಪರಿಹಾರ ಸಿಗದಿದ್ದರೆ ಮುಂದಿನ ದಿನಗಳಲ್ಲಿ ಹೋರಾಟ ತೀವ್ರಗೊಳಿಸಲಾಗುವುದು" ಎಂದು ಎಚ್ಚರಿಕೆ ನೀಡಿ ತಕ್ಷಣಕ್ಕೆ ಸ್ವಚ್ಛತೆ ಕಾರ್ಯ ಕೈಗೊಂಡು, ಸಮರ್ಪಕ ಕುಡಿಯುವ ನೀರು ಹಾಗೂ ಶಾಶ್ವತ ಚರಂಡಿ ವ್ಯವಸ್ಥೆ ಕಲ್ಪಿಸಬೇಕು ಎಂದು ಆಗ್ರಹಿಸಿದ್ದಾರೆ.

## ಸ್ವದೇಶದ ಜನರಿಗೂ ಬಣ್ಣಬಣ್ಣದ ಚಾಕೊಲೇಟ್ ನೀಡುತ್ತಿರುವ ಪ್ರಧಾನಿ



**ಕಲಬುರಗಿ:** ನರೇಂದ್ರ ಮೋದಿಯವರು ಚಾಕೊಲೇಟ್ ನೀಡುತ್ತಿರುವುದು ವಿದೇಶಿ ನಾಯಕರಿಗೆ ಮಾತ್ರವಲ್ಲ, ಕಳೆದ 13 ವರ್ಷಗಳಿಂದ ಭಾರತೀಯರಿಗೂ ಬಗೆಬಗೆಯ, ಬಣ್ಣಬಣ್ಣದ ಚಾಕ್ಲೇಟ್ ನೀಡಿದ್ದಾರೆ ಮತ್ತು ನೀಡುತ್ತಲೇ ಇದ್ದಾರೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಖಡಕ್ ಟಾಂಗ್ ನೀಡಿದ್ದಾರೆ.

ಮಕ್ಕಳು ಅಳುವಾಗ ಹೇಗೆ ಚಾಕ್ಲೇಟ್ ನೀಡಿ ಸಮಾಧಾನಿಸುತ್ತಾರೋ ಹಾಗೆಯೇ, ದೇಶದ ಜನ ಸಮಸ್ಯೆಗಳಲ್ಲಿರುವಾಗ ಘೋಷಣೆಗಳೆಂಬ ಚಾಕ್ಲೇಟ್ ನೀಡಿ ಸಮಾಧಾನಿಸುವ ಕೆಲಸ ಮಾಡಿದ್ದಾರೆ! ಭಾರತೀಯರು ಈ ಕನಸೆನ್ನುವ ಚಾಕ್ಲೇಟ್ ಗಳನ್ನು ಸವಿಯುತ್ತಾ, ಸಮಾಧಾನಗೊಳ್ಳಬೇಕು!

ಗುಜರಾತ್ ಮಾಡೆಲ್, ಅಚ್ಛೇದಿನ್, ವಿಶ್ವಗುರು, ಮೇಕ್ ಇನ್ ಇಂಡಿಯಾ, ಖೇಲೋ ಇಂಡಿಯಾ, ಅಮೃತ್ ಕಾಲ್, ವಿಕಸಿತ್ ಭಾರತ್, ಸ್ಟಾರ್ಟ್ ಅಪ್ ಇಂಡಿಯಾ, ಸ್ಕಿಲ್ ಇಂಡಿಯಾ, ಆತ್ಮ ನಿರ್ಭರ ಭಾರತ್, ಬೇಟಿ ಬಚಾವೋ, ಬೇಟಿ ಪಡಾವೋ, ಖೇಲೋ ಇಂಡಿಯಾ, 20 ಲಕ್ಷ ಕೋಟಿ ಪ್ಯಾಕೇಜ್–ಹೀಗೆ, ಮೋದಿಯವರು ಭಾರತೀಯರಿಗೆ ಕೊಟ್ಟಿರುವ ಘೋಷಣೆಗಳೆಂಬ ಚಾಕ್ಲೇಟ್ ಹಲವಾರು! ಪ್ರತಿ ಚುನಾವಣೆಗೊಂದು ಘೋಷಣೆ, ಪ್ರತಿ ವರ್ಷಕ್ಕೊಂದು ಘೋಷಣೆ, ಪ್ರತಿ ವೈಫಲ್ಯಕ್ಕೊಂದು ಘೋಷಣೆ, ಇವುಗಳು ವಾಸ್ತವವಾಗಿದ್ದು ಮಾತ್ರ ಸೊನ್ನೆ. ಭಾರತೀಯರಿಗೆ ಹುಸಿ ಸಂತೋಷವನ್ನು ನೀಡುವ ಈ ಚಾಕ್ಲೇಟ್ ಗಳು ಈಗ ಸಲಹೆಗಳೆಂಬ ಹೊಸ ರೂಪಕ್ಕೆ ತಿರುಗಿವೆ.

ಅಡುಗೆಗೆ ಎಣ್ಣೆ ಬಳಸಬೇಡಿ, ಪೆಟ್ರೋಲ್ ಬಳಕೆ ಕಡಿಮೆಗೊಳಿಸಿ, ಗ್ಯಾಸ್ ಬದಲು ಗಟರ್ ಗ್ಯಾಸ್ ಬಳಸಿ, ವರ್ಕ್ ಫ್ರಮ್ ಹೋಮ್ ಮಾಡಿ, ಬ್ಯುಟಿ ಪಾರ್ಲರ್ ಗೆ ಹೋಗಬೇಡಿ, ರಾಸಾಯನಿಕ ಗೊಬ್ಬರ ಬಳಸದೆ ಕೃಷಿ ಮಾಡಿ, ಇತ್ಯಾದಿ.

ಸಿಹಿ ಚಾಕ್ಲೇಟ್ ನೀಡುತ್ತಿದ್ದ ಮೋದಿಯವರು ಈಗ ಭಾರತೀಯರಿಗೆ ಕಹಿ ಚಾಕ್ಲೇಟ್ ನೀಡಲು ಶುರು ಮಾಡಿದ್ದಾರೆಂದರೆ, ಪರಿಸ್ಥಿತಿ ಕೈ ಮೀರಿ ಹೋಗಿದೆ ಎಂದೇ ಅರ್ಥ ಎಂದು ಟೀಕಿಸಿದ್ದಾರೆ.


## ಹುಟ್ಟುಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸಿಕೊಂಡ ಎಂಎಫ್‌ಸಿ ನಾರಾಯಣಸ್ವಾಮಿ



**ಚಿಕ್ಕಬಳ್ಳಾಪುರ:** ತಾಲೂಕಿನ ದೊಡ್ಡಮರಳಿ ಗ್ರಾಮದ ರೈತ ಕುಟುಂಬದಲ್ಲಿ ಜನಿಸಿ, ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುವ ಮೂಲಕ ಸರಳತೆ ಮತ್ತು ಸಮಾಜಸೇವೆಯಿಂದ ಹೆಸರುವಾಸಿಯಾಗಿರುವ ಟಿಎಪಿಸಿಎಂಎಸ್ ನಿರ್ದೇಶಕ ಎಂಎಫ್‌ಸಿ ನಾರಾಯಣಸ್ವಾಮಿ ಅವರು ತಮ್ಮ 61ನೇ ಹುಟ್ಟುಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸಿಕೊಂಡರು.ಹುಟ್ಟುಹಬ್ಬದ ಅಂಗವಾಗಿ ಅವರು ತಾಲೂಕಿನ ವಿವಿಧ ದೇವಾಲಯಗಳಲ್ಲಿ ವಿಶೇಷ ಪೂಜೆ ಸಲ್ಲಿಸಿದರು.ಬಳಿಕ ತಾಲೂಕಿನ ಸುಲ್ತಾನ್‌ಪೇಟೆಯಲ್ಲಿರುವ ಶ್ರೀ ಸಾಯಿ ದ್ವಾರಕಮಾಯಿ ವೃದ್ಧಾಶ್ರಮಕ್ಕೆ ಭೇಟಿ ನೀಡಿ, ಅಲ್ಲಿನ ವೃದ್ಧರಿಗೆ ಊಟದ ವ್ಯವಸ್ಥೆ ಮಾಡಿಸುವ ಜೊತೆಗೆ ಹಣ್ಣು–ಹಂಪಲು ವಿತರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಎಂ ಎಫ್ ಸಿ ನಾರಾಯಣಸ್ವಾಮಿ,ಹಿಂದಿನಿಂದಲೂ ಹುಟ್ಟುಹಬ್ಬವನ್ನು ವಿಜೃಂಭಣೆಯಿಂದ ಆಚರಿಸುವುದಿಲ್ಲ.ದೇವಸ್ಥಾನಗಳಲ್ಲಿ ಪೂಜೆ ಸಲ್ಲಿಸಿ,ವೃದ್ಧಾಶ್ರಮಗಳಲ್ಲಿ ವೃದ್ಧರೊಂದಿಗೆ ಸಮಯ ಕಳೆಯುವುದು ನನ್ನ ರೂಢಿಯಾಗಿದೆ. ಅದರಲ್ಲಿ ನನಗೆ ಅಪಾರ ತೃಪ್ತಿ ಸಿಗುತ್ತದೆ.ಸರಳತೆಯಲ್ಲಿ ದೊರೆಯುವ ಸಂತೋಷವೇ ವಿಭಿನ್ನ.ವೃದ್ಧರೊಂದಿಗೆ ಕಳೆಯುವ ಸಮಯ ಜೀವನಕ್ಕೆ ಸಾಕಷ್ಟು ಪಾಠಗಳನ್ನು ಕಲಿಸುತ್ತದೆ. ಅವರ ಆಶೀರ್ವಾದ ಜೀವನದಲ್ಲಿ ಅತ್ಯಂತ ಮುಖ್ಯ ಆದ್ದರಿಂದಲೇ ಹುಟ್ಟುಹಬ್ಬದಂದು ಅವರ ಆಶೀರ್ವಾದ ಪಡೆಯುತ್ತಿದ್ದೇನೆ ಎಂದು ಹೇಳಿದರು. ಇದಲ್ಲದೆ,ನಾರಾಯಣಸ್ವಾಮಿ ಅವರು ತಮ್ಮ ತಂದೆ–ತಾಯಿಯ ಸ್ಮರಣಾರ್ಥವಾಗಿ ಇದೇ ವೃದ್ಧಾಶ್ರಮಕ್ಕೆ ಒಂದು ಕೊಠಡಿಯನ್ನು ನಿರ್ಮಿಸಿ ಕೊಟ್ಟಿದ್ದು,ಅವರ ಈ ಸಮಾಜಮುಖಿ ಕಾರ್ಯಕ್ಕೆ ಸಾರ್ವಜನಿಕ ವಲಯದಲ್ಲಿ ಮೆಚ್ಚುಗೆ ವ್ಯಕ್ತವಾಗಿದೆ.

## ಕೆ.ವಿ.ಪ್ರಭಾಕರ್ ಅವರೊಂದಿಗೆ ಮಾಧ್ಯಮ–ಸಂವಾದ

**ಬೆಂಗಳೂರು:** ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾಗಿ ಯಶಸ್ವಿಯಾಗಿ ಮೂರು ವರ್ಷ ಪೂರೈಸುತ್ತಿರುವ ಕೆ.ವಿ.ಪ್ರಭಾಕರ್ ಅವರೊಂದಿಗೆ




ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ವತಿಯಿಂದ ಮಾಧ್ಯಮ–ಸಂವಾದ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಈ ಕಾರ್ಯಕ್ರಮವು ಮೇ 22, 2026ರ ಶುಕ್ರವಾರ ಬೆಳಿಗ್ಗೆ 11 ಗಂಟೆಗೆ ಬೆಂಗಳೂರಿನ ಕೆಜಿ ರಸ್ತೆಯ ಕಂದಾಯ ಭವನದ 3ನೇ ಮಹಡಿಯಲ್ಲಿರುವ ಕೆಯುಡಬ್ಲ್ಯೂಜೆ ಸಭಾಂಗಣದಲ್ಲಿ ನಡೆಯಲಿದೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ವಹಿಸಲಿದ್ದು, ಕರ್ನಾಟಕ ಮಾಧ್ಯಮ ಅಕಾಡೆಮಿಯ ಅಧ್ಯಕ್ಷರಾದ ಆಯೇಶಖಾನಂ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾಗಿ ಮೂರು ವರ್ಷಗಳ ಅವಧಿಯಲ್ಲಿ ಕೈಗೊಂಡ ಕಾರ್ಯಚಟುವಟಿಕೆಗಳು, ಮಾಧ್ಯಮ ಕ್ಷೇತ್ರದ ಬೆಳವಣಿಗೆಗಳು ಹಾಗೂ ಸಮಕಾಲೀನ ವಿಚಾರಗಳ ಕುರಿತು ಈ ಸಂವಾದದಲ್ಲಿ ಚರ್ಚೆ ನಡೆಯಲಿದೆ. ರಾಜ್ಯದ ಪತ್ರಕರ್ತರು, ಮಾಧ್ಯಮ ಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಎರಡು ದಿನಗಳ ವಿಜ್ಞಾನ ಪ್ರದರ್ಶನ ಮೇಳಕ್ಕೆ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ವಿಶ್ವವಿದ್ಯಾಲಯಗಳು ತಂತ್ರಜ್ಞಾನ ಆಧಾರಿತ ಶಿಕ್ಷಣ ನೀಡಲು ಮುಂದಾಗಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.

ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಪ್ರೊ.ಸಿದ್ದು.ಪಿ ಆಲಗೂರ ಸಭಾಂಗಣದಲ್ಲಿ ಆಯೋಜಿಸಿರುವ ಎರಡು ದಿನಗಳ ವಿಜ್ಞಾನ ಪ್ರದರ್ಶನ–2026 ಮೇಳಕ್ಕೆ ಗುರುವಾರ ಚಾಲನೆ ನೀಡಿ ಅವರು ಮಾತನಾಡಿದರು.

ಇಂದಿನ ಎಐ ಯುಗದಲ್ಲಿ ವಿಜ್ಞಾನವನ್ನು ಸ್ಥಳೀಯ ಭಾಷೆಯಲ್ಲಿ ಜನಸಾಮಾನ್ಯರಿಗೆ ತಲುಪುವ ಹಾಗೆ ರೂಪಾಂತರಗೊಳಿಸುವುದು ಅಗತ್ಯವಿದೆ. ಎಲ್ಲ ಕ್ಷೇತ್ರಗಳಲ್ಲೂ ತಂತ್ರಜ್ಞಾನ ಅವಶ್ಯಕವಾಗಿದೆ. ವಿವಿಗಳು ವಿನೂತನ ಮಾದರಿಯ ಗ್ರಂಥಾಲಯಗಳನ್ನು ಹೊಂದಬೇಕು. ಸಾಮಾನ್ಯ ವಿಜ್ಞಾನದ ಮಹತ್ವ ಕುರಿತು ಜನಸಾಮಾನ್ಯರಿಗೆ ಜ್ಞಾನ ಲಭಿಸಲು ದಾರಿದೀಪವಾಗಬೇಕು ಎಂದರು.

ತಂತ್ರಜ್ಞಾನ ಬದಲಾದಂತೆ ಪ್ರಾದೇಶಿಕ ವಾತಾವರಣವು ಬದಲಾಗುತ್ತದೆ ಎಂಬುದಕ್ಕೆ ನಮ್ಮ ಬಳ್ಳಾರಿಯೇ ಸ್ಪಷ್ಟ ನಿದರ್ಶನವಾಗಿದ್ದು, ಬಳ್ಳಾರಿಯು ಹಸಿರೀಕರಣಗೊಂಡಿರುವುದು ಇದಕ್ಕೆ ಸಾಕ್ಷಿಯಾಗಿದೆ. ವಿಶ್ವವಿದ್ಯಾಲಯಕ್ಕೆ ಅವಶ್ಯವಿರುವ ಗ್ರಂಥಾಲಯ ಹಾಗೂ ಇನ್ನಿತರ ಮೂಲ ಸೌಲಭ್ಯಗಳನ್ನು ಒದಗಿಸಲು ವಿಶೇಷ ಆಸಕ್ತಿ ವಹಿಸುವುದಾಗಿ ತಿಳಿಸಿದರು.



ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ವಿಜ್ಞಾನವು ಶೋಧನೆ ಮತ್ತು ಕ್ರಿಯಾತ್ಮಕ ವಿಚಾರಗಳಿಗೆ ವೇದಿಕೆಯಾಗಿದೆ. ವಿಜ್ಞಾನ ಬೆಳೆದಷ್ಟು ಸವಾಲುಗಳು ಸಾಕಷ್ಟು ಉದ್ಭವಿಸುತ್ತವೆ. ರಾಮನ್ ಪರಿಣಾಮವನ್ನು ಹಲವಾರು ಕ್ಷೇತ್ರಗಳಲ್ಲಿ ಪರಿಣಾಮಕಾರಿಯಾಗಿ ಬಳಸುತ್ತಿದ್ದೇವೆ. ಈ ನಿಟ್ಟಿನಲ್ಲಿ ಸಂಶೋಧನೆಗಳಲ್ಲಿ ಎಲ್ಲರೂ ಹೆಚ್ಚಾಗಿ ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಮುಖ್ಯ ಭಾಷಣಕಾರರಾಗಿ ಮೈಸೂರು ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಎನ್.ಕೆ ಲೋಕನಾಥ್ ಅವರು ಮಾತನಾಡಿ, ಇಂದಿನ ದಿನಮಾನಗಳಲ್ಲಿ ಸ್ಮಾರ್ಟ್‌ಫೋನ್ ಗೀಳು ಬಿಟ್ಟು 'ಸ್ಮಾರ್ಟ್' (ಸ್ಪೆಸಿಫಿಕ್, ಮೆಸರೇಬಲ್, ಅಚಿವೇಬಲ್, ರಿಲೆವೆಂಟ್, ಟೈಮ್‌ಬಾಂಡ್) ಆಗಿ ಕಾರ್ಯನಿರ್ವಹಿಸಿದಲ್ಲಿ ಎಲ್ಲ ಕ್ಷೇತ್ರದ ವಿದ್ಯಾರ್ಥಿಗಳ ಜ್ಞಾನಾಭಿವೃದ್ಧಿಯಾಗುತ್ತದೆ ಎಂದು ಹೇಳಿದರು.

ವಿಜ್ಞಾನವು ವಿಶ್ವದಾದ್ಯಂತ ವ್ಯಾಪಕವಾಗಿ ಹರಡಿದೆ. ವಿದ್ಯಾರ್ಥಿಗಳು ತಮ್ಮಲ್ಲಿರುವ ನವೀನ ವಿಚಾರಧಾರೆಗಳನ್ನು ತಮ್ಮ ಸಂಶೋಧನೆಗಳಾಗಿ ಮಾರ್ಪಡಿಸಬೇಕು. ಈ ಮಾದರಿಯ ಮೇಳವು ವಿದ್ಯಾರ್ಥಿ ಹಾಗೂ ಶಿಕ್ಷಕರ ವೈಜ್ಞಾನಿಕ ಚಟುವಟಿಕೆಗಳನ್ನು ಅನಾವರಣಗೊಳಿಸುವ ಮೂಲಕ ಅವರಲ್ಲಿ ಹೊಸ ಆಸಕ್ತಿ, ಅನ್ವೇಷಣೆ ಹಾಗೂ ವಿಚಾರಗಳು ಆಳವಾಗಿ ಬೇರೂರುವಂತೆ ಮಾಡುತ್ತವೆ. ನೂತನ ಅನ್ವೇಷಣೆ, ಸಕಾರಾತ್ಮಕ ಚಿಂತನೆ ಮತ್ತು ಧನಾತ್ಮಕ ವಿಚಾರಗಳಿಗೆ ಮಾತ್ರ ವಿದ್ಯಾರ್ಥಿಗಳು ಗಮನ ಹರಿಸಬೇಕು ಎಂದು ಕಿವಿಮಾತು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಎಂ.ಮುನಿರಾಜು ಅವರು ಮಾತನಾಡಿ, ವೈಜ್ಞಾನಿಕ ಮೇಳಗಳು ವಿದ್ಯಾರ್ಥಿಗಳಲ್ಲಿ ಕಲಿಕಾ ವಾತಾವರಣವನ್ನು ಉತ್ತೇಜಿಸುತ್ತವೆ. ಸಂಶೋಧಕರುಗಳು ಹೊಸ ಅನ್ವೇಷಣೆ ಹಾಗೂ ಜನಪರ ಅಭಿವೃದ್ಧಿ ಚಿಂತನೆಯುಕ್ತ ವೈಜ್ಞಾನಿಕ ವಿಚಾರಗಳನ್ನು ಹೆಚ್ಚಾಗಿ ಹೊರತರಬೇಕು ಎಂದರು.

ಕಾರ್ಯಕ್ರಮದಲ್ಲಿ ಅನ್ವಯಿಕ ವಿಜ್ಞಾನ ನಿಕಾಯದ ಡೀನ್ ಪ್ರೊ.ಹನುಮೇಶ ವೈದ್ಯ ಅವರ ಮಾರ್ಗದರ್ಶನದಲ್ಲಿ ಕಂಪ್ಯೂಟರ್ ಸೈನ್ಸ್ ವಿಭಾಗದ ವಿದ್ಯಾರ್ಥಿಗಳಿಂದ ನಿರ್ಮಿತವಾದ ವೆಬ್‌ಸೈಟ್ ಮಾದರಿ (ಎಐ ಇಂಟಿಗ್ರೇಟೆಡ್ ಡೈನಾಮಿಕ ಮಾಡೆಲ್), ಬೆಸ್ಟ್ ಆಫ್ ಬಳ್ಳಾರಿ ಹಾಗೂ ಆಸ್ಕ ವಿಎಸ್‌ಕೆಯು (ವಿಎಸ್‌ಕೆಯು ಚಾಟ್ ಜಿಪಿಟಿ) ಗಳನ್ನು ಗಣ್ಯರು ಅನಾವರಣಗೊಳಿಸಿದರು.

ವಿವಿಯ ಮೌಲ್ಯಮಾಪನ ಕುಲಸಚಿವ ಪ್ರೊ. ಎನ್.ಎಂ ಸಾಲಿ, ವಿತ್ತಾಧಿಕಾರಿ ಸ್ಫೂರ್ತಿ ಕೆ.ಜಿ., ಶುದ್ಧ ವಿಜ್ಞಾನ ನಿಕಾಯದ ಡೀನ್ ಪ್ರೊ.ಉದಯ್ ಕುಮಾರ್ ಖಿಡ್ಕೆ, ಕಾರ್ಯಕ್ರಮದ ಸಹ ಸಂಚಾಲಕ ಡಾ.ಪಿ.ಶರತ್ ಕುಮಾರ ವೇದಿಕೆಯಲ್ಲಿದ್ದರು. ವಿವಿಧ ನಿಕಾಯಗಳ ಡೀನರು, ಎಲ್ಲ ವಿಜ್ಞಾನ ವಿಭಾಗಗಳ ಮುಖ್ಯಸ್ಥರು, ಸಿಬ್ಬಂದಿ, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಶೋಧನಾ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.

## ಸಿಇಒ ಆಗಿ ರಾಹುಲ್ ಶರಣಪ್ಪ ಅಧಿಕಾರ ಸ್ವೀಕಾರ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜಿಲ್ಲಾ ಪಂಚಾಯತಿಯ ನೂತನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಕರ್ನಾಟಕ ವೃಂದದ 2019ನೇ ಬ್ಯಾಚಿನ್ ಐ.ಎ.ಎಸ್. ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ್ ಅವರು ಗುರುವಾರ ಅಧಿಕಾರ ಸ್ವೀಕರಿಸಿದರು.

ಜಿಲ್ಲಾ ಪಂಚಾಯತ್ ಸಿ.ಇ.ಓ ಹುದ್ದೆಯಲ್ಲಿ ಕಳೆದ ಎರಡು ವರ್ಷದಿಂದ ಕಾರ್ಯನಿರ್ವಹಿಸುತ್ತಿದ್ದ ಭಂವರ್ ಸಿಂಗ್ ಮೀನಾ ಅವರನ್ನು ಚಿಕ್ಕಮಂಗಳೂರು ಜಿಲ್ಲಾಧಿಕಾರಿಯಾಗಿ ವರ್ಗಾಯಿಸಿದ್ದರಿಂದ ತೆರವಾದ ಹುದ್ದೆಗೆ ಐ.ಟಿ–ಬಿ.ಟಿ ಇಲಾಖೆಯ ನಿರ್ದೇಶಕರಾಗಿ ಕಾರ್ಯನಿರ್ವಹಿಸುತ್ತಿದ್ದ ರಾಹುಲ್ ಎಸ್.ಸಂಕನುರ್ ಅವರನ್ನು ವರ್ಗಾಯಿಸಿ ಸರ್ಕಾರ ಇತ್ತೀಚೆಗೆ ಆದೇಶಿಸಲಾಗಿತ್ತು.



ಕರ್ನಾಟಕ ಮೂಲದವರಾದ ರಾಹುಲ್ ಎಸ್.ಸಂಕನೂರ್ ಅವರು ಬಿ.ಇ (ಇಲೆಕ್ಟ್ರಾನಿಕ್ಸ್ & ಕಮ್ಯೂನಿಕೇಶನ್ಸ್) ಪದವೀಧರರಾಗಿದ್ದಾರೆ. ಈ ಹಿಂದೆ ಇವರು ರಾಯಚೂರು ಜಿಲ್ಲೆಯ ಲಿಂಗಸೂರು ಸಹಾಯಕ ಆಯುಕ್ತರಾಗಿ, ಬಳ್ಳಾರಿ ಜಿಲ್ಲಾ ಪಂಚಾಯತ್ ಸಿ.ಇ.ಓ ಆಗಿ ಕಾರ್ಯನಿರ್ವಹಿಸಿದ ಅನುಭವ ಹೊಂದಿದ್ದಾರೆ.

## ಅವ್ವ ಪ್ರಶಸ್ತಿ ಪುರಸ್ಕೃತ ಡಾ.ಗೀತಾಕ್ಕಗೆ ಸನ್ಮಾನ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಅವ್ವ ಪ್ರಶಸ್ತಿಗೆ ಭಾಜನರಾದ ಶಾಂತಿವರ್ಧಕ ಶಿಕ್ಷಣ ಸಂಸ್ಥೆಯ ನಿರ್ದೇಶಕಿ ಡಾ.ಗೀತಾ ಈಶ್ವರ ಖಂಡ್ರೆ ಅವರನ್ನು ವಿವಿಧ ಸಂಘ ಸಂಸ್ಥೆಯ ಮಹಿಳೆಯರು ಸನ್ಮಾನಿಸಿ, ಅಭಿನಂದಿಸಿದರು.

ನಗರದ ಜಿಲ್ಲಾ ಉಸ್ತುವಾರಿ ಸಚಿವ ಖಂಡ್ರೆ ಅವರ ನಿವಾಸಕ್ಕೆ ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷೆ ರೇಖಾ ವಿಲಾಸ ಪಾಟೀಲ್ ನೇತೃತ್ವದಲ್ಲಿ ಮಹಿಳೆಯರು ಭೇಟಿ ನೀಡಿ ಡಾ.ಗೀತಾ ಈಶ್ವರ ಖಂಡ್ರೆ ಅವರನ್ನು ಸನ್ಮಾನಿಸಿದರು.

ಕಲಬುರಗಿಯ ಗೋದುತಾಯಿ ಪದವಿ ಮಹಾವಿದ್ಯಾಲಯ ವತಿಯಿಂದ ಕೊಡಮಾಡುವ 2025–26ನೇ ಸಾಲಿನ ಅವ್ವ ಪ್ರಶಸ್ತಿಗೆ ಡಾ.ಗೀತಾ ಈಶ್ವರ ಖಂಡ್ರೆ ಅವರು ಭಾಜನರಾಗಿ ಈಚೆಗೆ ಪ್ರಶಸ್ತಿ ಸ್ವೀಕರಿಸಿದರು.



ಈ ಸಂದರ್ಭದಲ್ಲಿ ಪ್ರಮುಖರಾದ ಸುನಿತಾ ಬುಳ್ಳಾ, ಸಂತೋಷಿ ಸಂಗಮೇಶ ಹುಣಜೆ, ಮಹಾದೇವಿ ತಪಸಾಳೆ, ಜಯಶ್ರೀ ಮಾನಕಾರೆ, ಶ್ರೀದೇವಿ ಬೈರಾಗೆ, ಗೀತಾ ಅಳ್ಳೆ, ಗೀತಾ ಪಾಟೀಲ್, ಪೂಜಾ ವೈರಾಗೆ ಇದ್ದರು.

# ದೇಶಕ್ಕಾಗಿ ಪ್ರಾಣತ್ಯಾಗ ಮಾಡಿದ ಧೀಮಂತ ನಾಯಕ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಭಾರತದ ಹೆಮ್ಮೆಯ ಮಾಜಿ ಪ್ರಧಾನಿ, ಭಾರತ ರತ್ನ ದಿವಂಗತ ರಾಜೀವ್ ಗಾಂಧಿ ಅವರ ಪುಣ್ಯಸ್ಮರಣೆ ಅಂಗವಾಗಿ ಜಿಲ್ಲಾ ಕಾಂಗ್ರೆಸ್ ಕಾರ್ಯಾಲಯದಲ್ಲಿ ಇಂದು ಶ್ರದ್ಧಾಂಜಲಿ ಹಾಗೂ ಸ್ಮರಣೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ರಾಜೀವ್ ಗಾಂಧಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು.

ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಕೊಪ್ಪಳ ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಜ್ಯೋತಿ ಎಂ. ಗೊಂಡಬಾಳ ಅವರು, ರಾಜೀವ್ ಗಾಂಧಿ ಅವರು ಭಾರತವನ್ನು 21ನೇ ಶತಮಾನದತ್ತ ಮುನ್ನಡೆಸಿದ ಆಧುನಿಕ ಭಾರತದ ಶಿಲ್ಪಿ ಎಂದು ಬಣ್ಣಿಸಿದರು.

"ಇಂದು ನಾವು ಬಳಸುತ್ತಿರುವ ಮೊಬೈಲ್, ಕಂಪ್ಯೂಟರ್ ಮತ್ತು ಇಂಟರ್ನೆಟ್ ಕ್ರಾಂತಿಗೆ ಅಡಿಪಾಯ ಹಾಕಿದವರು ರಾಜೀವ್ ಗಾಂಧಿ. ಅವರು ಅಂ–ದು ತಂದ ಮಾಹಿತಿ ತಂತ್ರಜ್ಞಾನ (ಐಟಿ) ಮತ್ತು ದೂರಸಂಪರ್ಕ ಕ್ರಾಂತಿಯಿಂದಾಗಿಯೇ ಇಂದು ಭಾರತ ಜಾಗತಿಕ ಮಟ್ಟದಲ್ಲಿ ತಂತ್ರಜ್ಞಾನದ ಪ್ರಮುಖ ಶಕ್ತಿಯಾಗಿ ಹೊರಹೊಮ್ಮಲು ಸಾಧ್ಯವಾಗಿದೆ," ಎಂದು ಅವರು ಹೆಮ್ಮೆಯಿಂದ ಸ್ಮರಿಸಿದರು.




ಮುಂದುವರಿದು ಮಾತನಾಡಿದ ಅವರು, ರಾಜೀವ್ ಗಾಂಧಿ ಅವರು ದೇಶದ ಯುವ ಸಮುದಾಯ ಮತ್ತು ಗ್ರಾಮೀಣ ಭಾಗದ ಜನರ ಸಬಲೀಕರಣಕ್ಕೆ ಕಾನೂನಾತ್ಮಕ ಶಕ್ತಿ ನೀಡಿದರು ಎಂಬುದನ್ನು ಸುದೀರ್ಘವಾಗಿ ವಿವರಿಸಿದರು.

ಪಂಚಾಯತ್ ರಾಜ್ ವ್ಯವಸ್ಥೆ: ಅಧಿಕಾರ ವಿಕೇಂದ್ರೀಕರಣದ ಮೂಲಕ ಹಳ್ಳಿಗಳಿಗೂ ಅಧಿಕಾರ ತಲುಪಬೇಕು ಎಂಬ ಉದ್ದೇಶದಿಂದ ಪಂಚಾಯತ್ ರಾಜ್ ಕಾಯ್ದೆಗೆ ಬಲ ತುಂಬಿದರು. ಇದರಿಂದಾಗಿ ಇಂದು ಗ್ರಾಮೀಣ ಭಾಗದ ಸಾಮಾನ್ಯ ಜನರಿಗೂ, ಪ್ರಮುಖವಾಗಿ ಮಹಿಳೆಯರಿಗೆ ರಾಜಕೀಯದಲ್ಲಿ ಸೂಕ್ತ ಪ್ರಾತಿನಿಧ್ಯ ಮತ್ತು ಮೀಸಲಾತಿ ಸಿಗುವಂತಾಗಿದೆ.

**ದೇಶಕ್ಕಾಗಿ ಪ್ರಾಣತ್ಯಾಗ ಮಾಡಿದ ಧೀಮಂತ ನಾಯಕ**

ದೇಶದ ಐಕ್ಯತೆ, ಸಮಗ್ರತೆ ಮತ್ತು ಶಾಂತಿಗಾಗಿ ರಾಜೀವ್ ಗಾಂಧಿ ಅವರು ತಮ್ಮ ಪ್ರಾಣವನ್ನೇ ಪಣಕ್ಕಿಟ್ಟರು. ಅವರ ತ್ಯಾಗ ಮತ್ತು ಬಲಿದಾನವನ್ನು ಕಾಂಗ್ರೆಸ್ ಪಕ್ಷ ಹಾಗೂ ಈ ದೇಶದ ಜನತೆ ಎಂದಿಗೂ ಮರೆಯಲು ಸಾಧ್ಯವಿಲ್ಲ. ಅವರ ತತ್ವ ಹಾಗೂ ಆದರ್ಶಗಳು ಇಂದಿನ ಯುವ ಪೀಳಿಗೆಗೆ ದಾರಿದೀಪವಾಗಿವೆ ಎಂದು ಜ್ಯೋತಿ ಎಂ. ಗೊಂಡಬಾಳ ಅವರು ಹೇಳಿದರು. ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಅಕ್ಬರ್ ಪಾಶಾ ಪಲ್ಟನ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಉಪಾಧ್ಯಕ್ಷ ಮಂಜುನಾಥ ಜಿ. ಗೊಂಡಬಾಳ, ಅಜ್ಜಯ್ಯಸ್ವಾಮಿ ಚನ್ನೊಡೆಯರಮಠ, ಬಸಯ್ಯಸ್ವಾಮಿ ಹಿರೇಮಠ, ವಿವಿಧ ಘಟಕಗಳ ಪದಾಧಿಕಾರಿಗಳಾದ ವಿಶಾಲಾಕ್ಷಿ ವಿರೇಶ ತಾವರಗೇರಾ, ಸುಮಂಗಲಾ ಎಸ್. ನಾಯಕ, ನಾಸೀರುದ್ದಿನ್, ಪದ್ಮಾ ಕಂಬಳಿ ಇತರರಿದ್ದರು.

# ಆಶೀರ್ವಾದ ಏಕೆ ಪಡೆದುಕೊಳ್ಳಬೇಕು?



**ಆಧ್ಯಾತ್ಮ–ವಿಜ್ಞಾನ**
● ಶರಣಬಸಯ್ಯ ಹಿರೇಮಠ
ಕೆಂಭಾವಿ

ಪ್ರಾಚೀನ ಕಾಲದಿಂದಲೂ ಗುರುಗಳನ್ನು ಅಥವಾ ಹಿರಿಯರನ್ನು ನೋಡಿದಾಕ್ಷಣ ಆಶೀರ್ವಾದ ಪಡೆದುಕೊಳ್ಳುವುದು ನಮ್ಮ ಸಂಪ್ರದಾಯವಾಗಿದೆ. ಇದು ಅತ್ಯಂತ ಹಳೆಯ ಪದ್ಧತಿಯಾದರೂ ಇಂದಿಗೂ ಅದನ್ನು ಶ್ರದ್ಧೆಯಿಂದ ಅನುಸರಿಸಿಕೊಂಡು ಬರಲಾಗುತ್ತಿದೆ. ಆಶೀರ್ವಾದ ಪಡೆದುಕೊಳ್ಳುವುದರ ಹಿಂದೆ ಧಾರ್ಮಿಕ ಮತ್ತು ವೈಜ್ಞಾನಿಕ ಪ್ರಯೋಜನಗಳು ಅಡಗಿವೆ.

ಆಶೀರ್ವಾದ ಮಾಡುವವರು ಶುದ್ಧ ಮನಸ್ಸಿನಿಂದ ತಮಗೆ ಇಷ್ಟವಾದ ದೇವರನ್ನು ಸ್ಮರಿಸಿ ಹರಸಬೇಕು. ನಾವು ಗೌರವಾನ್ವಿತ ವ್ಯಕ್ತಿಗಳ ಪಾದವನ್ನು ಮುಟ್ಟಿದಾಗ, ಅವರ ಕೈ ನಮ್ಮ ತಲೆಯನ್ನು ಮತ್ತು ನಮ್ಮ ಕೈ ಅವರ ಪಾದವನ್ನು ಸ್ಪರ್ಶಿಸುತ್ತದೆ. ಆಗ ಅವರಲ್ಲಿರುವ ಧನಾತ್ಮಕ ಶಕ್ತಿಯು ಆಶೀರ್ವಾದದ ರೂಪದಲ್ಲಿ ನಮ್ಮ ದೇಹವನ್ನು ಪ್ರವೇಶಿಸುತ್ತದೆ ಎನ್ನುವ ನಂಬಿಕೆಯಿದೆ. ಇದು ನಮ್ಮ ಆಧ್ಯಾತ್ಮಿಕ ಹಾಗೂ ಮಾನಸಿಕ ಬೆಳವಣಿಗೆಗೆ ಸಹಕಾರಿಯಾಗಿದೆ.

ದಿನನಿತ್ಯ ಗುರು–ಹಿರಿಯರ, ತಾಯಿ–ತಂದೆಯರ ಪಾದಸ್ಪರ್ಶ ಮಾಡಿ ಆಶೀರ್ವಾದ ಪಡೆದುಕೊಳ್ಳುವುದರಿಂದ ಆಯಸ್ಸು, ವಿದ್ಯಾ, ಕೀರ್ತಿ ಮತ್ತು ಶಕ್ತಿ ಪ್ರಾಪ್ತವಾಗುತ್ತದೆ ಎಂದು ಧರ್ಮಗ್ರಂಥಗಳಲ್ಲಿ ಹೇಳಲಾಗಿದೆ.

ವೈಜ್ಞಾನಿಕವಾಗಿ ಹೇಳುವುದಾದರೆ, ನ್ಯೂಟನ್



ನಿಯಮದ ಪ್ರಕಾರ ಪ್ರಪಂಚದ ಪ್ರತಿಯೊಂದು ವಸ್ತುವೂ ಗುರುತ್ವಾಕರ್ಷಣ ನಿಯಮಕ್ಕೆ ಬದ್ಧವಾಗಿದೆ. ಅದೇ ನಿಯಮ ನಮ್ಮ ದೇಹಕ್ಕೂ ಅನ್ವಯವಾಗುತ್ತದೆ. ಧನಾತ್ಮಕ ಶಕ್ತಿಯು ಉತ್ತರ ಧ್ರುವದಿಂದ ದೇಹಕ್ಕೆ ಪ್ರವೇಶಿಸುತ್ತದೆ. ಹಿರಿಯರ ಪಾದವನ್ನು ಸ್ಪರ್ಶಿಸಿದಾಗ ಆತನಲ್ಲಿದ್ದ ಧನಾತ್ಮಕ ಶಕ್ತಿಯು ನಮ್ಮಲ್ಲಿ ಪ್ರವಹಿಸುತ್ತದೆ. ಈ ಶಕ್ತಿಯನ್ನೇ ಧಾರ್ಮಿಕ ದೃಷ್ಟಿಕೋನದಲ್ಲಿ 'ಆಶೀರ್ವಾದ' ಎಂದು ಕರೆಯಬಹುದು.

ನಿತ್ಯ ಪಾದಸ್ಪರ್ಶವು ಒಂದು ದೈಹಿಕ ವ್ಯಾಯಾಮವೂ ಹೌದು. ತಲೆಯನ್ನು ಬಗ್ಗಿಸಿ ಪಾದಸ್ಪರ್ಶ ಮಾಡುವುದರಿಂದ ಮೆದುಳಿಗೆ ಉತ್ತಮ ರೀತಿಯಲ್ಲಿ ರಕ್ತಸಂಚಾರವಾಗುತ್ತದೆ. ಅಷ್ಟೇ ಅಲ್ಲದೆ, ಹೀಗೆ ತಲೆ ಬಗ್ಗಿಸಿ ನಮಸ್ಕಾರ ಮಾಡುವುದರಿಂದ ನಮ್ಮಲ್ಲಿನ ಅಹಂಕಾರ ನಾಶವಾಗಿ ವಿನಯಶೀಲತೆ ಮೂಡುತ್ತದೆ. ಪ್ರಾಣಶಕ್ತಿಗೆ ಅಗಾಧವಾದ ಸಾಮರ್ಥ್ಯವಿದೆ. ಇದು ನಮ್ಮ ಆಲೋಚನೆಗಳು ಮತ್ತು ಪ್ರಜ್ಞೆಯ ಗುಣಮಟ್ಟದ ಮೇಲೆ ಸಕಾರಾತ್ಮಕ ಪರಿಣಾಮ ಬೀರುತ್ತದೆ. ನಮ್ಮ ದೇಹ ಮತ್ತು ಮನಸ್ಸಿನಲ್ಲಿರುವ ನಕಾರಾತ್ಮಕ ಶಕ್ತಿಯನ್ನು ಕಡಿಮೆ ಮಾಡಿ ಸಕಾರಾತ್ಮಕತೆಯನ್ನು ಹೆಚ್ಚಿಸುತ್ತದೆ.

ಮಾನವನ ಅಂಗೈಯಲ್ಲಿ ಅದ್ಭುತವಾದ ವೈದ್ಯಕೀಯ ಗುಣವಿದೆ. ತಾಯಂದಿರು ಹೊಟ್ಟೆನೋವಿರುವ ಮಕ್ಕಳ ಹೊಟ್ಟೆಯ ಮೇಲೆ ಪ್ರೀತಿಯಿಂದ ಕೈಯಾಡಿಸಿದರೆ ಹೊಟ್ಟೆನೋವು ಕಡಿಮೆಯಾಗುತ್ತದೆ. ಅಳುವ ಮಕ್ಕಳ ತಲೆ ಸವರಿದರೆ ಅವು ಅಳುವುದನ್ನು ನಿಲ್ಲಿಸುತ್ತವೆ. ಹಳ್ಳಿಗಳಲ್ಲಿ ಸಹಜವಾಗಿ "ಅವರ ಕೈಗುಣ ಚನ್ನಾಗಿದೆ, ಅವರ ಕೈಯಿಂದ ಏನೇ ಕೊಟ್ಟರೂ ಕಾಯಿಲೆ ಗುಣವಾಗುತ್ತದೆ" ಎಂದು ಮಾತನಾಡುವುದನ್ನು ನಾವು ಕೇಳಿದ್ದೇವೆ. ಇದಕ್ಕೆ ಕಾರಣ ಪ್ರಾಣಶಕ್ತಿ. ಜೀವದ ಕೊನೆಯ ಕ್ಷಣದಲ್ಲಿ ಇಡೀ ದೇಹ ತಣ್ಣಗಾದರೂ ಅಂಗೈ ಮಾತ್ರ ಬೆಚ್ಚಗಿರುತ್ತದೆ. ಹೀಗಾಗಿ ಪ್ರಾಣಶಕ್ತಿಯು ಅಂಗೈಯಲ್ಲಿ ಹೆಚ್ಚು ಜಾಗೃತವಾಗಿರುತ್ತದೆ.

ಪ್ರತಿಯೊಬ್ಬರಿಗೂ ತಮ್ಮದೇ ಆದ ಪ್ರಭಾವಲಯ ಅಥವಾ ಕಾಂತಿ ಶಕ್ತಿ ಇರುತ್ತದೆ. ಅದು ವ್ಯಕ್ತಿಯ ಸುತ್ತ ಆವರಿಸಿರುತ್ತದೆ. ಇವುಗಳಲ್ಲಿ ಸಕಾರಾತ್ಮಕ ಮತ್ತು ನಕಾರಾತ್ಮಕ ಎಂಬ ಎರಡು ಶಕ್ತಿಗಳಿರುತ್ತವೆ. ನಮ್ಮ ಸುತ್ತಲಿರುವವರಲ್ಲಿ ಯಾವ ಶಕ್ತಿಯ ಪ್ರಭಾವ ಹೆಚ್ಚಾಗಿರುತ್ತದೆಯೋ, ಅದು ನಮ್ಮ ಮೇಲೆಯೂ ಪರಿಣಾಮ ಬೀರುತ್ತದೆ. ಅದಕ್ಕಾಗಿಯೇ ಯಾವಾಗಲೂ "ಒಳ್ಳೆಯವರ ಸಹವಾಸ ಮಾಡು, ಸತ್ಸಂಗದಲ್ಲಿರು" ಎಂದು ಹಿರಿಯರು ಹೇಳುವುದು. ಅನೇಕ ಸಂಶೋಧನಾ ವರದಿಗಳ ಪ್ರಕಾರ, ಹಿರಿಯರ ಹಸ್ತ ಮತ್ತು ಪಾದಸ್ಪರ್ಶದಿಂದ ಶಾರೀರಿಕ, ಮಾನಸಿಕ ಮತ್ತು ವೈಚಾರಿಕ ಬದಲಾವಣೆಗಳು ಉತ್ತಮ ರೀತಿಯಲ್ಲಿ ಆಗುತ್ತವೆ. ಇದರಿಂದ ದೊಡ್ಡವರ ಆಶೀರ್ವಾದ ಸಿಗುವುದಷ್ಟೇ ಅಲ್ಲದೇ, ಹಿರಿಯರ ಉತ್ತಮ ಸ್ವಭಾವಗಳು ಧನಾತ್ಮಕವಾಗಿ ನಮ್ಮನ್ನು ಪ್ರಭಾವಿಸುತ್ತವೆ. ನಾವು ಹಿರಿಯರ ಪಾದ ಸ್ಪರ್ಶಿಸುವಾಗ ನಮ್ಮ ಬಲಗೈ ಅವರ ಬಲಪಾದದ ಮೇಲೂ, ಎಡಗೈ ಅವರ ಎಡಪಾದದ ಮೇಲೂ ಇರಬೇಕು. ಅದೇ ಸಮಯದಲ್ಲಿ ಅವರ ಹಸ್ತ ನಮ್ಮ ಶಿರಸ್ಸಿನ ಮೇಲಿರುತ್ತದೆ. ಈ ಸಂದರ್ಭದಲ್ಲಿ ಒಂದು ವಿದ್ಯುತ್ಕಾಂತೀಯ ಚಕ್ರ ಏರ್ಪಡುತ್ತದೆ. ಇದರಿಂದ ಅವರ ಸಕಾರಾತ್ಮಕತೆಯು ಪಾದ ಮುಟ್ಟಿದವರ ಮೇಲೆ ಪ್ರವಹಿಸುತ್ತದೆ.

ಮಾನವ ಶರೀರದಲ್ಲಿ ಶಿರಸ್ಸನ್ನು ಉತ್ತರ ಧ್ರುವವೆಂದೂ, ಪಾದಗಳನ್ನು ದಕ್ಷಿಣ ಧ್ರುವವೆಂದೂ ಪರಿಗಣಿಸಲಾಗಿದೆ. ಈ ಶಕ್ತಿಯು ಸದಾ ಉತ್ತರ ಧ್ರುವದಿಂದ ದಕ್ಷಿಣ ಧ್ರುವಕ್ಕೆ ಪ್ರವಹಿಸುವುದರ ಮೂಲಕ ಚಕ್ರವನ್ನು ಪೂರ್ಣಗೊಳಿಸುತ್ತದೆ. ಶರೀರದ ದಕ್ಷಿಣ ಧ್ರುವವಾದ ಪಾದಗಳಲ್ಲಿ ಈ ಶಕ್ತಿಯು ಅಧಿಕವಾಗಿರುತ್ತದೆ. ಹೀಗೆ ಪಾದಗಳನ್ನು ಸ್ಪರ್ಶಿಸಿ ನಮಸ್ಕರಿಸುವುದರಿಂದ ಮನೋಬಲ ವೃದ್ಧಿಸುವುದರ ಜೊತೆಗೆ ಮಾನಸಿಕ ನೆಮ್ಮದಿಯೂ ಲಭಿಸುತ್ತದೆ. ಹಿರಿಯರಿಂದ ಪಡೆದ ಆಶೀರ್ವಾದವು ಬದುಕಿನಲ್ಲಿ ಒಂದು ಸುರಕ್ಷಾ ಕವಚದಂತೆ ಕಾರ್ಯನಿರ್ವಹಿಸುತ್ತದೆ ಮತ್ತು ನಮ್ಮ ಚಿಂತನೆಗಳನ್ನು ಸದಾ ಸಕಾರಾತ್ಮಕವಾಗಿಡುತ್ತದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)